22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 293 | ನವದೆಹಲಿ | ಬೆಲೆ ₹ 10 | ಏಪ್ರಿಲ್ 29 2025, ಮಂಗಳವಾರ

## ಒಳಪುಟಗಳಲ್ಲಿ

ಶಾಸಕರ ಅಮಾನತು ಆದೇಶ ಹಿಂತೆಗೆತಕ್ಕೆ ಆಗ್ರಹಿಸಿ ಪ್ರತಿಪಕ್ಷ ನಾಯಕ ಅಶೋಕ್ ನೇತೃತ್ವದ ನಿಯೋಗ ರಾಜ್ಯಪಾಲರಿಗೆ ಮೊರೆ –ಪು.4

ಬಸವ ಜಯಂತಿ ದಿನದಂದು ಪಂಚಾಚಾರ್ಯ ಯುಗ ಮಾನೋತ್ಸವ: ಪಟ್ಟದ್ದೇವರು ವಿರೋಧ – ಪು.5

### ಭಾರತದ ದಾಳಿ ಸನ್ನಿಹಿತ


## ಪಾಕ್ ಅಸ್ತಿತ್ವಕ್ಕೆ ಅಪಾಯ ಬಂದರೆ ಅಣ್ವಸ್ತ್ರ ಬಳಕೆ



**ಇಸ್ಲಾಮಾಬಾದ್, ಏ.28:** ಕಾಶ್ಮೀರದ ಪಹಲ್ಗಾಮ್‌ನಲ್ಲಿ 26 ಪ್ರವಾಸಿಗರ ಹತ್ಯೆಗೈದ ಭಯೋತ್ಪಾದಕ ದಾಳಿಯ ನಂತರ ಭಾರತವು ದಾಳಿಗೆ ಸಜ್ಜಾಗಿದ್ದು, ಯಾವುದೇ ಕ್ಷಣದಲ್ಲಿ ನಡೆಯುವ ಸಾಧ್ಯತೆ ಇದೆ' ಎಂದು ಪಾಕಿಸ್ತಾನದ ರಕ್ಷಣಾ ಸಚಿವ ಖವಾಜ ಮೊಹಮ್ಮದ್ ಆಸಿಫ್ ಹೇಳಿದ್ದಾರೆ. ಪಹಲ್ಗಾಮ್ ದಾಳಿಯ ಹೊಣೆ ಹೊತ್ತಿರುವ ದಿ ರೆಸಿಸ್ಟೆಂಟ್ ಫ್ರಂಟ್‌ಗೆ ಪಾಕಿಸ್ತಾನ ಮೂಲಕ ನಿಷೇಧಿತ ಜೈಶ್ ಎ ಮೊಹಮ್ಮದ್ ಸಂಘಟನೆಯ ಬೆಂಬಲವಿದೆ ಎಂದು ಭಾರತ ವಾದಿಸಿದ್ದು, ಘಟನೆಗೆ ಕಾರಣರಾದ ಪ್ರತಿಯೊಬ್ಬರನ್ನೂ ಹುಡುಕಿ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಖಡಕ್ ಎಚ್ಚರಿಕೆ ನೀಡಿದ್ದಾರೆ. ಪಾಕಿಸ್ತಾನದ ಸೇನೆಯ ಸಿದ್ಧತೆ ಕುರಿತು ಮಾತನಾಡಿರುವ ಸಚಿವ ಆಸಿಫ್. ಭಾರತದ ದಾಳಿಯ ಸಾಧ್ಯತೆ ಕುರಿತು ಸರ್ಕಾರಕ್ಕೆ ಸೇನೆ ಮಾಹಿತಿ ನೀಡಿದೆ. ನಮ್ಮ ಅಸ್ತಿತ್ವಕ್ಕೆ ನೇರ ಅಪಾಯ ಎದುರಾದರೆ ಮಾತ್ರ ಅಣ್ವಸ್ತ್ರ ಉಪಯೋಗಿಸಲಾಗುವುದು' ಎಂದಿದ್ದಾರೆ.

# ಬೇಕಿತ್ತಾ ದುಬಾರಿ ಬಿಜೆಪಿ ಪ್ರತಿಭಟನೆ: ಕಾಂಗ್ರೆಸ್ ವಿನೂತನ ಹೋರಾಟ

**ಬೆಳಗಾವಿ, ಏ.28: ಕೇಂದ್ರ ಸರ್ಕಾರದ ಬೆಲೆ ಏರಿಕೆ ವಿರುದ್ಧ ಕಾಂಗ್ರೆಸ್ ಹಮ್ಮಿಕೊಂಡಿದ್ದ ಬೇಕಿತ್ತಾ ದುಬಾರಿ ಬಿಜೆಪಿ ಎಂಬ ವಿನೂತನ ಪ್ರತಿಭಟನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಿಲಿಂಡರ್‌ಗೆ ಮಾಲಾರ್ಪಣೆ ಮಾಡಿ ಚಾಲನೆ ನೀಡಿದರು.**




ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ರಣದೀಪಸಿಂಗ್ ಸುರ್ಜೇವಾಲಾ, ಸಚಿವರಾದ ಸತೀಶ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ್, ಕೆ.ಎಚ್.ಮುನಿಯಪ್ಪ, ಎಚ್.ಕೆ. ಪಾಟೀಲ, ಎಚ್.ಸಿ. ಮಹಾದೇವಪ್ಪ ಸೇರಿದಂತೆ ಸಚಿವರು, ಶಾಸಕರು, ಕಾಂಗ್ರೆಸ್ ಪದಾಧಿಕಾರಿಗಳು ಪಾಲ್ಗೊಂಡಿದ್ದಾರೆ. ಕೇಂದ್ರ ಸರ್ಕಾರದ ಬೆಲೆ ಏರಿಕೆ ಧೋರಣೆಯನ್ನು ಖಂಡಿಸಿ ಕಾಂಗ್ರೆಸ್ ಆಯೋಜಿಸಿರುವ ಜನಾಕ್ರೋಶ ಸಭೆಯಲ್ಲಿ ಸಿಎಂ ಭಾಷಣ ಮಾಡುವಾಗ, ಬಿಜೆಪಿಯ ಮಹಿಳಾ ಮೋರ್ಚಾದಿಂದ ಪ್ರತಿಭಟನೆ ಮಾಡಿ ಅಡ್ಡಿಪಡಿಸಲಾಯಿತು. ಈ ವೇಳೆ ಸಿಟ್ಟಾದ ಸಿಎಂ ಪೊಲೀಸರು ಮೇಲೂ ಗರಂ ಆದರು. ಇಂತಹ ಬಿಜೆಪಿಯವರ ಗೊಡ್ಡು ಬೆದರಿಕೆಗಳಿಗೆ ನಾವು ಹೆದರಲ್ಲ. ಸಾರ್ವಜನಿಕವಾಗಿ ಅವರನ್ನು ಎದುರಿಸುವ ಶಕ್ತಿ ನಮಗಿದೆ. ಈ ರೀತಿ ದುಷ್ಕೃತ್ಯ ಮಾಡುವವರಿಗೆ ಇಡೀ ಕಾಂಗ್ರೆಸ್ ನಿಂದ ಧಿಕ್ಕಾರ. ಬಿಜೆಪಿಯವರಿಂದ ಶಾಂತಿ ಕದಡುವ, ಸಮಾಜದಲ್ಲಿ ಬೆಂಕಿ ಹಚ್ಚುವ ಕೆಲಸ ಹೀಗೆ ಮಾಡಲಾಗುತ್ತದೆ ಎಂದು ಗುಡುಗಿದರು. ನಮ್ಮ ಕಾರ್ಯಕ್ರಮಕ್ಕೆ ಬಂದು ಅಡ್ಡಿಪಡಿಸಿದ ದುಷ್ಕರಿಗೆ ದೇಶಪ್ರೇಮ ಇಲ್ಲವೇ? ಭಾರತಕ್ಕೆ ಸ್ವಾತಂತ್ರ್ಯ ಬಂದು 52 ವರ್ಷಗಳ ಕಾಲ ಆರ್.ಎಸ್.ಎಸ್ ಕೇಂದ್ರ ಕಚೇರಿ ಮೇಲೆ ಭಾರತದ ಬಾವುಟ ಹಾರಿಸಲೇ ಇಲ್ಲ. ಇದಕ್ಕೆ ನಾಚಿಕೆ ಆಗುವುದಿಲ್ಲವೇ? ಯಾವತ್ತಾದರೂ ಆರ್.ಎಸ್.ಎಸ್ ಕಚೇರಿ ಮುಂದೆ ಹೋಗಿ ಪ್ರತಿಭಟಿಸಿದ್ದೀರ ಸ್ವಾತಂತ್ರ್ಯ ಹೋರಾಟದಿಂದ ಹಿಡಿದು ಆಧುನಿಕ ಭಾರತ ನಿರ್ಮಾಣದವರೆಗೂ ಬಿಜೆಪಿ, ಸಂಘ ಪರಿವಾರದ ಕೊಡುಗೆ ಏನಿದೆ? ನಾಚಿಕೆ ಇಲ್ಲದೆ ದೇಶಭಕ್ತಿ ಬಗ್ಗೆ ಮಾತಾಡ್ತೀರಾ. ಭಾರತೀಯ ಸಮಾಜವನ್ನು ಬಿರುಕು ಮೂಡಿಸಿದ್ದು ಬಿಟ್ಟರೆ ಇಷ್ಟು ವರ್ಷಗಳ ನಿಮ್ಮ ಕೊಡುಗೆ ಏನು? ಎಂದು ಪ್ರಶ್ನಿಸಿದರು. ಕಾಂಗ್ರೆಸ್ ಪಕ್ಷದ ಕಾರ್ಯಕ್ರಮಕ್ಕೆ ಬಂದು ಅಡ್ಡಿಪಡಿಸಿದ ಬಿಜೆಪಿ ಕಾರ್ಯಕರ್ತರಿಗೆ, ಇವರ ಹಿಂದೆ ನಿಂತಿರುವ ಮುಖೇಡಿ ನಾಯಕರಿಗೆ ನೇರವಾಗಿ ಎಚ್ಚರಿಕೆ ಕೊಡುತ್ತಿದ್ದೇನೆ. ನಾವು ಬಿಜೆಪಿ – ಆರ್.ಎಸ್.ಎಸ್ ನ ಗೊಡ್ಡು ಬೆದರಿಕೆಗಳಿಗೆ ಜಗ್ಗಲ್ಲ–ಬಗ್ಗಲ್ಲ ನಿಮ್ಮನ್ನೆಲ್ಲಾ ಸಾರ್ವಜನಿಕವಾಗಿ ಎದುರಿಸುವ ಶಕ್ತಿ ನನಗಿದೆ. ನಮ್ಮ ಕಾರ್ಯಕರ್ತರಿಗೂ ಇದೆ ಎಂದು ಎಚ್ಚರಿಕೆ ನೀಡಿದರು. ಬಿಜೆಪಿಯವರು ಜಾತಿ, ಧರ್ಮದ ಹೆಸರಲ್ಲಿ ಸಮಾಜವನ್ನು ಛಿದ್ರ ಮಾಡುತ್ತಿದ್ದಾರೆ. ಬಿಜೆಪಿಯವರು ಸುಳ್ಳು ಹೇಳಿಕೊಂಡು ತಿರುಗಾಡುತ್ತಿದ್ದಾರೆ. ಆ ಕಾರಣಕ್ಕೆ ಅವರ ಸುಳ್ಳುಗಳನ್ನು ನಾವು ಜನರಿಗೆ ತಿಳಿಸಲು ಪ್ರತಿಭಟನೆಯನ್ನು ಮುಂದುವರಿಸುತ್ತೇವೆ. ಜನ ಅವರ ಮಾತಿಗೆ ಕಿವಿಕೊಡಬಾರದು ಎಂದ ಸಿಎಂ, ಮೇ 1ರಂದು ಹುಬ್ಬಳ್ಳಿಯಲ್ಲಿ ಇದೇ ಕಾರ್ಯಕ್ರಮ ನಡೆಯಲಿದೆ.

### ಬಿಜೆಪಿ ಒಂದೇ ಒಂದು ಸಭೆ ನಡೆಯಲು ಬಿಡುವುದಿಲ್ಲ

ನಮ್ಮ ಪ್ರತಿಭಟನಾ ಕಾರ್ಯಕ್ರಮಕ್ಕೆ ಬಿಜೆಪಿಯು ತಮ್ಮ ಕಾರ್ಯಕರ್ತರನ್ನು ಕಳುಹಿಸಿ ಕಪ್ಪು ಬಾವುಟ ಪ್ರದರ್ಶಿಸಿ ಗದ್ದಲ ಎಬ್ಬಿಸುವ ಪ್ರಯತ್ನ ಮಾಡಿದ್ದಾರೆ. ಬಿಜೆಪಿ ಹಾಗೂ ವಿರೋಧ ಪಕ್ಷದ ನಾಯಕರಿಗೆ ಹೇಳಲು ಬಯಸುತ್ತೇನೆ. ನಿಮ್ಮ ಪ್ರವೃತ್ತಿ ಹೀಗೆ ಮುಂದುವರೆದರೆ ರಾಜ್ಯದಲ್ಲಿ ನೀವು ಒಂದೇ ಒಂದು ಸಭೆ ಮಾಡಲು ನಾವು ಅವಕಾಶ ನೀಡುವುದಿಲ್ಲ. ಇದು ಕಾಂಗ್ರೆಸ್ ಪಕ್ಷದ ಪ್ರತಿಜ್ಞೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ. ಬೆಳಗಾವಿಯ ಸಿಪಿಎಡ್ ಮೈದಾನದಲ್ಲಿ ನಡೆದ ಬೆಲೆ ಏರಿಕೆ ವಿರೋಧಿಸಿ ಹಾಗೂ ಸಂವಿಧಾನ ರಕ್ಷಣೆಗೆ ನಡೆದ ಪ್ರತಿಭಟನಾ ಕಾರ್ಯಕ್ರಮದಲ್ಲಿ ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿ, ನಾನು ನಮ್ಮ ಕಾರ್ಯಕರ್ತರಿಗೆ ಸಂದೇಶ ನೀಡುತ್ತೇನೆ. ಪೆಟ್ರೋಲ್, ಡೀಸೆಲ್, ಚಿನ್ನ, ಕಬ್ಬಿಣ, ಸಿಮೆಂಟ್ ಬೆಲೆ ಏರಿಕೆ ಯಾಕೆ ಆಗಿದೆ ಎಂದು ಬಿಜೆಪಿಯವರನ್ನು ಪ್ರಶ್ನಿಸಿ ಎಂದು ಕರೆ ನೀಡಬೇಕಾಗುತ್ತದೆ. ನೀವು ನಮ್ಮ ವಿರುದ್ಧ ಹೋರಾಟ ಮಾಡುವುದಕ್ಕಿಂತ, ನಾವು ನಿಮ್ಮ ವಿರುದ್ಧ ಹೋರಾಟ ಮಾಡಲು ನನಗೆ ಹೆಚ್ಚಿನ ಕಾರ್ಯಕ್ಷಮತೆ ಇದೆ. ಬಿಜೆಪಿ ನಾಯಕರೇ ನೀವು ನಿಮ್ಮ ಕಾರ್ಯಕರ್ತರಿಗೆ ಬುದ್ಧಿಹೇಳಿ ಸರಿ ಮಾಡಿಕೊಂಡರೆ ಸರಿ, ಇಲ್ಲವಾದರೆ ಎಲ್ಲಾ ರೀತಿಯ ಪ್ರತಿ ಹೋರಾಟಕ್ಕೆ ನಾವು ಸಿದ್ಧರಿದ್ದೇವೆ. ಇದು ಮನವಿಯಲ್ಲ ಎಚ್ಚರಿಕೆ ಎಂದು ಕಿಡಿಕಾರಿದರು.

## ಪಾಕ್‌ಗೆ ಶಸ್ತ್ರ: ಟರ್ಕಿ ನಿರಾಕರಣೆ

**ನವದೆಹಲಿ, ಏ.28:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ, ಟರ್ಕಿ ಯುದ್ಧ ಉಪಕರಣಗಳನ್ನು ಕಳುಹಿಸುವ ಮೂಲಕ ಇಸ್ಲಾಮಾಬಾದ್‌ಗೆ ತನ್ನ ಬೆಂಬಲವನ್ನು ತೋರಿಸಿದೆ. ಆದರೆ ಟರ್ಕಿ ಪಾಕಿಸ್ತಾನಕ್ಕೆ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ಕಳುಹಿಸಲು ನಿರಾಕರಿಸಿದೆ; ಸರಕು ವಿಮಾನವು ದೇಶದಲ್ಲಿ ಇಳಿದಿರುವುದನ್ನು ಒಪ್ಪಿಕೊಂಡಿದೆ.


ತುರ್ಕಿಯಿಂದ ಬಂದ ಸರಕು ವಿಮಾನವು ಇಂಧನ ತುಂಬಲು ಪಾಕಿಸ್ತಾನಕ್ಕೆ ಇಳಿಯಿತು. ನಂತರ ಅದು ತನ್ನ ಮಾರ್ಗದಲ್ಲಿ ಮುಂದುವರಿಯಿತು ಎಂದು ಸಂವಹನ ನಿರ್ದೇಶನಾಲಯ ತಿಳಿಸಿದೆ.

ಪಾಕಿಸ್ತಾನದ ವಿಮಾನ ನಿಲ್ದಾಣಗಳಿಗೆ ಆರು ಅ–130 ವಿಮಾನಗಳಂತಹ ಟರ್ಕಿಶ್ ಮಿಲಿಟರಿ ಹಾರ್ಡ್‌ವೇರ್ ವಿತರಣೆಯು ಟರ್ಕಿ–ಪಾಕಿಸ್ತಾನ–ಚೀನಾ ಸಂಬಂಧಕ್ಕೆ ಸಾಕ್ಷಿಯಾಗಿದೆ. ಪಾಕಿಸ್ತಾನಕ್ಕೆ ಡ್ರೋನ್ಗಳು ಸೇರಿದಂತೆ ಚೀನಾದ ಇತ್ತೀಚಿನ ಮಿಲಿಟರಿ ಸಹಾಯವನ್ನು ಅನುಸರಿಸುವ ಮೂಲಕ ಟರ್ಕಿಯ ಕ್ರಮವು ಈ ಕ್ರಮವನ್ನು ಅನುಸರಿಸುತ್ತದೆ. ಟರ್ಕಿಯ ಹೆಚ್ಚಿನ ನೇರ ಹಸ್ತಕ್ಷೇಪವು ದಕ್ಷಿಣ ಏಷ್ಯಾವನ್ನು ಹೆಚ್ಚು ಮಿಲಿಟರೀಕೃತ ಮತ್ತು ಧ್ರುವೀಕೃತ ಭವಿಷ್ಯದತ್ತ ಎಳೆಯುತ್ತದೆ, ಇದು ಈಗಾಗಲೇ ಪ್ರಕ್ಷುಬ್ಧ ಪ್ರದೇಶದಲ್ಲಿ ಶಾಂತಿಪಾಲನೆಯನ್ನು ಹೆಚ್ಚು ಕಷ್ಟಕರವಾಗಿಸುತ್ತದೆ.

## ರಷ್ಯಾದಿಂದ ತಾತ್ಕಾಲಿಕ ಕದನ ವಿರಾಮ



**ಕೀವ್, ಏ.28:** ಎರಡನೇ ಮಹಾಯುದ್ಧದ ಗೆಲುವಿನ ದಿನದ ಅಂಗವಾಗಿ ಮೇ 8ರಿಂದ 10ರವರೆಗೆ ಉಕ್ರೇನ್‌ನಲ್ಲಿ ಪೂರ್ಣ ಕದನ ವಿರಾಮ ಇರಲಿದೆ ಎಂದು ರಷ್ಯಾ ಸೋಮವಾರ ತಿಳಿಸಿದೆ. ಮೇ 7ರ ಮಧ್ಯರಾತ್ರಿಯಿಂದ ಮೇ 10ರವರೆಗೆ ಕದನ ವಿರಾಮ ಇರಲಿದೆ. ಮೇ 9ರ ವಿಜಯ ದಿನದ ಅಂಗವಾಗಿ ಮಾನವೀಯ ಆಧಾರದ ಮೇಲೆ ರಷ್ಯಾ ಅಧ್ಯಕ್ಷ ವ್ಯಾದಿಮರ್ ಪುಟಿನ್ ಅವರು ಸಂಪೂರ್ಣ ಕದನ ವಿರಾಮ ಘೋಷಿಸಿದ್ದಾರೆ ಎಂದು ಕ್ರೆಮ್ಲಿನ್ ತಿಳಿಸಿದೆ. ಉಕ್ರೇನ್ ಜೊತೆಗಿನ ಯುದ್ಧ ಕೊನೆಗೊಳಿಸಿ, ಶಾಂತಿ ಸ್ಥಾಪಿಸುವ ನಿಟ್ಟಿನಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಮಧ್ಯಸ್ಥಿಕೆ ವಹಿಸುವ ಪ್ರಯತ್ನ ನಡೆಸುತ್ತಿರುವ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ. ಪಾಶ್ಚಿಮಾತ್ಯ ರಾಷ್ಟ್ರಗಳಿಂದ ಉಕ್ರೇನ್‌ಗೆ ಶಸ್ತ್ರಾಸ್ತ್ರ ಪೂರೈಕೆ ನಿಲ್ಲಿಸುವ ತನಕ ಬೇಷರತ್ತಾಗಿ ಕದನ ವಿರಾಮ ಒಪ್ಪಂದಕ್ಕೆ ಮುಂದಾಗಲು ರಷ್ಯಾ ಅಧ್ಯಕ್ಷ ವ್ಯಾದಿಮಿರ್ ಪುಟಿನ್ ನಿರಾಕರಿಸಿದ್ದಾರೆ.

ಕರ್ನಾಟಕ ವೀರಶೈವ–ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ

ನಾಡಿನ ಸಮಸ್ತ ಜನತೆಗೆ

ಸಾಂಸ್ಕೃತಿಕ ನಾಯಕ

ವಿಶ್ವಗುರು ಬಸವಣ್ಣನವರ

ಜಯಂತಿಯ ಶುಭಾಶಯಗಳು

ದಿನಾಂಕ: 30.04.2025, ಬುಧವಾರ

"ಇವನಾರವ, ಇವನಾರವ, ಇವನಾರವನೆಂದೆನಿಸದಿರಯ್ಯಾ!
ಇವ ನಮ್ಮವ, ಇವ ನಮ್ಮವ, ಇವ ನಮ್ಮವನೆಂದಿನಿಸಯ್ಯಾ!
ಕೂಡಲ ಸಂಗಮದೇವಯ್ಯಾ, ನಿಮ್ಮ ಮನೆಯ ಮಗನೆಂದಿನಸಯ್ಯಾ॥"



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು



ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯರವರೊಂದಿಗೆ ಶ್ರೀ ವಿಜಯಾನಂದ ಎಸ್. ಕಾಶಪ್ಪನವರ್, ಮಾನ್ಯ ಅಧ್ಯಕ್ಷರು, ಕರ್ನಾಟಕ ವೀರಶೈವ–ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ ರವರು ನಿಗಮದ ಅಭಿವೃದ್ಧಿ ಕುರಿತು ಚರ್ಚಿಸುತ್ತಿರುವುದು.

ನಿಗಮದ ಯೋಜನೆಗಳು

ಜೀವಜಲ ಯೋಜನೆ
ಸಣ್ಣ ಹಾಗೂ ಅತಿ ಸಣ್ಣ ರೈತರಿಗೆ ಕೊಳವೆಬಾವಿ ಕೊರೆಯಲು ರೂ.3.75 ಲಕ್ಷದಿಂದ ರೂ.4.75 ಲಕ್ಷದವರೆಗೆ ಸಾಲ ಮತ್ತು ಸಹಾಯಧನ

ಕಾಯಕಕಿರಣ ಯೋಜನೆ
ಸ್ವಯಂ ಉದ್ಯೋಗ ಕೈಗೊಳ್ಳಲು ರೂ. 1.00 ಲಕ್ಷದಿಂದ ರೂ.2.00 ಲಕ್ಷದವರೆಗಿನ ಘಟಕ ವೆಚ್ಚದ ಶೇ.20 ರಷ್ಟು ಸಹಾಯಧನ ಹಾಗೂ ಉಳಿಕೆ ಶೇ.80ರಷ್ಟು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲ

ಬಸವ ಬೆಳಗು ಯೋಜನೆ
ವೃತ್ತಿಪರ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ. 1.00 ಲಕ್ಷಗಳ ಮಿತಿಯಲ್ಲಿ ಗರಿಷ್ಠ ರೂ.5.00 ಲಕ್ಷಗಳವರೆಗೆ ವಾರ್ಷಿಕ ಶೇ.2ರ ಬಡ್ಡಿದರದಲ್ಲಿ ಸಾಲ

ವಿದೇಶ ವಿದ್ಯಾವಿಕಾಸ ಯೋಜನೆ
ವಿದೇಶದಲ್ಲಿ ಉನ್ನತ ವ್ಯಾಸಂಗಕ್ಕೆ ಗರಿಷ್ಠ ರೂ.25.00 ಲಕ್ಷಗಳಂತೆ 3 ವರ್ಷಗಳ ಅವಧಿಗೆ ಗರಿಷ್ಠ ರೂ.50.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದಲ್ಲಿ ಸಾಲ

ವಿಭೂತಿ ನಿರ್ಮಾಣ ಘಟಕ
ರೂ.4.00 ಲಕ್ಷಗಳವರೆಗಿನ ಘಟಕ ವೆಚ್ಚದಲ್ಲಿ ರೂ.40,000/– ಸಹಾಯಧನ ಹಾಗೂ ರೂ.3.60 ಲಕ್ಷ ವಾರ್ಷಿಕ ಶೇ.3ರ ಬಡ್ಡಿದರದಲ್ಲಿ ಸಾಲ

ಭೋಜನಾಲಯ ಕೇಂದ್ರ
ಹೋಟೆಲ್ ಉದ್ದಿಮೆಗೆ ರೂ.5.00 ಲಕ್ಷಗಳ ಘಟಕ ವೆಚ್ಚ ರೂ.40,000/– ಸಹಾಯಧನ ಹಾಗೂ ಉಳಿಕೆ ಶೇ.4ರ ಬಡ್ಡಿದರದಲ್ಲಿ ಸಾಲ

ಸ್ವಾವಲಂಬಿ ಸಾರಥಿ ಯೋಜನೆ
ನಾಲ್ಕು ಚಕ್ರಗಳ ವಾಹನವನ್ನು ಖರೀದಿಸಲು ರಾಷ್ಟ್ರೀಕೃತ ಬ್ಯಾಂಕ್ / ಗ್ರಾಮೀಣ ಬ್ಯಾಂಕ್‌ಗಳು / ಹಣಕಾಸು ಸಂಸ್ಥೆಗಳು ಮಂಜೂರು ಮಾಡಿದ ಸಾಲಕ್ಕೆ ಶೇ.50ರಷ್ಟು ಅಥವಾ ಗರಿಷ್ಠ ರೂ.3.00 ಲಕ್ಷಗಳವರೆಗೆ ಸಹಾಯಧನ



ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶ್ರೀ ಶಿವರಾಜ್ ತಂಗಡಗಿ ರವರು ಮತ್ತು ಮಾನ್ಯ ಅಧ್ಯಕ್ಷರು, ಕರ್ನಾಟಕ ವೀರಶೈವ–ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ ಶ್ರೀ ವಿಜಯಾನಂದ ಎಸ್. ಕಾಶಪ್ಪನವರ್ ರವರು ಕಚೇರಿಯ ಉದ್ಘಾಟನೆಯ ಸಂದರ್ಭದಲ್ಲಿ

ಕರ್ನಾಟಕ ವೀರಶೈವ–ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ,
5ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕ ಗೋಪುರ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು–560 001. ದೂರವಾಣಿ: 080–22865522,
ಮೊಬೈಲ್: 9900012351, ಇ–ಮೇಲ್: mdkvldcl@karnataka.gov.in,
ವೆಬ್‌ಸೈಟ್: https://kvldcl.karnataka.gov.in

ಸ್ವ ಸಹಾಯ ಸಂಘಗಳಿಗೆ ಉತ್ತೇಜನ
ವೀರಶೈವ–ಲಿಂಗಾಯತ ಸಮುದಾಯದ ಸ್ವ ಸಹಾಯ ಸಂಘದವರು ಕೈಗೊಳ್ಳುವ ಆರ್ಥಿಕ ಚಟುವಟಿಕೆಗಳಿಗೆ ಈ ಯೋಜನೆಯಡಿ ರಿಯಾಯಿತಿ ಬಡ್ಡಿದರದಲ್ಲಿ ಸಾಲ ಹಾಗೂ ಸಹಾಯಧನವನ್ನು ನೀಡಲಾಗುವುದು.

ಆಹಾರವಾಹಿನಿ
2025–26 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಈ ಯೋಜನೆ ಮುಖೇನ ವಿದ್ಯುತ್ ಚಾಲಿತ ನಾಲ್ಕು ಚಕ್ರಗಳ ವಾಹನ ಖರೀದಿಸಿ, ಆಹಾರ ಕಿಯೋಸ್ಕ್ (Kiosk) ಪ್ರಾರಂಭಿಸಲು ಪ್ರತಿ ಫಲಾನುಭವಿಗೆ ಗರಿಷ್ಠ ರೂ. 3.00 ಲಕ್ಷ ಸಹಾಯಧನವನ್ನು ಒದಗಿಸಲಾಗುವುದು.

"ಎಲ್ಲಾ ಮಾನವರು ಸ್ವತಂತ್ರರಾಗಿಯೇ ಜನಿಸಿದ್ದಾರೆ, ಘನತೆ ಹಾಗೂ ಹಕ್ಕುಗಳಲ್ಲಿ ಸಮಾನರಾಗಿದ್ದಾರೆ. ವಿವೇಕ ಮತ್ತು ಅಂತಕರಣಗಳನ್ನು ಪಡೆದವರಾದ್ದರಿಂದ ಅವರು ಪರಸ್ಪರ ಸಹೋದರ ಭಾವದಿಂದ ವರ್ತಿಸಬೇಕು" –ಇದು ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಸಂಜಯ್ ಬಿ. ಶೆಟ್ಟೆಣ್ಣವರ್, ಭಾ.ಆ.ಸೇ.
ಸರ್ಕಾರದ ಕಾರ್ಯದರ್ಶಿಗಳು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಹಡಗಲಿ ಅರುಣ್‌ಕುಮಾರ್, ಕೆ.ಜಿ.ಎಸ್. (ಹಿ.ಶ್ರೇಣಿ)
ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ವೀರಶೈವ–ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ

# ಸಂಸತ್‌ನಲ್ಲಿ 294ನೇ
# ಬಸವ ಜಯಂತಿ ಕಾರ್ಯಕ್ರಮ





**ಓಂ ಪ್ರಕಾಶ್ ಬಿರ್ಲಾ**
ಲೋಕಸಭಾಧ್ಯಕ್ಷರು







ಇದೇ ಏಪ್ರಿಲ್ 30, 2025ರ ಬುಧವಾರ ಸನ್ಮಾನ್ಯ ಲೋಕಸಭಾಧ್ಯಕ್ಷರಾದ **ಓಂ ಪ್ರಕಾಶ್ ಬಿರ್ಲಾ**ರಿಂದ ಸಂಸತ್ ಆವರಣದ ಪ್ರೇರಣಾ ಸ್ಥಳದಲ್ಲಿ ಮೊದಲ ಬಾರಿಗೆ **"ಬಸವ ಜಯಂತಿ"** ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಚರಿಸಲಾಗುವುದು. ಏಪ್ರಿಲ್ 30ರ ಬೆಳಿಗ್ಗೆ 8 ಘಂಟೆಗೆ **ಓಂ ಪ್ರಕಾಶ್ ಬಿರ್ಲಾ**ರಿಂದ ಬಸವೇಶ್ವರ ಪುತ್ಥಳಿಗೆ ಪುಷ್ಪ ನಮನ ಸಲ್ಲಿಕೆಯಾಗಲಿದೆ. ಈ ಕಾರ್ಯಕ್ರಮದಲ್ಲಿ **ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ, ಸಿ.ಆರ್. ಪಾಟೀಲ್, ಅಶ್ವಿನಿ ವೈಷ್ಣವ್ ಮತ್ತು ಎಚ್. ಡಿ. ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ** ಭಾಗವಹಿಸಲಿದ್ದಾರೆ.

ಸ್ವಾಗತ ಕೋರುವವರು
**ವಿ.ಸೋಮಣ್ಣ**
ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಸಚಿವರು,
ಭಾರತ ಸರ್ಕಾರ



# ಶಾಸಕರ ಅಮಾನತು ಆದೇಶ ಹಿಂತೆಗೆತಕ್ಕೆ ಆಗ್ರಹಿಸಿ ಪ್ರತಿಪಕ್ಷ ನಾಯಕ ಅಶೋಕ್ ನೇತೃತ್ವದ ನಿಯೋಗ ರಾಜ್ಯಪಾಲರಿಗೆ ಮೊರೆ



**ಬಿಜೆಪಿಯ 18 ಶಾಸಕರ ಅಮಾನತಿಗೆ ಸಂಬಂಧಿಸಿದಂತೆ ರಾಜ್ಯಪಾಲರ ಜೊತೆ ಚರ್ಚಿಸಲಾಗಿದೆ. ರಾಜ್ಯಪಾಲರು ಈ ಕುರಿತು ಸರ್ಕಾರ ಹಾಗೂ ಸ್ಪೀಕರ್ ಜೊತೆ ಚರ್ಚಿಸಲಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ತಿಳಿಸಿದರು.**

**ಬೆಂಗಳೂರು, ಏ.28:** ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಬಿಜೆಪಿ ಶಾಸಕರ ನಿಯೋಗ ಇಂದು ರಾಜಭವನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ ವಿಧಾನಸಭೆಯಿಂದ 18 ಬಿಜೆಪಿ ಶಾಸಕರ ಅಮಾನತು ವಾಪಸ್ ಪಡೆಯುವಂತೆ ವಿಧಾನಸಭಾಧ್ಯಕ್ಷರಿಗೆ ಮಾರ್ಗದರ್ಶನ ಮಾಡಿ ಎಂದು ಮನವಿ ಸಲ್ಲಿಸಿತು. ವಿಧಾನಸಭೆಯಿಂದ 18 ಶಾಸಕರನ್ನು ಅಮಾನತು ಮಾಡಿರುವುದು ಪ್ರಜಾಪ್ರಭುತ್ವ ವಿರೋಧಿ ನಡೆಯಾಗಿದೆ. ಹಾಗಾಗಿ ಕೂಡಲೇ ಅಮಾನತು ಅನ್ನು ವಾಪಸ್ ಪಡೆಯುವಂತೆ ವಿಧಾನಸಭಾಧ್ಯಕ್ಷರಿಗೆ ಸೂಚಿಸಿ ಎಂದು ಬಿಜೆಪಿ ಶಾಸಕರ ನಿಯೋಗ ರಾಜ್ಯಪಾಲರಿಗೆ ಮನವಿ ಮಾಡಿತು.

ವಿಧಾನಸಭೆಯಿಂದ 18 ಬಿಜೆಪಿ ಶಾಸಕರನ್ನು ಅಮಾನತು ಮಾಡಿ ಅವರ ಹಕ್ಕುಗಳನ್ನು ಮೊಟಕುಗಳಿಸಲಾಗಿದೆ. ಇದು ಸಂವಿಧಾನ ವಿರೋಧಿ ನಡೆ. ಹಾಗಾಗಿ ಸಭಾಧ್ಯಕ್ಷರಿಗೆ ಸೂಕ್ತ ಮಾರ್ಗದರ್ಶನ ಮಾಡಬೇಕು ಎಂದು ನಿಯೋಗ ಕೋರಿತು. ಬಿಜೆಪಿ ಶಾಸಕರ ನಿಯೋಗದ ಮನವಿಯನ್ನು ಆಲಿಸಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಶಾಸಕರ ಅಮಾನತು ಸಂಬಂಧ ರಾಜ್ಯಪಾಲರಿಗೆ ಮನವಿ ಮಾಡಿದ್ದೇವೆ. ಪ್ರಜಾಪ್ರಭುತ್ವ ವಿರೋಧಿ ನಡೆಯಿಂದ ರಾಜ್ಯ ಸರ್ಕಾರ ಹಿಂದಡಿ ಇಡಬೇಕು. ರಾಜ್ಯಪಾಲರು ಸರ್ಕಾರಕ್ಕೆ ಬುದ್ದಿ ಹೇಳಬೇಕು ಎಂದು ಮನವಿ ಮಾಡಿದ್ದೇವೆ ಎಂದು ಹೇಳಿದ್ದಾರೆ.ಮಾರ್ಚ್ 21ರಂದು ವಿಧಾನಸಭೆಯ 18 ಬಿಜೆಪಿ ಸದಸ್ಯರನ್ನು 6 ತಿಂಗಳ ಕಾಲ ಅಮಾನತು ಮಾಡಿರುವ ಕಾಂಗ್ರೆಸ್ ಸರ್ಕಾರದ ಆದೇಶಕ್ಕೆ ಸಂಬಂಧಿಸಿದಂತೆ ಈ ಪತ್ರ ಬರೆಯಲಾಗುತ್ತಿದೆ. ಅಂದು ನಡೆದ ವಿಧಾನಸಭೆಯ ಅಧಿವೇಶನದಲ್ಲಿ ಹನಿಟ್ರ್ಯಾಪ್ ಮತ್ತು ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ಸೂಕ್ಷ್ಮ ವಿಷಯಗಳಿಗೆ ಸಂಬಂಧಿಸಿದಂತೆ ಚರ್ಚೆಗಳು ತೀವ್ರ ವಾಗ್ವಾದಕ್ಕೆ ಕಾರಣವಾದವು.ವಿರೋಧ ಪಕ್ಷದ ಸದಸ್ಯರಾಗಿ ನಾವು ಸಭಾಧ್ಯಕ್ಷರ ಪೀಠದ ಬಳಿ ಪ್ರತಿಭಟನೆಯ ರೂಪವಾಗಿ ಜಮಾಯಿಸಿದೆವು. ಇದನ್ನು ಸ್ಪೀಕರ್ ಅವರು ತಪ್ಪಾಗಿ ಗ್ರಹಿಸುವುದಲ್ಲದೇ, ಆಡಳಿತ ಪಕ್ಷವೂ ಸಹ ತಪ್ಪಾಗಿ ಗ್ರಹಿಸಿದೆ. ಪ್ರತಿಭಟನೆ ಮಾಡುವಾಗ ನಾವು ಸದನದ ಸಭ್ಯತೆಗೆ ಅಸಮಂಜಸವಾದ ನಡವಳಿಕೆಯನ್ನು ಪ್ರದರ್ಶಿಸಿದ್ದೇವೆ ಎಂದು ಅವರು ಭಾವಿಸಿದ್ದಾರೆ. ಇದರ ಪರಿಣಾಮವಾಗಿ, ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ 348ರ ಅಡಿಯಲ್ಲಿ 18 ಶಾಸಕರನ್ನು ಆರು ತಿಂಗಳ ಕಾಲ ಅಮಾನತುಗೊಳಿಸಲಾಯಿತು ಎಂದು ಬಿಜೆಪಿ ಸ್ಪಷ್ಟನೆ ನೀಡಿದೆ.ಈ ಬಗ್ಗೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಪ್ರತಿಕ್ರಿಯಿಸಿದ್ದು, ಅಮಾನತು ಮಾಡಿದ್ದರ ಬಗ್ಗೆ ರಾಜ್ಯಪಾಲರಿಗೆ ದೂರು ನೀಡಿದ್ದೇವೆ. ಸ್ಪೀಕರ್ ಜತೆ ಮಾತನಾಡುವುದಾಗಿ ರಾಜ್ಯಪಾಲರು ಹೇಳಿದ್ದಾರೆ. ಸಿಎಂ, ಸ್ಪೀಕರ್ ಜೊತೆ ನಾನು, ವಿಜಯೇಂದ್ರ ಮಾತನಾಡಿದ್ದೇವೆ. ರಾಜ್ಯಪಾಲರು ಸಕಾರಾತ್ಮಕವಾಗಿ ಪ್ರತಿಕ್ರಿಯೆ ನೀಡಿದ್ದಾರೆ ಎಂದು ಹೇಳಿದ್ದಾರೆ.ಬಿಜೆಪಿ ಶಾಸಕರ ಅಮಾನತು ಪ್ರಶ್ನಿಸಿ ರಾಜ್ಯಪಾಲರಿಗೆ ದೂರು ವಿಚಾರವಾಗಿ ವಿಧಾನಸೌಧದಲ್ಲಿ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಪ್ರತಿಕ್ರಿಯಿಸಿದ್ದು, ಸರ್ವರಿಗೂ ಅವರವರ ಅನಿಸಿಕೆ ವ್ಯಕ್ತಪಡಿಸುವುದಕ್ಕೆ ಅವಕಾಶ ಇದೆ. ಎಲ್ಲವೂ ಸಮಯ ಮತ್ತು ನಿಯಮದ ಅನುಗುಣವಾಗಿ ನಡೆಯುತ್ತದೆ ಎಂದಿದ್ದಾರೆ.

# 12 ಗಂಟೆಗಳ ಕಾಲ ಭರತ್‌ಭೂಷಣ್ ಪತ್ನಿಯ ವಿಚಾರಣೆ ನಡೆಸಿದ ಎನ್‌ಐಎ



**ಬೆಂಗಳೂರು, ಏ.28:** ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಚುರುಕುಗೊಳಿಸಿರುವ ರಾಷ್ಟ್ರೀಯ ತನಿಖಾ ದಳದ ಅಧಿಕಾರಿಗಳು, ಉಗ್ರರ ದಾಳಿಯಲ್ಲಿ ಮೃತಪಟ್ಟ ಬೆಂಗಳೂರಿನ ಭರತ್ ಭೂಷಣ್ ಮನೆಗೆ ಭೇಟಿ ನೀಡಿ ಘಟನೆ ಕುರಿತು ಮಹತ್ವದ ಮಾಹಿತಿಯನ್ನು ಕಲೆ ಹಾಕಿದ್ದಾರೆ.

ನಗರದ ಮತ್ತಿಕೆರೆಯಲ್ಲಿರುವ ಭರತ್ ಭೂಷಣ್ ಅವರ ನಿವಾಸಕ್ಕೆ ರಾಷ್ಟ್ರೀಯ ತನಿಖಾ ದಳದ ನಾಲ್ವರು ಅಧಿಕಾರಿಗಳು ಭೇಟಿ ನೀಡಿದ್ದು, ಭರತ್ ಅವರ ಪತ್ನಿ ಬಳಿ ಮಾಹಿತಿಯನ್ನು ಪಡೆದುಕೊಂಡಿದ್ದಾರೆ. ಸುಮಾರು 12 ಗಂಟೆಗಳ ಕಾಲ ಭರತ್ ಭೂಷಣ್ ಅವರ ಮನೆಯಲ್ಲಿ ಎನ್‌ಐಎ ಅಧಿಕಾರಿಗಳು ವಿಚಾರಣೆ ನಡೆಸಿದ್ದಾರೆಂದು ತಿಳಿದುಬಂದಿದೆ.

ಸುಜಾತ ಅವರ ಬಳಿ ಸುಮಾರು 6 ಗಂಟೆಗಳ ಕಾಲ ಅಧಿಕಾರಿಗಳು ವಿಚಾರಣೆ ನಡೆಸಿದ್ದು, ಕಾಶ್ಮೀರ ಪ್ರವಾಸದ ಕುರಿತು ಪ್ರಶ್ನೆಗಳನ್ನು ಕೇಳಿದ್ದಾರೆ. ಕಾಶ್ಮೀರಕ್ಕೆ ಹೋಗಿದ್ದು ಯಾವಾಗ?, ಯಾವ ಟ್ರಾವೆಲ್ಸ್ ಮೂಲಕ ಹೋಗಿದ್ದಿರಿ?, ಕಾಶ್ಮೀರದಲ್ಲಿ ಎಲ್ಲಿ ಉಳಿದುಕೊಂಡಿದ್ದಿರಿ?, ಪಹಲ್ಗಾಮ್‌ಗೆ ಯಾವತ್ತೂ ಹೋಗದ್ದಿರಿ? ಎಷ್ಟೋತ್ತಿಗೆ ಹೋಗಿದ್ದಿ? ಎನ್ನುವಂತೆ ಹಲವು ಪ್ರಶ್ನೆಗಳನ್ನು ಕೇಳಿದ್ದಾರೆಂದು ತಿಳಿದುಬಂದಿದೆ. ಇದಲ್ಲದೆ, ಉಗ್ರರು ದಾಳಿ ಮಾಡಿದ ಸಮಯ, ಎಷ್ಟು ಜನ ಇದ್ದರು, ಅವರು ಯಾವ ಭಾಷೆಯಲ್ಲಿ ಮಾತನಾಡಿದರು? ಭರತ್ ಭೂಷಣ್ ಬಳಿ ಏನಾದ್ರೂ ಮಾತನಾಡಿದ್ರಾ?, ನಿಮ್ಮ ಬಳಿ ಏನ್ ಮಾತನಾಡಿದ್ದರು?. ಅವರ ಮುಖದ ಚಹರೆ ನೆನಪು ಇದೆಯಾ?, ಮುಖ ಯಾವ ರೀತಿ ಇತ್ತು, ಮುಖದ ಮೇಲೆ ಯಾವುದಾದರೂ ಮಾರ್ಕ್ ಇತ್ತಾ? ಎಂಬ ಪ್ರಶ್ನೆಗಳ ಕೇಳಿದ್ದಾರೆ ಎನ್ನಲಾಗಿದೆ. ಇದರ ಜೊತೆಗೆ ಸುಮಾರು 14ಕ್ಕೂ ಹೆಚ್ಚು ಶಂಕಿತರ ಫೋಟೋಗಳನ್ನೂ ಅಧಿಕಾರಿಗಳು ತೋರಿಸಿದ್ದು, ಇದರಲ್ಲಿ ಯಾರಾದ್ರೂ ಇದ್ದಾರಾ? ಎಂದು ಪ್ರಶ್ನಿಸಿದ್ದಾರೆ.

ವಿಚಾರಣೆ ವೇಳೆ ಭರತ್ ಪತ್ನಿಯವರ ಹೇಳಿಕೆ ಆಧರಿಸಿ ಎನ್‌ಐಎ ಕೆಲ ರೇಖಾಚಿತ್ರಗಳನ್ನು ಬಿಡಿಸಿದ್ದು, ಈ ರೇಖಾಚಿತ್ರಗಳನ್ನು ತೋರಿಸಿಕೊಂಡು ಇನ್ನಷ್ಟು ಮಾಹಿತಿ ಸಂಗ್ರಹಿಸುತ್ತಿದ್ದಾರೆ.

ಈ ನಡುವೆ ಉಗ್ರರ ದಾಳಿ ವೇಳೆ ಸ್ಥಳೀಯ ಫೋಟೋಗ್ರಾಫರ್ ಒಬ್ಬ ಘಟನೆಯ ಪ್ರತ್ಯಕ್ಷದರ್ಶಿಯಾಗಿದ್ದು, ಉಗ್ರ ದಾಳಿಯ ಸಂಪೂರ್ಣ ವಿಡಿಯೋ ಚಿತ್ರೀಕರಿಸಿದ್ದಾನೆ ಎಂದು ವರದಿಗಳಿಂದ ತಿಳಿದುಬಂದಿದೆ.

ಈ ವಿಡಿಯೋದಿಂದ ಎನ್‌ಐಎ ಮಹತ್ವದ ಮಾಹಿತಿಗಳನ್ನು ಕಲೆಹಾಕುವ ನಿರೀಕ್ಷೆಯಿದೆ ಎಂದು ಹೇಳಲಾಗುತ್ತಿದೆ. ಉಗ್ರರ ಗುಂಡಿನ ಮೊರೆತ ಕೇಳುತ್ತಿದ್ದಂತೆ ಫೋಟೋಗ್ರಾಫರ್ ತನ್ನ ಜೀವ ಉಳಿಸಿಕೊಳ್ಳಲು ಓಡಿದ್ದು, ಈ ವೇಳೆ ಮರವನ್ನೇರಿ ಕುಳಿತು ಸಂಪೂರ್ಣ ವಿಡಿಯೋ ಚಿತ್ರೀಕರಿಸಿದ್ದಾನೆಂದು ಮಾಧ್ಯಮವೊಂದು ವರದಿ ಮಾಡಿದೆ.

# ಬಿಬಿಎಂಪಿ ವಿಭಜನೆಗೆ ಮುಂದಾದ ಸರ್ಕಾರ

ಬೆಂಗಳೂರು, ಏ.28– ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮೂರು ಪಾಲಿಕೆಗಳಾಗಿ ವಿಭಜನೆಯಾಗುವ ಸಾಧ್ಯತೆಗಳಿವೆ. ಗ್ರೇಟರ್ ಬೆಂಗಳೂರು ವಿಧೇಯಕಕ್ಕೆ ರಾಜ್ಯಪಾಲರು ಅನುಮೋದನೆ ನೀಡುತ್ತಿದ್ದಂತೆ ಪಾಲಿಕೆ ವಿಭಜನೆಗೆ ಸರ್ಕಾರ ಮುಂದಾಗಿದೆ. ಏಳು ಪಾಲಿಕೆಗಳಿಗೆ ಮೀರದಂತೆ ಬಿಬಿಎಂಪಿ ವಿಭಜನೆ ಮಾಡಲು ರಾಜ್ಯಪಾಲರು ಸಮ್ಮತಿಸಿರುವ ಹಿನ್ನೆಲೆಯಲ್ಲಿ ಒಂದೂವರೆ ಕೋಟಿ ಜನಸಂಖ್ಯೆಯ ಬೆಂಗಳೂರು ನಗರವನ್ನು ಮೂರು ಪಾಲಿಕೆಗಳನ್ನಾಗಿ ವಿಭಜನೆ ಮಾಡುವುದು ಸರ್ಕಾರದ ಉದ್ದೇಶವಾಗಿದೆ. 50 ಲಕ್ಷ ಜನ ಸಂಖ್ಯೆಗೊಂದು ಪಾಲಿಕೆ ಮಾಡಿ ಅವುಗಳನ್ನು ಕೇಂದ್ರ, ಉತ್ತರ ಮತ್ತು ದಕ್ಷಿಣ ಬೆಂಗಳೂರು ಪಾಲಿಕೆಗಳನ್ನಾಗಿ ವಿಭಜಿಸಲು ತೀರ್ಮಾನಿಸಲಾಗಿದೆ ಎಂದು ತಿಳಿದುಬಂದಿದೆ. ಪ್ರತಿ ಪಾಲಿಕೆ ವ್ಯಾಪ್ತಿಯಲ್ಲಿ 150 ವಾರ್ಡ್‌ಗಳನ್ನು ಮಾಡಿ ಎಲ್ಲ ಮೂರು ಪಾಲಿಕೆಗಳ ಮೇಲ್ವಿಚಾರಣೆಯನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ವಹಿಸಿಕೊಡಲು ಸರ್ಕಾರ ಚಿಂತನೆ ನಡೆಸಿದೆ ಎನ್ನಲಾಗಿದೆ. ಇದರ ಜೊತೆಗೆ ಹೊಸ ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ ಕೆಲ ಹೊಸ ಪ್ರದೇಶಗಳು ಸೇರ್ಪಡೆ ಮಾಡುವುದು ಸರ್ಕಾರ ಉದ್ದೇಶವಾಗಿದೆ. ಈ ಪ್ರಕ್ರಿಯೆಗೆ ಅಧಿಸೂಚನೆ ಹೊರಡಿಸಿ 30 ದಿನಗಳ ಕಾಲ ಸಾರ್ವಜನಿಕ ಆಕ್ಷೇಪಣೆಗೆ ಅವಕಾಶ ನೀಡಿದ ನಂತರ ಅಂತಿಮ ಅಧಿಸೂಚನೆ ಹೊರಡಿಸಲು ಸರ್ಕಾರ ನಿರ್ಧರಿಸಿದೆ. ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ ಬರುವ ಕೆಲವು ಗ್ರಾಪಂಗಳು ಅಸ್ತಿತ್ವ ಕಳೆದುಕೊಳ್ಳಲಿವೆ ಎನ್ನಲಾಗಿದೆ. ಮೂರು ಪಾಲಿಕೆ ರಚನೆಯಾಗುವವರೆಗೆ ರಾಜ್ಯ ಸರ್ಕಾರ ಎಲ್ಲಾ ಹೊಣೆಗಾರಿಕೆ ನಿರ್ವಹಣೆ ಮಾಡಲಿದೆ.

ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ ಎಲೆಕ್ಟ್ರಾನಿಕ್ ಸಿಟಿ, ಅತ್ತಿಬೆಲೆ, ಜಿಗಣಿ ಕೈಗಾರಿಕೆ ಪ್ರದೇಶ, ಬೊಮ್ಮಸಂದ್ರ, ಬಾಗಲೂರು, ರಾಜಾನುಕುಂಟೆ, ಹೆಸರಘಟ್ಟ, ದಾಸನಪುರ, ಮಾಕಳಿ, ತಾವರೆಕೆರೆ, ಕುಂಬಳಗೋಡು, ಕಗ್ಗಲಿಪುರ ಮತ್ತು ಹಾರೋಹಳ್ಳಿಗಳು ಸೇರ್ಪಡೆಗೊಳ್ಳುವ ಸಾಧ್ಯತೆಗಳಿವೆ ಎನ್ನಲಾಗಿದೆ.

# ಬೈರುತ್ ಮೇಲೆ ಇಸ್ರೇಲ್ ವಾಯುದಾಳಿ



**ನವದೆಹಲಿ, ಏ.28:** ಬೈರುತ್ನ ದಕ್ಷಿಣ ಉಪನಗರಗಳಲ್ಲಿರುವ ಹದತ್ ಪ್ರದೇಶದ ಕಟ್ಟಡದ ಮೇಲೆ ಇಸ್ರೇಲ್ ಪಡೆಗಳು ವಾಯುದಾಳಿ ನಡೆಸಿದ್ದು ಅಪಾರ ಪ್ರಮಾಣದ ಹಾನಿ ಸಂಭವಿಸಿದೆ ಎಂದು ಲೆಬನಾನ್ನ ರಾಷ್ಟ್ರೀಯ ಸುದ್ದಿ ಸಂಸ್ಥೆ ವರದಿ ಮಾಡಿದೆ. ಹಿಜ್ಬೊಲ್ಲಾ ಕ್ಷಿಪಣಿಗಳನ್ನು ಸಂಗ್ರಹಿಸಿದ್ದ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಭಾನುವಾರ ಜಂಟಿ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಇಸ್ರೇಲ್ ನಾಯಕರ ಪ್ರಕಾರ, ಕ್ಷಿಪಣಿಗಳು ಇಸ್ರೇಲ್ನ ಭದ್ರತೆಗೆ ಮಹತ್ವದ ಬೆದರಿಕೆ ಒಡ್ಡಿವೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಇಸ್ರೇಲ್ ಯುದ್ಧ ವಿಮಾನಗಳು ಮೂರು ಕ್ಷಿಪಣಿಗಳನ್ನು ಹಾರಿಸಿ ಹ್ಯಾಂಗರ್ ಅನ್ನು ನಾಶಪಡಿಸಿವೆ. ಹತ್ತಿರದ ಕಟ್ಟಡಗಳು ಮತ್ತು ವಾಹನಗಳಿಗೆ ಹಾನಿಯನ್ನುಂಟುಮಾಡಿವೆ ಎಂದು ಲೆಬನಾನ್ನ ರಾಷ್ಟ್ರೀಯ ಸುದ್ದಿ ಸಂಸ್ಥೆ ವರದಿ ಮಾಡಿದೆ. ದಾಳಿಯಿಂದ ಯಾವುದೇ ಸಾವುನೋವುಗಳು ಇನ್ನೂ ವರದಿಯಾಗಿಲ್ಲ.

ಹೆಜ್ಬುಲ್ಲಾ ತನ್ನ ಸಾಮರ್ಥ್ಯಗಳನ್ನು ಬಲಪಡಿಸುವುದನ್ನು ಅಥವಾ ಲೆಬನಾನ್‌ನಲ್ಲಿ ಎಲ್ಲಿಂದಲಾದರೂ ದೇಶಕ್ಕೆ ಬೆದರಿಕೆಯನ್ನು ಒಡ್ಡುವುದನ್ನು ಇಸ್ರೇಲ್ ಸಹಿಸುವುದಿಲ್ಲ ಎಂದು ನೆತನ್ಯಾಹು ಮತ್ತು ಕಾಟ್ಜ್ ಅವರು ಒತ್ತಿ ಹೇಳಿದರು. ಅಂತಹ ಬೆದರಿಕೆಗಳನ್ನು ತಡೆಗಟ್ಟುವ ಜವಾಬ್ದಾರಿಯನ್ನು ಲೆಬನಾನ್ ಸರ್ಕಾರವನ್ನು ವಹಿಸಿಕೊಂಡರು, ಹಿಜ್ಬೊಲ್ಲಾದ ಶಸ್ತ್ರಾಸ್ತ್ರಗಳಿಗೆ ಅದು ನೇರ ಜವಾಬ್ದಾರಿಯನ್ನು ಹೊಂದಿದೆ ಎಂದು ಹೇಳಿದರು. ದಾಳಿಗೂ ಮುನ್ನ, ಇಸ್ರೇಲ್ ಸೇನಾ ವಕ್ತಾರ ಅವಿಚೇ ಅಡ್ರೇ, ಬೈರುತ್‌ನ ದಕ್ಷಿಣ ಉಪನಗರಗಳ ನಿವಾಸಿಗಳಿಗೆ, ವಿಶೇಷವಾಗಿ ಹದತ್ ಜಿಲ್ಲೆಯ ನಿವಾಸಿಗಳಿಗೆ ಸಾಮಾಜಿಕ ಮಾಧ್ಯಮಗಳ ಮೂಲಕ ತುರ್ತು ಸ್ಥಳಾಂತರಿಸುವ ಎಚ್ಚರಿಕೆಯನ್ನು ನೀಡಿದರು. ನಿಮ್ಮ ಸುರಕ್ಷತೆ ಮತ್ತು ನಿಮ್ಮ ಕುಟುಂಬಗಳ ಸುರಕ್ಷತೆಗಾಗಿ, ನಕ್ಷೆಯಲ್ಲಿ ಸೂಚಿಸಿದಂತೆ, ಈ ಕಟ್ಟಡಗಳನ್ನು ತಕ್ಷಣವೇ ಸ್ಥಳಾಂತರಿಸಲು ಮತ್ತು ಕನಿಷ್ಠ 300 ಮೀಟರ್ ದೂರಕ್ಕೆ ಸ್ಥಳಾಂತರಿಸಲು ನಿಮ್ಮನ್ನು ಒತ್ತಾಯಿಸಲಾಗಿದೆ ಎಂದು ಅಡ್ರೇ ಹೇಳಿದರು. ಲೆಬನಾನ್ ಅಧ್ಯಕ್ಷ ಜೋಸೆಫ್ ಔನ್ ದಾಳಿಯನ್ನು ಖಂಡಿಸಿದರು. ಯುದ್ಧದ ನಿಲುಗಡೆ ಒಪ್ಪಂದದ ಖಾತರಿದಾರರಾಗಿ ಯುನೈಟೆಡ್ ಸ್ಟೇಟ್ಸ್ ಮತ್ತು ಫ್ರಾನ್ಸ್ ತಮ್ಮ ಜವಾಬ್ದಾರಿಗಳನ್ನು ವಹಿಸಿಕೊಳ್ಳಬೇಕು. ಇಸ್ರೇಲ್ ತನ್ನ ದಾಳಿಯನ್ನು ತಕ್ಷಣವೇ ನಿಲ್ಲಿಸುವಂತೆ ಒತ್ತಾಯಿಸಬೇಕು ಎಂದು ಹೇಳಿದರು. ಇಸ್ರೇಲ್ ಸ್ಥಿರತೆಯನ್ನು ನಿರಂತರವಾಗಿ ದುರ್ಬಲಗೊಳಿಸುವುದರಿಂದ ಉದ್ವಿಗ್ನತೆ ಹೆಚ್ಚಾಗುತ್ತದೆ. ಪ್ರದೇಶವನ್ನು ಅದರ ಭದ್ರತೆ ಮತ್ತು ಸ್ಥಿರತೆಗೆ ಬೆದರಿಕೆ ಹಾಕುವ ನಿಜವಾದ ಅಪಾಯಗಳಿಗೆ ಒಡ್ಡಲಾಗುತ್ತದೆ ಎಂದು ಅವರು ಎಚ್ಚರಿಸಿದರು. ಲೆಬನಾನ್ನ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯ ಮೇಲೆ ಆಗಾಗ್ಗೆ ಇಸ್ರೇಲಿ ದಾಳಿಗಳು ಯಾವುದೇ ನೆಪದಲ್ಲಿ ಸ್ವೀಕಾರಾರ್ಹವಲ್ಲ ಎಂದು ಹೇಳಿದರು.

ಇಸ್ರೇಲ್ ಮತ್ತು ಹೆಜ್ಬೊಲ್ಲಾ ನಡುವಿನ 14 ತಿಂಗಳ ಗಡಿಯಾಚೆಗಿನ ಯುದ್ಧವನ್ನು ಕೊನೆಗೊಳಿಸುವ ಗುರಿಯನ್ನು ಹೊಂದಿರುವ ನವೆಂಬರ್ 27, 2024 ರಂದು ಜಾರಿಗೆ ಬಂದ ಕದನ ವಿರಾಮದ ಹೊರತಾಗಿಯೂ, ದಕ್ಷಿಣ ಲೆಬನಾನ್ ಮತ್ತು ಬೆಕಾ ಕಣಿವೆಯಲ್ಲಿ ಇಸ್ರೇಲಿ ದಾಳಿಗಳು ಮುಂದುವರೆದಿವೆ. ಲೆಬನಾನ್ನ ಸರ್ಕಾರಿ ಸ್ವಾಮ್ಯದ ರಾಷ್ಟ್ರೀಯ ಸುದ್ದಿ ಸಂಸ್ಥೆಯ ಪ್ರಕಾರ, ಯುದ್ಧ ವಿರಾಮದ ನಂತರ ಇಸ್ರೇಲಿ ಬಾಂಬ್ ದಾಳಿ ಮತ್ತು ಗುಂಡಿನ ದಾಳಿಯಲ್ಲಿ 149 ಜನರು ಸಾವನ್ನಪ್ಪಿದ್ದಾರೆ. ಆದರೆ, ವಿಶ್ವಸಂಸ್ಥೆಯು ಏಪ್ರಿಲ್ 15 ರಂದು ಸತ್ತವರಲ್ಲಿ 71 ಜನರು ನಾಗರಿಕರು ಎಂದು ವರದಿ ಮಾಡಿದೆ.

# ರಫೇಲ್ ಮೆರೈನ್ ವಿಮಾನ ಪೂರೈಕೆ ಭಾರತ–ಫ್ರಾನ್ಸ್ ನಡುವೆ ಒಪ್ಪಂದ



**ನವದೆಹಲಿ, ಏ.28:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ, ಅಂತರ–ಸರ್ಕಾರಿ ಒಪ್ಪಂದದ (ಐಜಿಎ) ಅಡಿಯಲ್ಲಿ ಫ್ರಾನ್ಸ್‌ನಿಂದ 26 ಅತ್ಯಾಧುನಿಕ ರಫೇಲ್ ಯುದ್ಧ ವಿಮಾನಗಳನ್ನು ಸ್ವೀಕರಿಸಲಾಗುತ್ತಿರುವುದರಿಂದ ಭಾರತೀಯ ನೌಕಾಪಡೆಯ ಸಾಮರ್ಥ್ಯವು ಹೆಚ್ಚಾಗಲಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಫ್ರಾನ್ಸ್ ಸಶಸ್ತ್ರ ಪಡೆಗಳ ಸಚಿವ ಸೆಬಾಸ್ಟಿಯನ್ ಲೆಕೊರ್ನು ಅವರು ಐಜಿಎಗೆ ಸಹಿ ಹಾಕಿದ್ದಾರೆ ಮತ್ತು ವಿಮಾನ ಪ್ಯಾಕೇಜ್, ಪೂರೈಕೆ ಪ್ರೋಟೋಕಾಲ್ ಮತ್ತು ಶಸ್ತ್ರಾಸ್ತ್ರಗಳ ಪ್ಯಾಕೇಜ್ ಪೂರೈಕೆ ಪ್ರೋಟೋಕಾಲ್‌ನ ಒಪ್ಪಂದಗಳ ಜೊತೆಗೆ ಒಪ್ಪಂದದ ಪ್ರತಿಗಳನ್ನು ಸೋಮವಾರ ಇಲ್ಲಿ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರ ಸಮ್ಮುಖದಲ್ಲಿ ಭಾರತ ಮತ್ತು ಫ್ರೆಂಚ್ ಅಧಿಕಾರಿಗಳು ವಿನಿಮಯ ಮಾಡಿಕೊಂಡರು.

26 ರಫೇಲ್ ಮೆರೈನ್ ವಿಮಾನಗಳ (22 ಸಿಂಗಲ್–ಸೀಟರ್ ಮತ್ತು ನಾಲ್ಕು ಟ್ವಿನ್–ಸೀಟರ್) ಬೆಲೆ 63,000 ಕೋಟಿ ರೂ. ಎಂದು ಅಂದಾಜಿಸಲಾಗಿದೆ, ಆದರೂ ರಕ್ಷಣಾ ಸಚಿವಾಲಯ ಹೊರಡಿಸಿದ ಅಧಿಕೃತ ಹೇಳಿಕೆಯಲ್ಲಿ ಬೆಲೆಯನ್ನು ಉಲ್ಲೇಖಿಸಲಾಗಿಲ್ಲ. ಐಜಿಎ ತರಬೇತಿ, ಸಿಮ್ಯುಲೇಟರ್, ಸಂಬಂಧಿತ ಉಪಕರಣಗಳು, ಶಸ್ತ್ರಾಸ್ತ್ರಗಳು ಮತ್ತು ಕಾರ್ಯಕ್ಷಮತೆ ಆಧಾರಿತ ಲಾಜಿಸ್ಟಿಕ್ಸ್ ಅನ್ನು ಒಳಗೊಂಡಿದೆ ಎಂದು ಹೇಳಿಕೆ ತಿಳಿಸಿದೆ. ಇದು ಭಾರತೀಯ ವಾಯುಪಡೆಯ (IAF) ಅಸ್ತಿತ್ವದಲ್ಲಿರುವ ರಫೇಲ್ ಫ್ಲೀಟ್‌ಗೆ ಹೆಚ್ಚುವರಿ ಉಪಕರಣಗಳನ್ನು ಸಹ ಒಳಗೊಂಡಿದೆ.

'ಆತ್ಮನಿರ್ಭರ ಭಾರತ'ದ ಮೇಲಿನ ಸರ್ಕಾರದ ಮಹತ್ವಕ್ಕೆ ಅನುಗುಣವಾಗಿ, ಒಪ್ಪಂದವು ಭಾರತದಲ್ಲಿ ಸ್ಥಳೀಯ ಶಸ್ತ್ರಾಸ್ತ್ರಗಳ ಏಕೀಕರಣಕ್ಕಾಗಿ ತಂತ್ರಜ್ಞಾನದ ವರ್ಗಾವಣೆಯನ್ನು ಒಳಗೊಂಡಿದೆ. ಇದು ಭಾರತದಲ್ಲಿ ರಫೇಲ್ ಫ್ಯೂಸ್ಲೇಜ್‌ಗಾಗಿ ತಯಾರಿಕಾ ಸೌಲಭ್ಯವನ್ನು ಸ್ಥಾಪಿಸುವುದರ ಜೊತೆಗೆ ವಿಮಾನ ಎಂಜಿನ್, ಸಂವೇದಕಗಳು ಮತ್ತು ಶಸ್ತ್ರಾಸ್ತ್ರಗಳ ನಿರ್ವಹಣೆ, ದುರಸ್ತಿ ಮತ್ತು ಕೂಲಂಕುಷ ಪರೀಕ್ಷೆ ಸೌಲಭ್ಯಗಳನ್ನು ಸಹ ಒಳಗೊಂಡಿದೆ. ಈ ಒಪ್ಪಂದವು ಈ ಸೌಲಭ್ಯಗಳ ಸ್ಥಾಪನೆ, ಉತ್ಪಾದನೆ ಮತ್ತು ಚಾಲನೆಯಲ್ಲಿ ಹೆಚ್ಚಿನ ಸಂಖ್ಯೆಯ MSMEಗಳಿಗೆ ಸಾವಿರಾರು ಉದ್ಯೋಗಗಳು ಮತ್ತು ಆದಾಯವನ್ನು ಸೃಷ್ಟಿಸುವ ನಿರೀಕ್ಷೆಯಿದೆ. ಫ್ರಾನ್ಸ್‌ನ ಡಸಾಲ್ಟ್ ಏವಿಯೇಷನ್‌ನಿಂದ ತಯಾರಿಸಲ್ಪಟ್ಟ ರಫೇಲ್–ಮೆರೈನ್, ಕಡಲ ಪರಿಸರದಲ್ಲಿ ಸಾಬೀತಾಗಿರುವ ಕಾರ್ಯಾಚರಣೆಯ ಸಾಮರ್ಥ್ಯಗಳನ್ನು ಹೊಂದಿರುವ ವಾಹಕ–ಮೂಲಕ ಯುದ್ಧ–ಸಿದ್ಧ ವಿಮಾನವಾಗಿದೆ. ಈ ವಿಮಾನಗಳ ವಿತರಣೆಯು 2030ರ ವೇಳೆಗೆ ಪೂರ್ಣಗೊಳ್ಳುತ್ತದೆ, ಸಿಬ್ಬಂದಿ ಫ್ರಾನ್ಸ್ ಮತ್ತು ಭಾರತದಲ್ಲಿ ತರಬೇತಿ ಪಡೆಯುತ್ತಾರೆ. ರಫೇಲ್–ಮೆರೈನ್ IAF ನಿರ್ವಹಿಸುತ್ತಿರುವ ರಫೇಲ್‌ನೊಂದಿಗೆ ಸಾಮಾನ್ಯತೆಯನ್ನು ಹೊಂದಿದೆ. ಇದರ ಖರೀದಿಯು ಭಾರತೀಯ ನೌಕಾಪಡೆ ಮತ್ತು IAF ಎರಡಕ್ಕೂ ವಿಮಾನಗಳಿಗೆ ತರಬೇತಿ ಮತ್ತು ಲಾಜಿಸ್ಟಿಕ್ಸ್ ಅನ್ನು ಅತ್ಯುತ್ತಮವಾಗಿಸುವುದರ ಜೊತೆಗೆ ಜಂಟಿ ಕಾರ್ಯಾಚರಣೆಯ ಸಾಮರ್ಥ್ಯವನ್ನು ಗಣನೀಯವಾಗಿ ಹೆಚ್ಚಿಸುತ್ತದೆ. ಈ ಸೇರ್ಪಡೆಯು ಭಾರತೀಯ ನೌಕಾಪಡೆಯ ವಿಮಾನವಾಹಕ ನೌಕೆಗಳಿಗೆ ಪ್ರಬಲವಾದ ಬಲ ಗುಣಕವನ್ನು ಸೇರಿಸಲು ಕಾರಣವಾಗುತ್ತದೆ, ಇದು ಸಮುದ್ರದಲ್ಲಿ ರಾಷ್ಟ್ರದ ವಾಯು ಶಕ್ತಿಯನ್ನು ಗಣನೀಯವಾಗಿ ಹೆಚ್ಚಿಸುತ್ತದೆ.

# ಧರ್ಮ ಕೇಳುತ್ತಾ ಕೊರಲು ಉಗ್ರರಿಗೆ ಸಮಯವಿದೆಯೇ? ಕಾಂಗ್ರೆಸ್ ನಾಯಕ ವಿಜಯ್ ಪ್ರಶ್ನೆಗೆ ಬಿಜೆಪಿ ಆಕ್ರೋಶ



**ಮುಂಬೈ, ಏ.28:** ಪಹಲ್ಯಾಮ್ ಭಯೋತ್ಪಾದಕ ದಾಳಿಗೆ ಸಂಬಂಧಿಸಿ ವಿವಿಧ ರಾಜಕೀಯ ವ್ಯಕ್ತಿಗಳು ಒಂದೊಂದು ರೀತಿಯ ಹೇಳಿಕೆ ನೀಡುವ ಮೂಲಕ ವಿವಾದಕ್ಕೆ ಕಾರಣವಾಗುತ್ತಿದ್ದಾರೆ. ಇದಕ್ಕೆ ಹೊಸ ಸೇರ್ಪಡೆ ಮಹಾರಾಷ್ಟ್ರದ ಕಾಂಗ್ರೆಸ್ ನಾಯಕ ವಿಜಯ್ ವಡೆಟ್ಟಿವಾರ್. ಉಗ್ರರ ದಾಳಿ ಕುರಿತು ಸೋಮವಾರ ಇವರು ನೀಡಿರುವ ಹೇಳಿಕೆಯೊಂದು ಭಾರೀ ವಿವಾದ ಸೃಷ್ಟಿಸಿದೆ.

"ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹೊಣೆಯನ್ನೇ ಕೇಂದ್ರ ಸರ್ಕಾರವೇ ಹೊತ್ತುಕೊಳ್ಳಬೇಕು. ಭಯೋತ್ಪಾದಕರು ಧರ್ಮವನ್ನು ಕೇಳಿಕೊಂಡು ಜನರನ್ನು ಕೊಂದರು ಎಂದು ಸರ್ಕಾರ ಹೇಳುತ್ತಿದೆ. ದಾಳಿ ಮಾಡಲು ಬಂದ ಭಯೋತ್ಪಾದಕರಿಗೆ ಇದೆಲ್ಲದಕ್ಕೂ ಸಮಯವಿರುತ್ತದೆಯೇ?... ಅಂಥದ್ದೆಲ್ಲ ನಡೆದಿಲ್ಲ ಎಂದು ಕೆಲವರು ಹೇಳುತ್ತಿದ್ದಾರೆ.

ಭಯೋತ್ಪಾದಕರಿಗೆ ಯಾವುದೇ ಜಾತಿ ಅಥವಾ ಧರ್ಮವಿಲ್ಲ. ಪಹಲ್ಗಾಮ್ ದಾಳಿಯಂಥ ಹೀನ ಕೃತ್ಯಕ್ಕೆ ಕಾರಣರಾದವರನ್ನು ಮೊದಲ ಬಂಧಿಸಿ, ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ. ಇದು ಇಡೀ ದೇಶದ ಭಾವನೆಯಾಗಿದೆ" ಎಂದು ಸುದ್ದಿಸಂಸ್ಥೆಯೊಂದರ ಜೊತೆ ಮಾತನಾಡುವ ವೇಳೆ ಕಾಂಗ್ರೆಸ್ ನಾಯಕ ವಿಜಯ್ ವಡೆಟ್ಟಿವಾರ್ ಹೇಳಿದ್ದಾರೆ.

ವಡಟ್ಟಿವಾರ್ ಅವರ ಬಾಯಿಯಿಂದ ಈ ಹೇಳಿಕೆ ಹೊರಬೀಳುತ್ತಿದ್ದಂತೆಯೇ ಆಕ್ರೋಶ ಹೊರಹಾಕಿರುವ ಬಿಜೆಪಿ, "ಪಾಕಿಸ್ತಾನಕ್ಕೆ ಕ್ಲೀನ್ ಚಿಟ್ ನೀಡಲು ಕಾಂಗ್ರೆಸ್ ನಾಯಕರು ಸ್ಪರ್ಧೆಗಿಳಿದಿದ್ದಾರೆ" ಎಂದು ಆರೋಪಿಸಿದೆ. ಪಾಕಿಸ್ತಾನಕ್ಕೆ ಕ್ಲೀನ್ ಚಿಟ್ ನೀಡಲು ಕಾಂಗ್ರೆಸ್ ನಾಯಕರು ಒಬ್ಬರ ನಂತರ ಒಬ್ಬರಂತೆ ಪೈಪೋಟಿ ನಡೆಸುತ್ತಿದ್ದಾರೆ. ಈಗ ವಿಜಯ್ ವಾಡಟ್ಟಿವಾರ್ ಅವರು ದಾಳಿಗೆ ಸರ್ಕಾರವೇ ಹೊಣೆ, ಪಾಕಿಸ್ತಾನವಲ್ಲ ಎನ್ನುತ್ತಾ, ಭಯೋತ್ಪಾದಕರು ಧರ್ಮದ ಆಧಾರದ ಮೇಲೆ ಜನರನ್ನು ಕೊಂದಿದ್ದಾರೆ ಎಂಬುದಕ್ಕೆ ಯಾವುದೇ ಪುರಾವೆ ಇದೆಯೇ ಎಂದು ಕೇಳುತ್ತಿದ್ದಾರೆ ಎಂದು ಬಿಜೆಪಿ ವಕ್ತಾರ ಶಹಜಾದ್ ಪೂನಾವಾಲಾ ಅವರು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡ ವೀಡಿಯೊದಲ್ಲಿ ಪ್ರಶ್ನಿಸಿದ್ದಾರೆ. ಇಂಥ ಹೇಳಿಕೆಗಳು ಇದೇ ಮೊದಲೇನಲ್ಲ. ಎನ್ಸಿಪಿ–ಶರದ್ ಪವಾರ್ ಬಣದ ಅನಿಲ್ ದೇಶಮುಖ್ ಅವರೂ ಇದೇ ಮಾದರಿಯ ಹೇಳಿಕೆ ನೀಡಿದ್ದರು. ಕೇಂದ್ರ ಸರ್ಕಾರ ನಡೆಸಿದ ಸರ್ವಪಕ್ಷ ಸಭೆಯಲ್ಲಿ, ದಾಳಿಗೆ ಪಾಕಿಸ್ತಾನವೇ ಜವಾಬ್ದಾರ, ಪಾಕಿಸ್ತಾನದ ವಿರುದ್ಧ ಕ್ರಮ ಕೈಗೊಳ್ಳಿ, ಭಯೋತ್ಪಾದಕರ ವಿರುದ್ಧ ಕ್ರಮ ಕೈಗೊಳ್ಳಿ, ನಾವು ನಿಮ್ಮೊಂದಿಗೆ ನಿಲ್ಲುತ್ತೇವೆ ಎಂದೆಲ್ಲ ಹೇಳುತ್ತಾರೆ. ಸರ್ವಪಕ್ಷ ಸಭೆಯ ನಂತರ, ಪಾಕಿಸ್ತಾನದ ವಿರುದ್ಧ ಕ್ರಮ ಕೈಗೊಳ್ಳಬೇಡಿ ಎನ್ನುತ್ತಾರೆ ಎಂದೂ ಪೂನಾವಾಲ ಆರೋಪಿಸಿದ್ದಾರೆ.

ಪಹಲ್ಯಾಮ್ ಉಗ್ರರ ದಾಳಿಯ ನಂತರ ಪಾಕಿಸ್ತಾನದ ಜೊತೆ ಯುದ್ಧ ಮಾಡುವ ಅಗತ್ಯವಿಲ್ಲ ಎಂದು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀಡಿದ್ದ ಹೇಳಿಕೆಯೂ ಬಿಜೆಪಿಯ ಆಕ್ರೋಶಕ್ಕೆ ಕಾರಣವಾಗಿತ್ತು. ಇದರ ಬೆನ್ನಲ್ಲೇ ಕಾಂಗ್ರೆಸ್ ನಾಯಕರಿಂದ ಈ ವಿವಾದಿತ ಹೇಳಿಕೆ ಹೊರಬಿದ್ದಿದೆ

# ಕಾಂಗ್ರೆಸ್ ನಾಯಕರ ಹೇಳಿಕೆ ದೇಶದ್ರೋಹ: ಸಂಬಿತ್ ಪಾತ್ರ ಕಿಡಿ



**ಭುವನೇಶ್ವರ, ಏ.28:** ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಸಂಪುಟ ಸಚಿವ ಆರ್.ಬಿ. ತಿಮ್ಮಾಪುರ್ ಭಯೋತ್ಪಾದಕರ ಬಗ್ಗೆ ಸಹಾನುಭೂತಿ ಹೊಂದಿರುವಂತೆ ಕಾಣುವ ಹೇಳಿಕೆಗಳನ್ನು ನೀಡುವ ಮೂಲಕ ಭಾರತೀಯರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಬಿಜೆಪಿ ಸಂಸದ ಸಂಬಿತ್ ಪಾತ್ರ ಸೋಮವಾರ ಆರೋಪಿಸಿದ್ದಾರೆ ಮತ್ತು ಅವರ ವೀಸಾಗಳನ್ನು ರದ್ದುಗೊಳಿಸಬೇಕೆಂದು ಒತ್ತಾಯಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಪಾತ್ರ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತ್ರವಲ್ಲ, ಅವರ ಸಚಿವ ಆರ್.ಬಿ. ತಿಮ್ಮಾಪುರ್ ಕೂಡ ಭಯೋತ್ಪಾದಕರು ಧರ್ಮದ ಆಧಾರದ ಮೇಲೆ ಗುಂಡು ಹಾರಿಸಿಲ್ಲ ಎಂದು ಹೇಳಿದ್ದಾರೆ. ಅಂತಹ ಹೇಳಿಕೆಗಳನ್ನು ನೀಡುವ ಮೂಲಕ ಅವರು ಭಯೋತ್ಪಾದಕರ ಬಗ್ಗೆ ಸಹಾನುಭೂತಿಯನ್ನು ಪ್ರೋತ್ಸಾಹಿಸುತ್ತಿದ್ದಾರೆ ಮತ್ತು ಮೃತ ಕುಟುಂಬಗಳ ದುಃಖವನ್ನು ಅಣಕಿಸುತ್ತಿದ್ದಾರೆ ಎಂದರು.

ರಾಷ್ಟ್ರವು ದುಃಖದಲ್ಲಿ ಒಂದಾಗಿರುವ ಸಮಯದಲ್ಲಿ ಭಾರತೀಯ ಜನರು ಮತ್ತು ಸಶಸ್ತ್ರ ಪಡೆಗಳ ನೈತಿಕತೆಯನ್ನು ಮುರಿಯಲು ಕಾಂಗ್ರೆಸ್ ನಾಯಕರು ಪ್ರಯತ್ನಿಸುತ್ತಿದ್ದಾರೆ ಎಂದು ಪತ್ರಾ ಆರೋಪಿಸಿದ್ದಾರೆ. "ಪಾಕಿಸ್ತಾನದ ಮೇಲೆ ದಾಳಿ ಮಾಡಬಾರದು ಎಂದು ಸಿದ್ದರಾಮಯ್ಯ ಹೇಳುತ್ತಾರೆ. ಭಯೋತ್ಪಾದಕರು ಮತ್ತು ಪಾಕಿಸ್ತಾನದ ಬಗ್ಗೆ ನೀವು ಏಕೆ ಸಹಾನುಭೂತಿ ಹೊಂದಿದ್ದೀರಿ? ಈ ಹೇಳಿಕೆ ದೇಶದ್ರೋಹ ಎಂದು ಅವರು ಆರೋಪಿಸಿದರು. ತಿಮ್ಮಾಪುರ್ ಅವರನ್ನು ಪಕ್ಷದಿಂದ ಉಚ್ಚಾಟನೆಗೊಳಿಸ ಬೇಕೆಂದು ಬಿಜೆಪಿ ನಾಯಕರು ಒತ್ತಾಯಿಸಿದರು, ಆದರೆ ಕಾಂಗ್ರೆಸ್ ಹಾಗೆ ಮಾಡುವುದಿಲ್ಲ ಏಕೆಂದರೆ ಇದು ಪಕ್ಷದ ನಿಜವಾದ ಗುಣ ಎಂದು ಹೇಳಿದರು. ಹಿಂದಿನ ಘಟನೆಗಳನ್ನು ಉಲ್ಲೇಖಿಸಿ ಪತ್ರಾ, ರಾಹುಲ್ ಗಾಂಧಿ ಒಮ್ಮೆ ಸರ್ಜಿಕಲ್ ಸ್ಟ್ರೈಕ್‌ಗಳ ಪುರಾವೆಗಳನ್ನು ಕೇಳಿದರು. ಇಂದು, ರಾಹುಲ್ ಗಾಂಧಿ, ಸಿದ್ದರಾಮಯ್ಯ ಮತ್ತು ತಿಮ್ಮಾಪುರ್ ಅವರ ಹೇಳಿಕೆಗಳನ್ನು ಪಾಕಿಸ್ತಾನದ ದೂರದರ್ಶನದಲ್ಲಿ ಪ್ರಸಾರ ಮಾಡಲಾಗುತ್ತಿದೆ, ಅಲ್ಲಿ ಅವರನ್ನು ಪಾಕಿಸ್ತಾನದ ಸಹಾನುಭೂತಿದಾರರು ಎಂದು ಬಿಂಬಿಸಲಾಗುತ್ತಿದೆ. ಅವರ ವೀಸಾಗಳನ್ನು ಸಹ ರದ್ದುಗೊಳಿಸಬೇಕು" ಎಂದು ಪತ್ರಾ ಹೇಳಿದರು.

# ಭಯೋತ್ಪಾದಕರ ದಾಳಿಯಿಂದ ಮೃತಪಟ್ಟವರ ಕುಟುಂಬಕ್ಕೆ ರಾಜ್ಯ ಸರ್ಕಾರ ಕೊಟ್ಟ ಪರಿಹಾರಕ್ಕಿಂತ ಒಂದು ರೂ. ಹೆಚ್ಚು ಪರಿಹಾರ ಸಂಗ್ರಹಿಸಿ ಕೊಡಿ



**ಬೆಂಗಳೂರು, ಏ.28:** ರಾಜ್ಯದ ಕಾಂಗ್ರೆಸ್ ಸರಕಾರಕ್ಕೆ ಮಾನವೀಯತೆಯ ಲವಲೇಶವಾದರೂ ಇದ್ದರೆ ಭಯೋತ್ಪಾದಕರ ದಾಳಿಯಿಂದ ಮೃತಪಟ್ಟ ಎರಡೂ ಕುಟುಂಬಕ್ಕೆ ಕನಿಷ್ಠ 1 ಕೋಟಿಯನ್ನಾದರೂ ಕೊಡುತ್ತಿದ್ದರು ಎಂದು ಬೆಂಗಳೂರು ದಕ್ಷಿಣ ಸಂಸದ ಹಾಗೂ ಯುವ ಮೋರ್ಚಾ ರಾಷ್ಟ್ರೀಯ ಅಧ್ಯಕ್ಷ ತೇಜಸ್ವಿ ಸೂರ್ಯ ಅವರು ತಿಳಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆ ಮೊತ್ತವನ್ನು ಬ್ಯಾಂಕಿನಲ್ಲಿ ನಿರಖು ಠೇವಣಿ ಇಟ್ಟರೆ ಅದರ ಬಡ್ಡಿಯಿಂದ ಅವರ ಕುಟುಂಬ, ಶಿಕ್ಷಣ ನಡೆಯುತ್ತಿತ್ತು. ಪಕ್ಕದ ರಾಜ್ಯದಲ್ಲಿ ಆನೆ ಕಾಲ್ತುಳಿತಕ್ಕೆ ಒಳಗಾಗಿ ಮೃತಪಟ್ಟವರಿಗೆ ಈ ರಾಜ್ಯದ ಮುಖ್ಯಮಂತ್ರಿಗಳು 15 ಲಕ್ಷ ಕೊಟ್ಟಿದ್ದರು. ಆದರೆ, ನಮ್ಮ ರಾಜ್ಯದಲ್ಲಿ ಭೀಭತ್ಸವಾಗಿ, ಭೀಕರವಾಗಿ ಭಯೋತ್ಪಾದಕರ ದಾಳಿಯಲ್ಲಿ ಮೃತರಾದ ಇಬ್ಬರು ಕುಟುಂಬದವರಿಗೆ ಅದಕ್ಕಿಂತ ಜಾಸ್ತಿ ಅಲ್ಲ; ಅಷ್ಟಾದರೂ ಕೊಡುವ ಯೋಗ್ಯತೆ ಈ ಸರಕಾರಕ್ಕೆ ಇಲ್ಲವಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಮುಸ್ಲಿಂ ಓಟಿಗೆ ತಮ್ಮನ್ನು ತಾವು ಮಾರಿಕೊಂಡ ಕಾಂಗ್ರೆಸ್ ಪಕ್ಷದಿಂದ ನಾವು ಇದಕ್ಕಿಂತ ಜಾಸ್ತಿ ನಿರೀಕ್ಷೆ ಮಾಡಲು ಸಾಧ್ಯವೇ ಇಲ್ಲ; ಈ ಕುಟುಂಬಗಳಿಗೆ ಶಕ್ತಿ ಕೊಡುವ ಜವಾಬ್ದಾರಿ ಹಿಂದೂ ಸಮಾಜಕ್ಕೆ ಇದೆ. ಭಯೋತ್ಪಾದಕರ ಕೃತ್ಯ ಖಂಡಿಸಿ ಮೊನ್ನೆ ಬೆಂಗಳೂರು ದಕ್ಷಿಣದಲ್ಲಿ ನಾವು ಪಂಜಿನ ಮೆರವಣಿಗೆ ಮಾಡಿದ್ದೇವೆ. ರಾಜ್ಯ ಸರಕಾರ ಕೊಟ್ಟ ಪರಿಹಾರಕ್ಕಿಂತ ಒಂದು ರೂ. ಹೆಚ್ಚು ಪರಿಹಾರವನ್ನು ಸಂಗ್ರಹಿಸಿ ಕೊಡಬೇಕೆಂದು ಆ ಸಭೆಯ ಕೊನೆಯಲ್ಲಿ ಮನವಿ ಮಾಡಿದ್ದೆ. ಜನರು ಈಗಾಗಲೇ ಸುಮಾರು 20 ಲಕ್ಷ ರೂ. ನೀಡಿದ್ದಾರೆ. ನಾಳೆ ಬಿಜೆಪಿ ವತಿಯಿಂದ ಭರತ್ ಭೂಷಣ್ ಅವರ ಮನೆಗೆ 10 ಲಕ್ಷದ ಒಂದು ರೂ. ಮತ್ತು ಮಂಜುನಾಥ್ ಅವರ ಮನೆಗೆ ಒಂದೆರಡು ದಿನದಲ್ಲಿ 10 ಲಕ್ಷದ ಒಂದು ರೂ. ಯನ್ನು ಕೊಡಲಿದ್ದೇವೆ ಎಂದು ಪ್ರಕಟಿಸಿದರು.

ಶಿಕ್ಷಣ–ಆರೋಗ್ಯದ ಜವಾಬ್ದಾರಿ: ಆರ್.ವಿ.ವಿಶ್ವವಿದ್ಯಾಲಯವು ನನ್ನ ಮನವಿಗೆ ಸ್ಪಂದಿಸಿ ಪಲ್ಲವಿ ಮಂಜುನಾಥ್ ಅವರಿಗೆ ಪತ್ರ ಬರೆದಿದೆ. ಅವರ ಮಗ ಅಭಿಜಯನಿಗೆ ಬಿ.ಕಾಂ, ಸ್ನಾತಕೋತ್ತರ ಪದವಿ ಪಡೆಯಲು ಈ ಶಿಕ್ಷಣ ಸಂಸ್ಥೆಯು ಅವನ ಸಂಪೂರ್ಣ ಶಿಕ್ಷಣ ವೆಚ್ಚವನ್ನು ಭರಿಸಲಿದೆ ಎಂದು ತಿಳಿಸಿದ್ದಾರೆ. ಇದನ್ನು ಅವನ ತಾಯಿಗೆ ತಲುಪಿಸುತ್ತೇನೆ ಎಂದು ತೇಜಸ್ವಿ ಸೂರ್ಯ ತಿಳಿಸಿದರು. ಭರತ್ ಭೂಷಣ್ ಅವರ 3 ವರ್ಷದ ಮಗುವಿಗೆ ಕನಕಪುರ ರಸ್ತೆಯ ಟ್ರಾನ್ಸೆಂಡ್ ಎಂಬ ಶಿಕ್ಷಣ ಸಂಸ್ಥೆಯು ಒಂದನೇ ತರಗತಿಯಿಂದ 12ನೇ ತರಗತಿವರೆಗೆ ಸಿಬಿಎಸ್‌ಇ ಶಿಕ್ಷಣದಡಿ ವಿದ್ಯಾಭ್ಯಾಶ ಕೊಡುವ ಜವಾಬ್ದಾರಿಯನ್ನು ಹೊರಲು ಮುಂದಾಗಿದೆ. ಈ ಕುರಿತು ಸುಜಾತಾ ಭರತ್ ಭೂಷಣ್ ಅವರಿಗೆ ಪತ್ರ ಬರೆದಿದೆ. ಮುಂದಿನ 11 ವರ್ಷಗಳವರೆಗೆ ಈ ಎರಡೂ ಕುಟುಂಬಗಳ ತಾಯಿ ಮತ್ತು ಮಕ್ಕಳ ಆರೋಗ್ಯವನ್ನು ಸಂಪೂರ್ಣವಾಗಿ ಬೆಂಗಳೂರಿನ ಮಹಾವೀರ ಜೈನ್ ಆಸ್ಪತ್ರೆಯವರು ನೋಡಿಕೊಳ್ಳುತ್ತಾರೆ. ಅವರೂ ಈ ಕುರಿತು ಪತ್ರ ಬರೆದಿದ್ದಾರೆ ಎಂದು ವಿವರಿಸಿದರು. ಈ ಮೂರೂ ಸಂಸ್ಥೆಗಳಿಗೆ ಅಭಿನಂದನೆ– ಕೃತಜ್ಞತೆ ಸಲ್ಲಿಸಿದರು.

ರಾಜ್ಯದಲ್ಲಿರುವ ದೇವಸ್ಥಾನಗಳು, ಹಿಂದೂ ಮಠಮಾನ್ಯಗಳು, ಹಿಂದೂ ದಾನಿಗಳು, ಉದ್ಯಮಿಗಳು ನಮ್ಮ ಜವಾಬ್ದಾರಿಯನ್ನು ತೋರಿಸಬೇಕಿದೆ. ಇದನ್ನು ನಾವೆಲ್ಲರೂ ಮಾಡಬೇಕೆಂದು ಹೇಳಿದರು. ಈ ಭಯೋತ್ಪಾದಕರು ಕೇವಲ ಭಾರತ ಸರಕಾರವನ್ನಷ್ಟೇ ಅಲ್ಲ; ಸಂಪೂರ್ಣ ಹಿಂದೂ ಸಮಾಜವನ್ನು ಗುರಿಯನ್ನಾಗಿ ಮಾಡಿವೆ. ಇವತ್ತು ರಾಜ್ಯ ಸರಕಾರವು ಈ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟ ಕುಟುಂಬಕ್ಕೆ 10 ಲಕ್ಷ ರೂ. ಪರಿಹಾರ ಘೋಷಿಸಿದೆ ಎಂದು ಟೀಕಿಸಿದರು.

ಮುಖ್ಯಮಂತ್ರಿಗಳಿಗೆ ಇಂಥ ಸಲಹೆ ಕೊಟ್ಟವರು ಯಾರು ಮುಖ್ಯಮಂತ್ರಿಗಳು ಮಾನವೀಯತೆಯ, ವಾಸ್ತವಿಕತೆಯ ಎಲ್ಲ ಸಂಪರ್ಕಗಳನ್ನು ಕಳಕೊಂಡಿದ್ದಾರಾ ಎಂಬ ಪ್ರಶ್ನೆ ನನ್ನನ್ನು ಕಾಡುತ್ತಿದೆ; ಮಂಜುನಾಥ್ ಅವರ ಮನೆಯಲ್ಲಿ ಪಿಯುಸಿಯಲ್ಲಿ ಶೇ.97 ಅಂಕ ಪಡೆದ ಒಬ್ಬ ಹುಡುಗ ಇದ್ದಾನೆ. ಕನಿಷ್ಠವೆಂದರೂ 8–10 ವರ್ಷಗಳ ಶಿಕ್ಷಣ ಅವನಿಗೆ ಬಾಕಿ ಇದೆ ಎಂದು ತಿಳಿಸಿದರು. ಬೆಂಗಳೂರಿನ ಭರತ್ ಭೂಷಣ್ ಅವರ ಮನೆಯಲ್ಲಿ 3 ವರ್ಷದ ಮಗು ಇದೆ. ಅವರ ತಾಯಿಯೇ 25 ವರ್ಷ ಆ ಮಗುವಿನ ಶಿಕ್ಷಣದ ಜವಾಬ್ದಾರಿ ಹೊರಬೇಕಿದೆ ಎಂದು ಗಮನ ಸೆಳೆದರು. ರಾಜ್ಯ ವಕ್ತಾರರಾದ ಅಶೋಕ್ ಗೌಡ, ಮೋಹನ್ ವಿಶ್ವ, ಸುರಭಿ ಹೊದಿಗೆರೆ ಅವರು ಭಾಗವಹಿಸಿದ್ದರು.



ಬೆಂಗಳೂರಿನಲ್ಲಿ ಸೋಮವಾರ ನಡೆದ ಹಜ್ ವಿಮಾನಗಳ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಜ್ ಯಾತ್ರಿಕರನ್ನು ಸ್ವಾಗತಿಸಿದರು.

# ಮುಂದಿನ ಪೀಳಿಗೆಗೆ ತಂತ್ರಜ್ಞಾನದ ಸದ್ಬಳಕೆ ಪರಿಚಯ ಅಗತ್ಯ

**ಬೆಂಗಳೂರು,ಏ.28:** ಭೌಗೋಳಿಕ ಮಾಹಿತಿ ತಂತ್ರಜ್ಞಾನ (ಜಿಐಟಿ) ಎಂಬ ಮಹತ್ವದ ಸಂಪತ್ತನ್ನು ಮುಂದಿನ ಪೀಳಿಗೆಗೆ ಸರಿಯಾದ ಜ್ಞಾನದೊಂದಿಗೆ ಹಾಗೂ ತಂತ್ರಜ್ಞಾನದ ಸದ್ಬಳಕೆ ಪರಿಚಯಿಸುವುದು ಅಗತ್ಯವಾಗಿದೆ, ಎಂದು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್ ರವರು ತಿಳಿಸಿದರು.



ಭಾರತೀಯ ವಿಜ್ಞಾನ ಸಂಸ್ಥೆಯ ಜೆ.ಎನ್. ಟಾಟಾ ಸಭಾಂಗಣದಲ್ಲಿ ಇಂದು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಭಾರತೀಯ ವಿಜ್ಞಾನ ಸಂಸ್ಥೆ ಆವರಣ, ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಯೋಗದಿಂದ ಆಯೋಜಿಸಲಾಗಿದ್ದ "ಜಿಲ್ಲಾ ಮಟ್ಟದ ಯೋಜನೆಗಾಗಿ ಭೌಗೋಳಿಕ ಮಾಹಿತಿ ತಂತ್ರಜ್ಞಾನದ ಬಳಕೆ" ಎಂಬ ರಾಜ್ಯಮಟ್ಟದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.ನಗರಗಳಲ್ಲಿ ಕೆರೆಗಳ ನಿರ್ಮಾಣ, ಮಳೆಯ ನೀರಿನ ಸಂಗ್ರಹಣೆ ಮತ್ತು ವಿವಿಧ ಭೌಗೋಳಿಕ ಸಂಪನ್ಮೂಲಗಳ ಸಮರ್ಪಕ ಬಳಕೆಗೆ ಭೌಗೋಳಿಕ ಮಾಹಿತಿ ತಂತ್ರಜ್ಞಾನವು ನೆರವಾಗುತ್ತದೆ. ಮಣ್ಣಿನ ಫಲವತ್ತತೆಯ ನಿರ್ವಹಣೆ ಹಾಗೂ ಕೃಷಿಗೆ ಸಂಬಂಧಿಸಿದ ವಿವಿಧ ಅಂಶಗಳನ್ನೂ ನಕ್ಷೆಗಳ ಸಹಾಯದಿಂದ ತಿಳಿದುಕೊಳ್ಳಬಹುದಾಗಿದೆ ಎಂದರು."

ಜಲವಿಲ್ಲದೆ ಜೀವನ ಸಾಧ್ಯವಿಲ್ಲ. ನೀರಿನಂತಹ ಅಮೂಲ್ಯ ಸಂಪತ್ತನ್ನು ಸಂರಕ್ಷಿಸಿ, ಸುಸ್ಥಿರತೆಯೊಂದಿಗೆ ಮುಂದಿನ ಪೀಳಿಗೆಗೆ ನೀಡುವುದು ನಮ್ಮ ಕರ್ತವ್ಯ," ಎಂದು ಅವರು ಕಿವಿ ಮಾತನಾಡಿದರು.ನಗರದ ಸಮಗ್ರ ಅಭಿವೃದ್ಧಿಗೆ ಎಲ್ಲಾ ಇಲಾಖೆಗಳ ಸಹಕಾರ ಅಗತ್ಯವಾಗಿದೆ. "ಕಾರ್ಯಾಗಾರದಲ್ಲಿ ನೀಡಲಾದ ಮಾರ್ಗಸೂಚಿಗಳನ್ನು ಸರಿಯಾಗಿ ಅಳವಡಿಸಿಕೊಳ್ಳಿ ಮತ್ತು ಈ ತಂತ್ರಜ್ಞಾನವನ್ನು ಇತರರಿಗೂ ಪರಿಚಯಿಸಿ" ಎಂದು ಅವರು ಅಧಿಕಾರಿಗಳಿಗೆ ಸಲಹೆ ನೀಡಿದರು.ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ನಿರ್ದೇಶಕ ಸದಾಶಿವ ಪ್ರಭು ಅವರು ಮಾತನಾಡಿ, 24 ಇಲಾಖೆಗಳ ಅಧಿಕಾರಿಗಳು ಈ ಕಾರ್ಯಾಗಾರದಲ್ಲಿ ಭೌಗೋಳಿಕ ಮಾಹಿತಿ ತಂತ್ರಜ್ಞಾನದ ದತ್ತಾಂಶವನ್ನು ಉಪಯೋಗಿಸಿ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.ಜಿ.ಐ.ಟಿ ವ್ಯವಸ್ಥೆ ತುರ್ತು ಪರಿಸ್ಥಿತಿಗಳಲ್ಲಿಯೂ ಸಹ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬಲ್ಲದು. ಕೃಷಿ, ತೋಟಗಾರಿಕೆ, ಪ್ರವಾಸೋದ್ಯಮ ತಾಣಗಳ ಸ್ಥಳ ಮಾಹಿತಿ ಸೇರಿದಂತೆ ಹಲವಾರು ಮಾಹಿತಿಗಳನ್ನು ಈ ವ್ಯವಸ್ಥೆಯ ಮೂಲಕ ಮೊಬೈಲ್‌ನಲ್ಲಿ ಸುಲಭವಾಗಿ ಪಡೆಯಬಹುದಾಗಿದೆ ಎಂದರು.ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಕಾರ್ಯದರ್ಶಿ ಪ್ರೊ. ಪ್ರವೀಣ್ ರಾಮಮೂರ್ತಿ, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಯು.ಟಿ ವಿಜಯ್, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ವಿಜ್ಞಾನಿಯಾದ ಸುನಿಲ್ ಎಸ್.ಕುಲಕರ್ಣಿ, ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರ ಬೆಂಗಳೂರು ವೈಜ್ಞಾನಿಕ ಅಧಿಕಾರಿ ಡಾ.ಶಿವಕುಮಾರ್ ನಾಯ್ಕಲ್ ಸೇರಿದಂತೆ ರಾಜ್ಯ ಮಟ್ಟದ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅತ್ಯಾಚಾರ ಆರೋಪ ಪ್ರಕರಣ: ಪ್ರಜ್ವಲ್ ಜೈಲುವಾಸಕ್ಕೆ 1 ವರ್ಷ

**ಬೆಂಗಳೂರು,ಏ.28:** ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅತ್ಯಾಚಾರ ಆರೋಪ ಪ್ರಕರಣ ಸಂಬಂಧ ಜೈಲು ಸೇರಿ ಒಂದು ವರ್ಷ ಕಳೆದಿದೆ. ಪ್ರಕರಣದಲ್ಲಿ ಬಂಧಿಯಾಗಿರುವ ಪ್ರಜ್ವಲ್, ಜೈಲಿನಿಂದ ಹೊರಬರಲು ಹೆಣಗಾಡುತ್ತಿರುವ ಮಧ್ಯೆಯೇ ಇದೀಗ ಮತ್ತೊಂದು ತಲೆನೋವು ಆರಂಭವಾಗಿದೆ.ಪ್ರಜ್ವಲ್ ಪರ ವಕೀಲ ಜಿ. ಅರುಣ್ ಅವರು ವಕಾಲತ್ತಿನಿಂದ ನಿವೃತ್ತಿ ಹೊಂದಿ ಜಡ್ಜ್ ಅವರಿಗೆ ಮೆಮೋ ಸಲ್ಲಿಕೆ ಮಾಡಿದ್ದಾರೆ. ಆದ್ದರಿಂದ ತನಗೆ ಹೊಸ ವಕೀಲರನ್ನು ನೇಮಿಸಿಕೊಳ್ಳಲು ಸಮಯ ನೀಡುವಂತೆ ಪ್ರಜ್ವಲ್ ರೇವಣ್ಣ ಕೋರ್ಟ್‌ಗೆ ಮನವಿ ಮಾಡಿದ್ದಾರೆ. ಹೆಚ್ಚು ಸಮಯ ನೀಡಲ್ಲ. ನಾಳೆಯವರೆಗೆ ನೇಮಿಸಿಕೊಳ್ಳಲು ಮಾತ್ರ ಅವಕಾಶ ನೀಡುವುದಾಗಿ ಕೋರ್ಟ್ ಹೇಳಿದೆ. ಇದರಿಂದ ಪ್ರಜ್ವಲ್ ರೇವಣ್ಣಗೆ ಮತ್ತೆ ಶಾಕ್ ಆಗಿದೆ.ಪ್ರಜ್ವಲ್ ಕೇಸ್‌ನಲ್ಲಿ ವಕೀಲ ಜಿ ಅರುಣ್ ಅವರು ವಕಾಲತ್ತಿನಿಂದ ನಿವೃತ್ತಿ ಪಡೆದಿರುವ ಕಾರಣಕ್ಕೆ ಹೊಸ ವಕೀಲರನ್ನು ನೇಮಿಸಿಕೊಳ್ಳಲು ಪ್ರಜ್ವಲ್‌ಗೆ ಹೆಚ್ಚು ಕಾಲಾವಕಾಶ ನೀಡಲು ಜನಪ್ರತಿನಿಧಿಗಳ ವಿಶೇಷ ಕೋರ್ಟ್ ನಿರಾಕರಿಸಿದೆ. ಇದೀಗ ಪುತ್ರನ ಪರವಾಗಿ ಭವಾನಿ ರೇವಣ್ಣಗೆ ಕೋರ್ಟ್ ಗೆ ಹಾಜರಾಗಿ ಮನವಿ ಮಾಡಿದ್ದಾರೆ. ನಾಳೆ ಒಳಗಾಗಿ ನೇಮಿಸಿಕೊಳ್ಳಲು ಮಾತ್ರ ಅವಕಾಶ ಎಂದು ಕೋರ್ಟ್ ಕಡ್ಡಿಮುರಿದಂತೆ ತಿಳಿಸಿದೆ.ಪ್ರಜ್ವಲ್ ರೇವಣ್ಣ ವಿರುದ್ಧದ ಪ್ರಕರಣದ ವಿಚಾರಣೆಯಿಂದ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ನ ನ್ಯಾಯಾಧೀಶ ಗಜಾನನ ಭಟ್ ಅವರನ್ನು ಬದಲಿಸುವಂತೆ ಪ್ರಜ್ವಲ್ ಪರ ವಕೀಲರು ಕೋರಿದ್ದ ಜ್ಞಾಪನಾ ಪತ್ರ ಪ್ರಧಾನ ಜಿಲ್ಲಾ ನ್ಯಾಯಾಧೀಶರು ಕಳೆದ ಬುಧವಾರ ತಿರಸ್ಕರಿಸಿದ್ದರು.



ಈ ಬೆಳವಣಿಗೆ ನಂತರದಲ್ಲಿ ಅರುಣ್ ಅವರು ವಕಾಲತ್ತಿನಿಂದ ನಿವೃತ್ತಿ ಹೊಂದಿ ಜಡ್ಜ್ ಅವರಿಗೆ ಮೆಮೋ ಸಲ್ಲಿಸಿದ್ದರು.2024ರ ಏ.22ರಂದು ಪ್ರಜ್ವಲ್ ಗೆ ಸಂಬಂಧಿಸಿದ ಅಶ್ಲೀಲ ವೀಡಿಯೊಗಳು ಸೋಷಿಯಲ್ ಮೀಡಿಯಾಗಳಲ್ಲಿ ವೈರಲ್ ಆಗತೊಡಗಿದವು. ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಈ ವೀಡಿಯೊಗಳಲ್ಲಿ ಕಾಣಿಸಿಕೊಂಡವರು ಈವರೆಗೂ ಚೇತರಿಸಿಲ್ಲ ಎಂದು ವರದಿಯಾಗಿದೆ.

# ಭಾರತ ಯುದ್ಧ ಮಾಡಿದರೆ ಪಾಕಿಸ್ತಾನ ಒಂದೇ ವಾರದಲ್ಲಿ ಸರ್ವನಾಶ

**ಬೆಂಗಳೂರು,ಏ.28:** ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರ ದಾಳಿಯಿಂದ 26 ಜನ ಪ್ರವಾಸಿಗರು ಬಲಿಯಾಗಿದ್ದು, ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಶಾಸಕ ಬಸವರಾಜ್ ರಾಯರೆಡ್ಡಿ ಹೇಳಿಕೆ ನೀಡಿದ್ದು, ಭಾರತ ಏನಾದರೂ ಪಾಕಿಸ್ತಾನದ ಮೇಲೆ ಯುದ್ಧ ಮಾಡಿದರೆ ಒಂದೇ ವಾರದಲ್ಲಿ ಸರ್ವನಾಶವಾಗುತ್ತದೆ ಎಂದು ಹೇಳಿಕೆ ನೀಡಿದರು. ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಏಕಾಏಕಿ ಪಾಕಿಸ್ತಾನ ಉಗ್ರರು ನಮ್ಮ ದೇಶಕ್ಕೆ ನುಗ್ಗಿ ದಾಳಿ ಮಾಡಿದ್ದಾರೆ. ನಾವೆಲ್ಲರೂ ಈ ಒಂದು ಘಟನೆ ಖಂಡಿಸಬೇಕಾದ ವಿಚಾರ. ಕೇಂದ್ರಕ್ಕೆ ನಮ್ಮ ನಾಯಕರು ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ. ಮೊದಲು ಭದ್ರತೆ ಸರಿ ಮಾಡಿ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಆದರೆ ಸಿಎಂ ಸಿದ್ದರಾಮಯ್ಯ ವಿರುದ್ಧ ಆರ್ ಅಶೋಕ್, ಬಿ.ವೈ.ವಿಜಯೇಂದ್ರ ಮಾತನಾಡುತ್ತಿದ್ದಾರೆ. ಕೇಂದ್ರ ಸರ್ಕಾರವೇ ಭದ್ರತಾ ವೈಫಲ್ಯ ಅಂತ ಒಪ್ಪಿಕೊಂಡಿದೆ.

ಅನಿವಾರ್ಯ ಇದ್ದರೆ ಯುದ್ಧ ಮಾಡಿ ಅಂತ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ನಾಳೆ ಇಂದಲೇ ಯುದ್ಧ ಶುರು ಮಾಡಿ ಯಾರು ಬೇಡ ಅಂದ್ರು? ಉಗ್ರರ ಕ್ಯಾಂಪ್ ಮೇಲೆ ಬಾಂಬ್ ಹಾಕಿ. ಕಾಶ್ಮೀರದಲ್ಲಿ ಸಿಲುಕಿದವರನ್ನು ನಾವೇ ವಿಮಾನದ ಮೂಲಕ ಕರೆತಂದಿದ್ದೇವೆ. ಮೊದಲು ಪ್ರಧಾನಿ ನರೇಂದ್ರ ಮೋದಿ ಕಾಶ್ಮೀರಕ್ಕೆ ಭೇಟಿ ನೀಡಬೇಕು. ಕೂಡಲೇ ವಿಶೇಷ ಸಂಸತ್ ಅಧಿವೇಶನ ಕರೆಯಬೇಕು. ಪಾಕಿಸ್ತಾನ ಉಗ್ರಗಾಮಿಗಳ ತಾಣ ಎಂದು ಘೋಷಣೆ ಮಾಡಬೇಕು ಎಂದು ಆಗ್ರಹಿಸಿದರು.ಸೇನೆಯ ನೇಮಕಾತಿಯಲ್ಲಿ 1 ಲಕ್ಷ 45 ಸಾವಿರ ಹುದ್ದೆಗಳು ಖಾಲಿ ಇವೆ. ಪಾಕಿಸ್ತಾನದವರು ಯಾವಾಗ ಏನು ಮಾಡುತ್ತಾರೋ ಗೊತ್ತಿಲ್ಲ. ಹೀಗಾಗಿ ಕೂಡಲೇ ಸಭೆ ಕರೆದು ನೇಮಕಾತಿ ಮಾಡಿ. ಪಾಕಿಸ್ತಾನಕ್ಕೆ ಸಿಂಧೂ ನದಿ ನೀರು ಬಂದ್ ಮಾಡಿದ್ದರೆ ಸ್ವಾಗತ. ಸಿಂಧೂ ನದಿ ನಿಲ್ಲಿಸಿದರು ಹರಿದು ಹೋಗುತ್ತದೆ 6 ಉಪನದಿಗಳಿವೆ. ಭಾರತ ಯುದ್ಧ ಮಾಡಿದರೆ ವಾರಕ್ಕೆ ನಾಶಮಾಡುವ ಶಕ್ತಿ ಇದೆ. ಮಾಜಿ ಪ್ರಧಾನಿ ಇಂದಿರಾಗಾಂಧಿಯವರ ತೀರ್ಮಾನವನ್ನೇ ಪ್ರಧಾನಿ ಮೋದಿ ಅನುಸರಿಸಬೇಕು ಎಂದು ಬೆಂಗಳೂರಿನಲ್ಲಿ ಕಾಂಗ್ರೆಸ್ ಶಾಸಕ ಬಸವರಾಜ ರಾಯರೆಡ್ಡಿ ಹೇಳಿಕೆ ನೀಡಿದರು.

# ವಿಶ್ವ ಬಸವ ಜಯಂತಿ ದಿನದಂದು ಪ್ರಧಾನಮಂತ್ರಿ ಪರಿಹಾರ ನಿಧಿಗೆ 5 ಲಕ್ಷ ರೂ.ದೇಣಿಗೆ: ಅರವಿಂದ ಜತ್ತಿ

**ಬೆಂಗಳೂರು,ಏ.28:** ಬಸವ ಸಮಿತಿಯು ಏಪ್ರಿಲ್ 30 ರ ಬುಧವಾರದಂದು "ವಿಶ್ವ ಬಸವ ಜಯಂತಿ 2025" ಅನ್ನು ಆಚರಿಸಲಿದ್ದು, ಈ ಸಂದರ್ಭದಲ್ಲಿ ಸಾಹಿತ್ಯಕ ಕಾರ್ಯಕ್ರಮಗಳು ನಡೆಯಲಿವೆ. ಇತ್ತೀಚೆಗೆ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಅಮಾಯಕರು ಸಾವನ್ನಪ್ಪಿದ ಕಾರಣ, ಬಸವ ಸಮಿತಿಯು ವಿಶ್ವ ಬಸವ ಜಯಂತಿಯನ್ನು ಸರಳವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಬಸವ ಸಮಿತಿ ಅಧ್ಯಕ್ಷ ಅರವಿಂದ ಜತ್ತಿ ಹೇಳಿದ್ದಾರೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಈ ಸಂದರ್ಭದಲ್ಲಿ ಬಸವ ಸಮಿತಿಯು ಅಮಾಯಕರ ಜೀವಹಾನಿಗೆ ಸಂತಾಪ ವ್ಯಕ್ತಪಡಿಸುತ್ತದೆ ಮತ್ತು ಪ್ರಧಾನ ಮಂತ್ರಿಗಳ ಪರಿಹಾರ ನಿಧಿಗೆ 5 ಲಕ್ಷ ರೂ ದೇಣಿಗೆ ನೀಡಲಾಗುವುದು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಳಿಗ್ಗೆ ಬಸವೇಶ್ವರ ವೃತ್ತದಲ್ಲಿರುವ ಕರ್ನಾಟಕದ ಸಾಂಸ್ಕೃತಿಕ ಪ್ರತಿಮೆಯಾದ ವಿಶ್ವಗುರು ಬಸವೇಶ್ವರರ ಪ್ರತಿಮೆಗೆ ಮಾಲಾರ್ಪಣೆ ಮಾಡಲಿದ್ದಾರೆ. ತದನಂತರ ಬಸವ ಸಮಿತಿಯ ಅನುಭವ ಮಂಟಪದಲ್ಲಿ ಸಾಂಸ್ಕೃತಿಕ ಮತ್ತು ಸಾಹಿತ್ಯಕ ಕಾರ್ಯಕ್ರಮಗಳನ್ನು ಔಪಚಾರಿಕವಾಗಿ ಉದ್ಘಾಟಿಸಲಿದ್ದಾರೆ.




ಬಸವ ಸಮಿತಿ ಹೊರತಂದಿರುವ ಆಧ್ಯಾತ್ಮಿಕ ಆಧಾರಿತವಾಗಿ ನಡೆಸಲ್ಪಡುವ ಮಾನವ ಮೌಲ್ಯಗಳಿಗೆ ಸಂಬಂಧಿಸಿದ ಶರಣ ತತ್ವಶಾಸ್ತ್ರಕ್ಕೆ ಸಂಬಂಧಿಸಿದ 18 ಸಾಹಿತ್ಯ ಕೃತಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುಗಡೆ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ಶರಣರ 2500 ವಚನಗಳನ್ನು ಒಳಗೊಂಡಿರುವ ಇಂಗ್ಲಿಷ್ 'ವಚನ'ವನ್ನು ಮೂಲವಾಗಿಟ್ಟುಕೊಂಡು ಫ್ರೆಂಚ್ ಮತ್ತು ನೇಪಾಳಿ 'ವಚನ' ಸಂಪುಟಗಳನ್ನು ಲೋಕಾರ್ಪಣೆ ಮಾಡಲಾಗುವುದು ಎಂದರು. ಯುಎಇ ಸೇರಿದಂತೆ ವಿವಿಧ ದೇಶಗಳಲ್ಲಿ ಬಸವ ತತ್ವಶಾಸ್ತ್ರವನ್ನು ಪ್ರಚಾರ ಮಾಡುವ ಸಂಸ್ಥೆಗಳು, ಅಮೆರಿಕ, ಯುರೋಪಿಯನ್ ಒಕ್ಕೂಟ, ಆಸ್ಟ್ರೇಲಿಯಾ ಮತ್ತು ನೆರೆಯ ರಾಷ್ಟ್ರಗಳಲ್ಲಿನ 28 ಸಂಸ್ಥೆಗಳು ಬಸವ ಸಮಿತಿಯ ಸಹಯೋಗದೊಂದಿಗೆ ವಿಶ್ವ ಬಸವ ಜಯಂತಿಯನ್ನು ಆಚರಿಸಲಿವೆ.

ಚಿತ್ರದುರ್ಗದಲ್ಲಿ ಕಳೆದ ಮೂರುವರೆ ದಶಕಗಳಿಂದ ವಚನ ಗಾಯಕರಾಗಿರುವ ತೋಟಪ್ಪ ಉತ್ತಂಗಿ ಅವರಿಗೆ ಕೆ. ಮೋಹನದೇವ್ ಆಳ್ವ ಅವರು ಬಸವ ಸಮಿತಿಯಲ್ಲಿ ಮೀಸಲಿಟ್ಟ ದತ್ತಿ ನಿಧಿಯಿಂದ ರೂ.1 ಲಕ್ಷಗಳನ್ನು ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು.

# ಕಟ್ಟಡ ನಿರ್ಮಾಣ ನಿಯಮ ಉಲ್ಲಂಘಿಸಿದವರ ವಿರುದ್ಧ ಕ್ರಮ

**ಬೆಂಗಳೂರು,ಏ.28:** ಕಟ್ಟಡ ನಿರ್ಮಾಣ ಮಾಡುವಾಗ ನಿಯಮ ಉಲ್ಲಂಘಿಸಿದವರ ವಿರುದ್ಧ ಬಿಬಿಎಂಪಿ ಕೈಗೊಳ್ಳುವ ಶಿಸ್ತು ಕ್ರಮಕ್ಕೆ ಬೆಂಗಳೂರು ಜಲಮಂಡಳಿ ಮತ್ತು ಬೆಸ್ಕಾಂ ಸಾಥ್ ಕೊಡಲು ಮುಂದಾಗಿವೆ.ಅಕ್ಟೋಬರ್ 22, 2024 ರಂದು ಒಂಬತ್ತು ಜನರ ಸಾವಿಗೆ ಕಾರಣವಾದ ಬಾಬುಸಾಬ್ ಪಾಳ್ಯದಲ್ಲಿ ಕಟ್ಟಡದ ಕುಸಿತ ಪ್ರಕರಣ ನಂತರ, ನಿಯಮ ಉಲ್ಲಂಘಿಸಿರುವ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳಿಗೆ ವಿದ್ಯುತ್ ಮತ್ತು ಒಳಚರಂಡಿ ಸಂಪರ್ಕಗಳನ್ನು ಕಡಿತಗೊಳಿಸುವಂತೆ ಲೋಕಾಯುಕ್ತರು ಸೂಚಿಸಿದ್ದರು.ಉತ್ತರ ಬೆಂಗಳೂರಿನಲ್ಲಿ ಒಂಬತ್ತು ಮಂದಿಯನ್ನು ಬಲಿ ತೆಗೆದುಕೊಂಡ ದುರಂತದ ನಂತರ, ಏಳು ದಿನಗಳ ಒಳಗೆ ನಿಯಮ ಉಲ್ಲಂಘಿಸಿದ ಕಟ್ಟಡಕ್ಕೆ ಶಾಶ್ವತವಾಗಿ ವಿದ್ಯುತ್ ಸಂಪರ್ಕ ಕಡಿತಗೊಳಿಸುವಂತೆ ಬೆಸ್ಕಾಂ ಗೆ ಪಾಲಿಕೆ ನವೆಂಬರ್ 28, 2024 ರಂದು ಸುತ್ತೋಲೆ ಹೊರಡಿಸಿತು.ಸರ್ವೋಚ್ಚ ನ್ಯಾಯಾಲಯವು ಎಲ್ಲಾ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳು ಮತ್ತು ಎಲ್ಲಾ ಹೈಕೋರ್ಟ್‌ಗಳ ರಿಜಿಸ್ಟ್ರಾರ್‌ಗಳಿಗೆ 12 ನಿರ್ದಿಷ್ಟ ನಿರ್ದೇಶನಗಳೊಂದಿಗೆ ಆದೇಶವನ್ನು ನೀಡಿದೆ, ನಿರ್ಮಾಣ ಹಂತದ ಕಟ್ಟಡಗಳಿಗೆ ಆಕ್ಯುಪೆನ್ಸಿ ಪ್ರಮಾಣಪತ್ರಗಳಿಲ್ಲದೆ ಯಾವುದೇ ಸೇವೆಗಳನ್ನು ಒದಗಿಸಬಾರದು ಎಂದು ಸ್ಪಷ್ಟಪಡಿಸಿದೆ. ಸುಪ್ರೀಂಕೋರ್ಟ್ ಆದೇಶವನ್ನು ತ್ವರಿತವಾಗಿ ಅನುಸರಿಸದ ಯಾವುದೇ ಅಧಿಕಾರಿಯನ್ನು ಸ್ಥಳೀಯ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದೆ.




ಹಲವಾರು ಬಾರಿ ಮನವಿ ಮಾಡಿಗದ ನಂತರ ಬೆಸ್ಕಾಂ ಅಂತಿಮವಾಗಿ 2025ರ ಏಪ್ರಿಲ್ 4 ರಂದು ಸುತ್ತೋಲೆ ಹೊರಡಿಸಿತು, ಸೇವಾ ಸಂಪರ್ಕಕ್ಕಾಗಿ ಪ್ರಾರಂಭ ಪ್ರಮಾಣಪತ್ರ ಮತ್ತು ಆಕ್ಯುಪೆನ್ಸಿ ಪ್ರಮಾಣಪತ್ರ ಅವಶ್ಯಕತೆಗಳನ್ನು ಕಡ್ಡಾಯಗೊಳಿಸಿತು ಬಿಬಿಎಂಪಿ ವಿನಂತಿಗಳನ್ನು ತ್ವರಿತವಾಗಿ ಅನುಸರಿಸಲು ಸ್ಥಳೀಯ ಕಚೇರಿಗಳಿಗೆ ನಿರ್ದೇಶನ ನೀಡಿದೆ ಎಂದು ಬೆಂಗಳೂರು ಒಕ್ಕೂಟದ ಸಂಚಾಲಕ ರಾಜಗೋಪಾಲನ್ ಹೇಳಿದರು.ನೀರು ಮತ್ತು ಒಳಚರಂಡಿ ಸಂಪರ್ಕ ಪಡೆಯಲು ಬಿಬಿಎಂಪಿಯಿಂದ ಕಡ್ಡಯಾವಾಗಿ CC/OC ತರಬೇಕು ಎಂದು ಸುತ್ತೋಲೆಯನ್ನು ಹೊರಡಿಸಲಿದೆ ಎಂದು ಃಘಖಖಃ ಉನ್ನತ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ನಿಯಮ ಉಲ್ಲಂಘನೆ ಮತ್ತು ಬಿಬಿಎಂಪಿ ಕಾಯ್ದೆ 2020ಕ್ಕೆ ವಿರುದ್ಧವಾಗಿರುವ ಅನಧಿಕೃತ ಮಹಡಿಗಳನ್ನು ಹೊಂದಿರುವ ಕಟ್ಟಡಗಳ ಮೇಲೆ ಬಿಬಿಎಂಪಿ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಬೇಕು.. ಅನೇಕ ಸಂದರ್ಭಗಳಲ್ಲಿ, ಕಟ್ಟಡಕ್ಕೆ ಯಾವುದೇ ಪ್ಲಾನ್ ಮಂಜೂರಾತಿ ಇಲ್ಲ. ಬಿಬಿಎಂಪಿ ನೋಟಿಸ್ ನೀಡಿ ಸಂಪರ್ಕ ಕಡಿತಗೊಳಿಸುವಂತೆ ಹೇಳಿದರೆ ನಾವು ಮಾಡುತ್ತೇವೆ ಎಂದಿದ್ದಾರೆ.ಒಂದು ವೇಳೆ ಬಿಬಿಎಂಪಿ ಕೂಡ ಹಾಗೆ ಮಾಡಲು ವಿಫಲವಾದರೆ, ಸಂಪರ್ಕಗಳನ್ನು ನೀಡುವ ಮೊದಲು, ನಾವು ಮಾಲೀಕರಿಗೆ ಸಿಸಿ/ಒಸಿ ಉತ್ಪಾದಿಸಲು ಕೇಳುತ್ತೇವೆ ಎಂದು ಬಿಡಬ್ಲ್ಯುಎಸ್‌ಎಸ್ಬಿ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಮದ್ಯಪಾನ ಮಾಡಿ ವಾಹನ ಚಲಾಯಿಸಿದವರ ವಿರುದ್ಧ 650ಕ್ಕೂ ಹೆಚ್ಚು ಪ್ರಕರಣ ದಾಖಲು

**ಬೆಂಗಳೂರು,ಏ.28:** ನಗರದಾದ್ಯಂತ ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ ಮದ್ಯಪಾನ ಮಾಡಿ ವಾಹನ ಚಲಾಯಿಸಿದವರ ವಿರುದ್ಧ 650ಕ್ಕೂ ಹೆಚ್ಚು ಪ್ರಕರಣಗಳನ್ನು ದಾಖಲಿಸಿದ್ದು, ಅತಿ ವೇಗವಾಗಿ ವಾಹನ ಚಲಾಯಿಸಿದವರಿಂದ ಒಟ್ಟು 1.89 ಲಕ್ಷ ರೂ. ದಂಡ ಸಂಗ್ರಹಿಸಲಾಗಿದೆ ಎಂದು ಬೆಂಗಳೂರು ಸಂಚಾರ ಪೊಲೀಸರು ಸೋಮವಾರ ತಿಳಿಸಿದ್ದಾರೆ.ಏಪ್ರಿಲ್ 21 ರಿಂದ ಏಪ್ರಿಲ್ 27ರವರೆಗೆ ಕಾರ್ಯಾಚರಣೆ ನಡೆಸಲಾಗಿದ್ದು, ಮದ್ಯಪಾನ ಮಾಡಿ ವಾಹನ ಚಲಾಯಿಸಿದವರು ಮತ್ತು ಅತಿ ವೇಗವಾಗಿ ವಾಹನ ಚಲಾಯಿಸಿದವರು ಪತ್ತೆಯಾಗಿದ್ದಾರೆ ಎಂದು ಅವರು ಹೇಳಿದರು.ನಗರದಾದ್ಯಂತ 53 ಸಂಚಾರ ಪೊಲೀಸ್ ಠಾಣೆಗಳ ಎಲ್ಲ ಸಂಚಾರ ಅಧಿಕಾರಿಗಳು ಈ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.ಸಂಚಾರ ಪೊಲೀಸರ ಪ್ರಕಾರ, ಕುಡಿದು ವಾಹನ ಚಲಾಯಿಸುವವರ ವಿರುದ್ಧ ನಡೆದ ವಿಶೇಷ ಕಾರ್ಯಾಚರಣೆಯ ಸಮಯದಲ್ಲಿ, ಒಟ್ಟು 43,253 ವಾಹನಗಳನ್ನು ಪರಿಶೀಲಿಸಲಾಗಿದೆ ಮತ್ತು ಅಂತಹ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ 668 ಪ್ರಕರಣಗಳನ್ನು ದಾಖಲಿಸಲಾಗಿದೆ. ಈ ಮಧ್ಯೆ, ಅತಿ ವೇಗವಾಗಿ ವಾಹನ ಚಲಾಯಿಸಿದವರ ವಿರುದ್ಧ 185 ಪ್ರಕರಣಗಳನ್ನು ದಾಖಲಿಸಲಾಗಿದ್ದು, ಅವರಿಂದ ಒಟ್ಟು 1.89 ಲಕ್ಷ ರೂ. ದಂಡವನ್ನು ಸಂಗ್ರಹಿಸಲಾಗಿದೆ.' ಬೆಂಗಳೂರು ನಗರದಲ್ಲಿ ರಸ್ತೆ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಕುಡಿದು ವಾಹನ ಚಲಾಯಿಸುವುದು ಮತ್ತು ಅತಿ ವೇಗವಾಗಿ ವಾಹನ ಚಲಾಯಿಸುವುದನ್ನು ತಡೆಯುವ ಉದ್ದೇಶದಿಂದ ಈ ವಿಶೇಷ ಅಭಿಯಾನ ನಡೆಸಲಾಗಿದೆ. ಈ ಅಭಿಯಾನವು ಮುಂದುವರಿಯಲಿದೆ' ಎಂದು ಸಂಚಾರ ಪೊಲೀಸರು ಹೇಳಿಕೆಯಲ್ಲಿ ತಿಳಿಸಿದ್ದಾರೆ.



# ಸರ್ವೋತ್ತಮ ಸೇವಾರತ್ನ ಪ್ರಶಸ್ತಿ ಪಡೆದ ತಹಶೀಲ್ದಾರ್ ಮಜ್ಜಗಿಗೆ ಅಭಿನಂದನೆ



**ಹುಬ್ಬಳ್ಳಿ, ಏ.28:** ರಾಜ್ಯ ಸರಕಾರಿ ನೌಕರರಾಗಿ ಅತ್ಯುನ್ನತ್ತ ಸೇವೆಗೈದ ಹಾಗೂ ಬೆಂಗಳೂರಿನಲ್ಲಿ ಮುಖ್ಯ ಮಂತ್ರಿಗಳಿಂದ ಸರ್ವೋತ್ತಮ ಸೇವಾ ರತ್ನ ಪ್ರಶಸ್ತಿ ಪಡೆದ ಹುಬ್ಬಳ್ಳಿ ಗ್ರಾಮೀಣ ತಹಶೀಲ್ದಾರ್ ಜಂಬೂನಾಥ್ ಮಜ್ಜಗಿ ಅವರನ್ನು ಶಾಲು ಹೊದಿಸಿ ಸನ್ಮಾನಿಸಲಾಯಿತು, ಈ ಸಂದರ್ಭದಲ್ಲಿ ಮುಖಂಡರಾದ ಡಾ.ಶರಣಪ್ಪ ಕೋಟಗಿ, ರಾಜಶೇಖರ್ ಮೆಣಸಿನಕಾಯಿ, ಸುರೇಶ ಸವಣೂರ, ಉದ್ಯಮಿ ಎಂ.ಪಿ.ಶಿವಕುಮಾರ್, ಸೂರ್ಯಕಾಂತ್ ಘೋಡಕೆ, ದಲಿತ ಮುಖಂಡ ವಿನಾಯಕ ಗಡಿವಡ್ಡರ, ಗೋಪಿ ನೀರಣಕಿ ಹಾಜರಿದ್ದರು.

# ಮುನಿರತ್ನ ಸೇರಿದಂತೆ 7 ಜನರ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆ

**ಬೆಂಗಳೂರು,ಏ.28:** ಆರ್.ಆರ್.ನಗರ ಶಾಸಕ ಮುನಿರತ್ನ ಮೇಲಿನ ಅತ್ಯಾಚಾರ ಆರೋಪ ಪ್ರಕರಣ ಸಂಬಂಧ ಇದೀಗ ಅಧಿಕಾರಿಗಳು ಮುನಿರತ್ನ ಸೇರಿದಂತೆ 7 ಜನರ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದ್ದಾರೆ.ಮುನಿರತ್ನ ಸೇರಿದಂತೆ ಏಳು ಜನರ ವಿರುದ್ಧ 3000 ಪುಟಗಳ ಚಾರ್ಜ್‌ಶೀಟ್‌ನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಅಧಿಕಾರಿಗಳು ಸಲ್ಲಿಸಲಾಗಿದ್ದು, ಚಾರ್ಜ್‌ಶೀಟ್ ನಲ್ಲಿ ಮುನಿರತ್ನ, ಸುಧಾಕರ್, ಇನ್ಸ್ ಪೆಕ್ಟರ್ ಅಯ್ಯಣ್ಣ ರೆಡ್ಡಿ, ಲೋಹಿತ್ ಗೌಡ, ಶ್ರೀನಿವಾಸ್, ಕಿರ್ಣ ಕುಮಾಅರ್, ಮಂಜುನಾಥ್ ಹೆಸರನ್ನು ಉಲ್ಲೇಖಿಸಲಾಗಿದೆ.ಆರೋಪಿಗಳು ಪಿಐಗಳು, ಎಸಿಪಿಗಳ ಅಶ್ಲೀಲ ವಿಡಿಯೋ, ಫೋಟೊ ಮಾಡಿರುವುದು ಚಾರ್ಜ್‌ಶೀಟ್‌ನಲ್ಲಿ ಬಯಲಾಗಿದೆ. ತಮ್ಮ ಪರ ಕೆಲಸ ಮಾಡುವಂತೆ ಮಾಡಲು ಬ್ಲ್ಯಾಕ್ ಮೇಲ್ ಮಾದಿ ಬೆದರಿಕೆ ಹಾಕುತ್ತಿದ್ದರು ಎಂದು ಉಲ್ಲೇಖಿಸಲಾಗಿದೆ. ವಿಚಾರಣೆಯ ವೇಳೆ 63 ಪ್ರಶ್ನೆಗಳನ್ನು ಮುನಿರತ್ನಗೆ ಕೇಳಲಾಗಿತ್ತು. ಸದ್ಯ ವಿಶೇಷ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಾಗಿದೆ.

## ಜಿಮ್ಸ್ ಮೆಡಿಕಲ್ ಕಾಲೇಜಿನಲ್ಲಿ ಘಟಿಕೋತ್ಸವದಲ್ಲಿ ಡಾ.ಶರಣಪ್ರಕಾಶ ಪಾಟೀಲ

# ಸಮಾಜ ಸೇವೆಯಿಂದ ಗಳಿಸಿದ ಪದವಿ ಸಾರ್ಥಕ




**ಕಲಬುರಗಿ, ಏ. 28:** ಇಂದಿನ ಯುಗದಲ್ಲಿ ವೈದ್ಯಕೀಯ ವಿದ್ಯಾರ್ಥಿಗಳು ನಿಸ್ವಾರ್ಥವಾಗಿ ಸಮಾಜ ಸೇವೆ ಮಾಡಿದಾಗ ಮಾತ್ರ ನಾವು ಗಳಿಸಿದ ಪದವಿ ಸಾರ್ಥಕವಾಗುತ್ತವೆ. ಇಂತಹ ಸೇವೆಯನ್ನು ಸಮಾಜ ಗೌರವಿಸುತ್ತದೆ ಎಂದು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಹೇಳಿದರು.

ನಗರದ ಜಿಮ್ಸ್ ಮೆಡಿಕಲ್ ಕಾಲೇಜಿನ ಆವರಣದಲ್ಲಿ ವೈದ್ಯಕೀಯ ವಿಜ್ಞಾನಿಗಳ ಸಂಸ್ಥೆಯ 2019 ನೇ ಸಾಲಿನ ವಿದ್ಯಾರ್ಥಿಗಳ 'ಅವಿರ್ಭವ್' 5ನೇ ಘಟಿಕೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ವೈದ್ಯರಿಗೆ ರೋಗಿಗಳಿಗೆ ವಿಶೇಷವಾಗಿ ಬಡವರ ಬಗ್ಗೆ ಕಾಳಜಿ ಇರಬೇಕು. ಚಿಕಿತ್ಸೆ ನೀಡುವಾಗ ಸಹಾನುಭೂತಿ, ಪ್ರತಿ ಕಾಳಜಿ ವಹಿಸಬೇಕು. ಎಲ್ಲದಕ್ಕೂ ಹಣವೇ ಮುಖ್ಯವಾಗಲ್ಲ. ನೈತಿಕತೆ ಇದ್ದರೆ ನೆಮ್ಮದಿ ಮುಖ್ಯವಾಗಿದೆ ಎಂದರು.

74 ಮೆಡಿಕಲ್ ಕಾಲೇಜು: ಕರ್ನಾಟಕವೂ ಪ್ರಗತಿಪರ ರಾಜ್ಯವಾಗಿದ್ದು, 74 ಮೆಡಿಕಲ್ ಕಾಲೇಜುಗಳು ಇವೆ. ರಾಜ್ಯದಲ್ಲಿ ಹೆಚ್ಚು ಮೆಡಿಕಲ್ ಸೀಟ್ ಇವೆ. ಪ್ರಸಕ್ತ ವರ್ಷ 800 ಮೆಡಿಕಲ್ ಸೀಟ್ ಹೆಚ್ಚಿಸಲಾಗುತ್ತಿದೆ. 700 ಪಿಜಿ ಕ್ಲಿನಿಕ್ ಸೀಟ್ ಸಹ ಹೆಚ್ಚಿಸಲಾಗುತ್ತಿದೆ. ಗ್ರಾಮೀಣ ಭಾಗದ ರೈತ, ಕಾರ್ಮಿಕ , ಬಡ ಪ್ರತಿಭಾವಂತರಿಗೆ ಖಾಸಗಿ ವೈದ್ಯಕೀಯ ಕಾಲೇಜಿನಲ್ಲಿ ಕಲಿಸಲು ಬಡಕುಟುಂಬ ಮಕ್ಕಳಿಗೆ ಕಲಿಯಲು ಆಗುವುದಿಲ್ಲ. ರಾಜ್ಯ ಸರ್ಕಾರವು ಪ್ರತಿ ಜಿಲ್ಲೆಗೂ ಒಂದು ವೈದ್ಯಕೀಯ ಕಾಲೇಜು ಮಾಡುವ ಗುರಿ ಇಟ್ಟು ಕೆಲಸ ಮಾಡತ್ತಿದೆ ಎಂದು ಹೇಳಿದರು.

ಕಾರ್ಪೊರೇಟ್ ವಲಯದಲ್ಲಿ ಹೆಚ್ಚಿನ ದರದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಬಡವರಿಗೆ ಕಡಿಮೆ ಅಥವಾ ಉಚಿತ ದರದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡುವುದು ನಮ್ಮ ಆದ್ಯತೆ ಆಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ 371–ಜೆ ವಿಧಿಯಿಂದ ವಾರ್ಷಿಕ 900 ವೈದ್ಯಕೀಯ ಸೀಟ್ ದೊರೆಯುತ್ತಿದೆ ಎಂದು ಹೇಳಿದರು.

ವಿಜಯಪುರ ಬಿ.ಎಲ್.ಡಿ. ವಿಶ್ವವಿದ್ಯಾಲಯದ ಉಪಕುಲಪತಿ ಡಾ.ಜಯರಾಜ ಅವರು ಮಾತನಾಡಿ, ದೇಶದಲ್ಲಿ ಒಂದು ಕೋಟಿ ವಿದ್ಯಾರ್ಥಿಗಳಿಗೆ ನೀಟ್ ಸಿಇಟಿ ಪರೀಕ್ಷೆ ಬರೆಯುತ್ತಾರೆ 25 ಲಕ್ಷ ಜನ ಅರ್ಹರಾಗುತ್ತಾರೆ. ಒಂದು ಲಕ್ಷ ವಿದ್ಯಾರ್ಥಿಗಳು ಸರಕಾರಿ ವೈದ್ಯಕೀಯ ಕಾಲೇಜು ದೊರೆಯುತ್ತದೆ ಅಂತಹ ಭಾಗ್ಯವಂತರಲ್ಲಿ ಜಿಮ್ಸ್ ವಿದ್ಯಾರ್ಥಿಗಳು 20 ವರ್ಷದ ವರ್ತನೆ ಸಂಹವನವನ್ನು ಪಠ್ಯಕ್ರಮದಲ್ಲಿ ಸೇರ್ಪಡೆ ಮಾಡಿದ್ದು, ಎಲ್ಲರೂ ಮಾದರಿಯಾಗಿ ಬೆಳೆಯಬೇಕು ಎಂದರು.

ಮೈಕ್ರೋ, ನ್ಯಾನೋ, ಡಿಜಿಟಲ್ ಸೇರಿ ವೈವಿದ್ಯಮಯ ತಂತ್ರಜ್ಞಾನಗಳು ವೈದ್ಯಕೀಯ ಕ್ಷೇತ್ರದಲ್ಲಿ ಪರಿಚಿತವಾಗಿದ್ದು, ಕಾಲಕ್ಕೆ ತಕ್ಕಂತೆ ಎಲ್ಲ ವಿಷಯ ಅರಿತು ಚಿಕಿತ್ಸೆ ನೀಡುವಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು. ಕಲಬುರಗಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ. ಉಮೇಶ ಎಸ್. ಆರ್. ಅವರು ಮಾತನಾಡಿ, ಕಾಲೇಜು ಪ್ರಾರಂಭವಾಗಿ 10 ವರ್ಷಗಳು ಗತಿಸಿದ್ದವು ಈಗ ಇದು ಐದನೇ ಬ್ಯಾಚ್ ಎಂದು ಹರ್ಷ ವ್ಯಕ್ತಪಡಿಸಿದರು. ಆದರೆ ಒಂದು ವರ್ಷಕ್ಕೆ 150 ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಾರೆ ವರ್ಷಕ್ಕೆ 66 ಸ್ನಾತಕೋತ್ತರ ವಿದ್ಯಾರ್ಥಿಗಳು ಪ್ರವೇಶ ಇಲ್ಲಿಯ ನಡೆಯುತ್ತದೆ ಜೊತೆ ಎಲ್ಲ ರೋಗಿಗಳಿಗೆ ಸರಿಯಾದ ರೀತಿಯಲ್ಲಿ ನೋಡಿಕೊಳ್ಳಬೇಕು ಎಂದರು. ಇದೇ ಸಂದರ್ಭದಲ್ಲಿ ಸಚಿವರು ಡಾ. ಆಕಾಶ, ಅರ್. ಪಾಟೀಲ್ ಸತತ ಮೂರು ಬಾರಿ ಪ್ರಥಮವಾಗಿ ಬಂದಿದ್ದಾರೆ ಒಂದು ಭಾರಿ ಡಾ. ತಾಬಸುಮ್ ಒಂದು ಬಾರಿ ಪಡೆದಿದ್ದಾರೆ ಅವರಿಗೆ ಸನ್ಮಾನಿಸಲಾಯಿತು. ಪಿ.ಜಿ ಫಾರನಿಸಿಕ್ ಮೆಡಿಸಿನ್ ಚಿನ್ನದ ಪದಕ ನೀಡಿ ಡಾ. ಪಾರ್ವತಿ ಅವರನ್ನು ಸನಾನಿಸಲಾಯಿತು. ಒಟ್ಟು 144 ವೈದ್ಯ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಇ.ಎನ್.ಟಿ. ವಿಭಾಗದ ಮುಖ್ಯಸ್ಥೆ ಡಾ.ರೇಣುಕಾ ಮೇಳಕುಂದಾ ಅವರು ಸ್ವಾಗತಿಸಿದರು. ಇದೇ ಸಂದರ್ಭದಲ್ಲಿ ಜಿಮ್ಸ್ ಕಾಲೇಜಿನ ಪ್ರಾಂಶುಪಾಲ ಡಾ. ಅಜಯ ಗೂಡೂರ, ಆರ್ಥಿಕ ಸಲಹೆಗಾರ್ತಿ ಭಾರತಿ ಮುಖ್ಯ ಆಡಳಿತಾಧಿಕಾರಿ ಪ್ರಮೀಳಾ, ಜಿಮ್ಸ್ ವೈದ್ಯಕೀಯ ಅಧೀಕ್ಷ ಡಾ. ಶಿವಕುಮಾರ, ಜಿಮ್ಸ್ ಕಾಲೇಜಿನ ಡಾ. ಪುನಿತಾ ಮತ್ತು ಡಾ. ದಿವ್ಯ ಕಾರ್ಯಕ್ರಮ ನಿರೂಪಿಸಿದರು. ಡಾ. ರಾಜಕುಮಾರ ವಂದಿಸಿದ್ದರು. ಕಾರ್ಯಕ್ರಮದಲ್ಲಿ ಅನೇಕ ವೈದ್ಯಾಧಿಕಾರಿಗಳು ಹಾಗೂ ಡೀನರು ಪಾಲಕರು ಭಾಗವಹಿಸಿದ್ದರು.

# ಶರಣಬಸವ ವಿಶ್ವವಿದ್ಯಾಲಯ–ಕೊರಿಯಾ ಕೇಬಲ್ ಕಂಪನಿ ಮೈಕ್ರೋ ವೈರ್ ತಯಾರಿಕೆ ಸಹಯೋಗ–ಸಂಶೋಧನೆ ಅಭಿವೃದ್ಧಿ ಚಟುವಟಿಕೆಗಳ ಒಪ್ಪಂದ



**ಕಲಬುರಗಿ, ಏ. 28:** ದಕ್ಷಿಣ ಕೊರಿಯಾ ಕೇಬಲ್ ಕಂಪನಿಯ ಸಂಸ್ಥಾಪಕ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹ್ವಾಂಗ್ ಚಾಂಗ್ ಸೂನ್, ಸುಧಾರಿತ ಕೇಬಲ್ ತಂತ್ರಜ್ಞಾನಗಳು, ದೃಢವಾದ ವಿನ್ಯಾಸಗಳು ಮತ್ತು ನವೀನ ಕನೆಕ್ಟರ್ ಪರಿಹಾರಗಳಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ (ಆರ್–ಡಿ) ಯಲ್ಲಿ ಶರಣಬಸವ ವಿಶ್ವವಿದ್ಯಾಲಯದ ಸಹಯೋಗಕ್ಕಾಗಿ ಹಿರಿಯ ಅಧಿಕಾರಿಗಳೊಂದಿಗೆ ಪ್ರಾಥಮಿಕವಾಗಿ ಹಾಗೂ ವಿಸ್ತೃತವಾಗಿ ಚರ್ಚಿಸಿದರು.

ಹ್ವಾಂಗ್ ಚಾಂಗ್ ಸೂನ್ ನೇತೃತ್ವದ ದಕ್ಷಿಣ ಕೊರಿಯಾದ ನಿಯೋಗವು ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ್ ಬಿಡವೆ ಮತ್ತು ರಿಜಿಸ್ಟ್ರಾರ್ ಡಾ. ಎಸ್. ಜಿ. ಡೊಳ್ಳೇಗೌಡರ್, ನಿರ್ದೇಶಕ ಪ್ರೊ. ವಿ. ಡಿ. ಮೈತ್ರಿ ಮತ್ತು ಸುರಪುರದ ವೀರಪ್ಪ ನಿಷ್ಠಿ ಇಂಜಿನಿಯರಿಂಗ್ ಕಾಲೇಜಿನ ನಿರ್ದೇಶಕ ದೊಡ್ಡಪ್ಪ ನಿಷ್ಠಿ ಹಾಗೂ ವಿವಿಯ ವಿವಿಧ ಅಧ್ಯಾಪಕರು ಮತ್ತು ಡೀನ್‌ರು ಒಳಗೊಂಡಂತೆ ಇತರ ಹಿರಿಯ ಅಧಿಕಾರಿಗಳನ್ನು ಭೇಟಿ ಮಾಡಿ ವಿಶ್ವವಿದ್ಯಾಲಯ ಮತ್ತು ಕೇಬಲ್ ಕಂಪನಿಯ ನಡುವಿನ ಸಹಯೋಗದ ಕುರಿತು ವಿಸ್ತಾರವಾಗಿ ಚರ್ಚಿಸಿದರು.

ಹ್ವಾಂಗ್ ಚಾಂಗ್ ಸೂನ್ ತಮ್ಮ ಸಂಕ್ಷಿಪ್ತ ಭಾ?ಣದಲ್ಲಿ ವಿಶ್ವವಿದ್ಯಾಲಯವು ಇಂಜಿನಿಯರಿಂಗ್ ಅಧ್ಯಯನದ ಪಠ್ಯಕ್ರಮದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗೆ ಹೆಚ್ಚಿನ ಒತ್ತು ನೀಡಿ, ತನ್ನ ಅಲ್ಪಾವಧಿಯಲ್ಲಿ ಗುಣಮಟ್ಟದ ಇಂಜಿನಿಯರ್‌ಗಳನ್ನು ಉತ್ಪಾದಿಸುವ ಮೂಲಕ ಸಾಧಿಸಿದ ಪ್ರಗತಿಯ ಬಗ್ಗೆ ಸಂತೋಷ ವ್ಯಕ್ತಪಡಿಸಿದರು. ಕೇಬಲ್ ತಂತ್ರಜ್ಞಾನಗಳು, ದೃಢವಾದ ಸರಂಜಾಮು ವಿನ್ಯಾಸ ಮತ್ತು ನವೀನ ಕನೆಕ್ಟರ್ ಪರಿಹಾರಗಳ ಕುರಿತು ಜಂಟಿ ಸಂಶೋಧನೆಯಲ್ಲಿ ನಾವು ಆಸಕ್ತಿ ಹೊಂದಿದ್ದೇವೆ ಎಂದು ಅವರು ಹೇಳಿದರು.

ಕಂಪನಿಯು ಶರಣಬಸವ ವಿಶ್ವವಿದ್ಯಾಲಯದಲ್ಲಿ ಕೇಬಲ್ ಜೋಡಣೆ, ವೈರ್ ಹಾರ್ನೆಸಿಂಗ್ ಮತ್ತು ಕನೆಕ್ಟರ್ ನಾವೀನ್ಯತೆಗಳ ಮೇಲೆ ಕೇಂದ್ರೀಕರಿಸುವ ಒಂದು ಶ್ರೇಷ್ಠತಾ ಕೇಂದ್ರವನ್ನು ಸ್ಥಾಪಿಸಲು ಉತ್ಸುಕವಾಗಿದೆ ಎಂದ ಅವರು, ಇದು ವಿದ್ಯುತ್ ವಾಹನಗಳು, ವಿಶ್ಲೇಷಣಾತ್ಮಕ ಉಪಕರಣಗಳು, ಏರೋ ಸ್ಪೇಸ್ ಉದ್ಯಮ ಮತ್ತು ಇತರ ಪ್ರಮುಖ ಕೈಗಾರಿಕೆಗಳ ಕಾರ್ಯಾಚರಣೆಯಲ್ಲಿ ನಿರ್ಣಾಯಕ ಪಾತ್ರ ವಹಿಸಿದ ಇತ್ತೀಚಿನ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ವಿಶ್ವವಿದ್ಯಾಲಯದ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ತರಬೇತಿ ನೀಡುತ್ತದೆ ಎಂದು ತಿಳಿಸಿದರು. ಕೇಬಲ್ ಜೋಡಣೆ, ವೈರ್ ಹಾರ್ನೆಸಿಂಗ್, ಕನೆಕ್ಟರ್‌ಗಳು ಮತ್ತು ಎಲೆಕ್ಟ್ರಾನಿಕ್ ತಯಾರಿಕೆಯಲ್ಲಿ ಕೌಶಲ್ಯ ಹೊಂದಿರುವ ವಿಶ್ವವಿದ್ಯಾಲಯದ ಇಂಜಿನಿಯರಿಂಗ್ ಪದವೀಧರರಿಗೆ ದಕ್ಷಿಣ ಕೊರಿಯಾದಲ್ಲಿರುವ ತಮ್ಮ ಕಂಪನಿಯಲ್ಲಿ ಉದ್ಯೋಗವಕಾಶಗಳನ್ನು ಒದಗಿಸುವ ಬಗ್ಗೆ ಸೂನ್ ತಮ್ಮ ಆಸಕ್ತಿ ವ್ಯಕ್ತಪಡಿಸಿದರು ಮತ್ತು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ನೇಮಕಾತಿಗಾಗಿ ಅವರು ವಿಶ್ವವಿದ್ಯಾಲಯದ ಪ್ಲೇಸ್‌ಮೆಂಟ್ ಸೆಲ್‌ನೊಂದಿಗೆ ನಿಯಮಿತ ಸಂಪರ್ಕ ಹೊಂದಿರುತ್ತಾರೆ.

ಇದರ ಹೊರತಾಗಿ ಕಂಪನಿಯು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಮತ್ತು ತರಬೇತಿ ಕಾರ್ಯಕ್ರಮವನ್ನು ಒದಗಿಸುವಲ್ಲಿ ಮತ್ತು ಕೇಬಲ್ ಮತ್ತು ಕನೆಕ್ಟರ್ ಅಸೆಂಬ್ಲಿ ಪ್ರಕ್ರಿಯೆಯಲ್ಲಿ ವಿಶೇ ಪ್ರಾಯೋಗಿಕ ತರಬೇತಿಯನ್ನು ನೀಡುವಲ್ಲಿ ಮುಕ್ತ ಮನಸ್ಸಿನಿಂದ ಕೂಡಿದೆ ಎಂದರು. ಸೆಮಿನಾರ್‌ಗಳು, ಲೈವ್ ಪ್ರಾಜೆಕ್ಟ್‌ಗಳು, ಇಎಸ್‌ಡಿಎಂನಲ್ಲಿ ಉದ್ಯಮ ಪ್ರಾಯೋಜಿತ ಹ್ಯಾಕಥಾನ್‌ಗಳು, ಆಟೋಮೋಟಿವ್ ವೈರಿಂಗ್, ಏರೋಸ್ಪೇಸ್ ಹಾರ್ನೆಸಿಂಗ್ ಮತ್ತು ಡಿಜಿಟಲ್ ಪೂರೈಕೆ ನಿರ್ವಹಣೆ ಮತ್ತು ಇತರವುಗಳನ್ನು ಆಯೋಜಿಸುವಲ್ಲಿ ಶೈಕ್ಷಣಿಕವಾಗಿ ವಿಶ್ವವಿದ್ಯಾಲಯದೊಂದಿಗೆ ಸಂಪರ್ಕ ಸಾಧಿಸಲು ಕಂಪನಿಯು ಉತ್ಸುಕವಾಗಿದೆ ಎಂದು ಅವರು ಹೇಳಿದರು. ದಕ್ಷಿಣ ಕೊರಿಯಾದ ನಿಯೋಗದ ವಿಶ್ವವಿದ್ಯಾಲಯ ಭೇಟಿಗೆ ಪ್ರೊ.ಅನಿಲಕುಮಾರ ಬಿಡವೆ ತಮ್ಮ ಭಾಷಣದಲ್ಲಿ ಸಂತೋಷ ವ್ಯಕ್ತಪಡಿಸಿದರು ಮತ್ತು ವಿಶ್ವವಿದ್ಯಾಲಯ ಮತ್ತು ಕೇಬಲ್ ಕಂಪನಿಯ ನಡುವಿನ ಸಹಯೋಗವು ವಿದ್ಯಾರ್ಥಿಗಳು ಉದಯೋನ್ಮುಖ ಕ್ಷೇತ್ರಗಳಲ್ಲಿ ತರಬೇತಿ ಪಡೆಯಲು ಮತ್ತು ಉದ್ಯಮಕ್ಕೆ ಸಿದ್ಧರಾಗಲು ಸಹಾಯ ಮಾಡುತ್ತದೆ ಎಂದು ಹೇಳಿದರು.

# ಬಸವ ಜಯಂತಿ ದಿನದಂದು ಪಂಚಾಚಾರ್ಯ ಯುಗಮಾನೋತ್ಸವ: ಪಟ್ಟದ್ದೇವರು ವಿರೋಧ



**ಬೀದರ, ಏ. 28:** ಬಸವ ಜಯಂತಿ ದಿನದಂದೇ ಅಖಿಲ ಭಾರತ ವೀರಶೈವ ಲಿಂಗಾಯತ್ ಮಹಾಸಭೆಯು ಬೆಂಗಳೂರಿನಲ್ಲಿ ಪಂಚಾಚಾರ್ಯರ ಯುಗಮಾನೋತ್ಸವ ಹಮ್ಮಿಕೊಳ್ಳುವ ಮೂಲಕ ಗೊಂದಲ ಸೃಷ್ಟಿಸುತ್ತಿದ್ದು, ಕೂಡಲೇ ಈ ಕಾರ್ಯಕ್ರಮ ಆಚರಣೆ ಹಿಂಪಡೆಯಬೇಕು ಎಂದು ಲಿಂಗಾಯತ್ ಮಠಾಧೀಶರ ಒಕ್ಕೂಟದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಆಗ್ರಹಿಸಿದರು. ಬಸವ ಜಯಂತಿಯ ದಿನ ಪಂಚಾಚಾರ್ಯರ ಯುಗಮಾನೋತ್ಸವ ಹಮ್ಮಿಕೊಳ್ಳುವ ಮೂಲಕ ಬಸವ ಜಯಂತಿಯ ವಿಶೇಷತೆ, ಮಹತ್ವ ಹಾಗೂ ಐತಿಹಾಸಿಕತೆಯನ್ನು ಕುಗ್ಗಿಸುವ ಹುನ್ನಾರಕ್ಕೆ ಮಹಾಸಭೆ ಮುಂದಾಗಿದೆ. ಈಗಾಗಲೇ ನಾಡಿನಾದ್ಯಂತ ಅನೇಕ ಮಠಾಧೀಶರು ಹಾಗೂ ಬಸವಪರ ಸಂಘಟನೆಗಳು ವಿರೋಧ ವ್ಯಕ್ತಪಡಿಸಿವೆ. ನಾನೂ ಸಹ ಖುದ್ದಾಗಿ ಮಹಾಸಭಾ ರಾಜ್ಯಾಧ್ಯಕ್ಷ ಶಂಕರ ಬಿದ್ರಿ ಅವರಿಗೆ ಮೊಬೈಲ್ ಮೂಲಕ ಈ ಬೆಳವಣಿಗೆ ಸರಿಯಲ್ಲ ಎಂದು ಮನವಿಕೆ ಮಾಡಿದ್ದೇನೆ. ಆದರೂ ಸ್ಪಂದಿಸುತ್ತಿಲ್ಲ ಎಂದು ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಬೇಸರ ವ್ಯಕ್ತಪಡಿಸಿದರು. ಬಸವ ಜಯಂತಿ ದಿನದಂದು ಯಾವುದೇ ಕಾರಣಕ್ಕೂ ಬೇರೆ ಯಾರದೇ ಜಯಂತಿಗಳನ್ನು ವಿನಾಕಾರಣ ತಳಕು ಹಾಕುವುದು ಸರಿಯಲ್ಲ. ಈ ಹಿಂದಿನಿಂದಲೂ ವೀರಶೈವ ಲಿಂಗಾಯತ ಮಹಾಸಭೆ ಬಸವ ಜಯಂತಿಯನ್ನು ಅಚರಿಸಿಕೊಂಡು ಬರುತ್ತಿದ್ದು, ಈ ವರ್ಷ ಮಾತ್ರ ಅಂದು ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸಿ ಸಮಾಜದಲ್ಲಿ ಗೊಂದಲ ಮೂಡಿಸುತ್ತಿದೆ ಮತ್ತು ಬಸವ ಭಕ್ತರ ಭಾವನೆಗಳಿಗೆ ಧಕ್ಕೆ ತರುತ್ತದೆ. ಅಷ್ಟೇ ಅಲ್ಲ ಪಂಚಾಚಾರ್ಯ ಮಠಗಳಲ್ಲಿಯೂ ಬಸವೇಶ್ವರರ ಜಯಂತಿ ಮಾಡಿಕೊಂಡು ಬರಲಾಗುತ್ತಿದೆ. ಈಗಾಗಲೇ ಮಾ. 12ರಂದು ಪಂಚಾಚಾರ್ಯರ ಜಯಂತಿ ಆಚರಿಸಲಾಗಿದೆ. ಹೀಗಾಗಿ ಅಧ್ಯಕ್ಷ ಬಿದ್ರಿ ಅವರು ಸ್ವಾಭಿಮಾನಕ್ಕೆ ಬಿಳದೇ ಯುಗಮಾನೋತ್ಸವ ಆಚರಣೆ ನಿರ್ಣಯವನ್ನು ಹಿಂಪಡೆಯಬೇಕು. ಈ ಮೊದಲಿನಂತೆ ಬಸವ ಜಯಂತಿಯನ್ನು ಮಾತ್ರ ಆಚರಿಸಿ ತಮ್ಮ ಘನತೆಯನ್ನು ಹೆಚ್ಚಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು. ಯುಗಮಾನೋತ್ಸವ ಕೈಬಿಡುವಂತೆ ಒತ್ತಾಯಿಸಿ ಈಗಾಗಲೇ ಬೀದರನಲ್ಲಿ ಪ್ರತಿಭಟನೆ ನಡೆಸಲಾಗಿದೆ. ಎರಡನೇ ಹಂತದಲ್ಲಿ ಮಹಾಸಭಾ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಆಗಿರುವ ಸಚಿವ ಈಶ್ವರ ಖಂಡ್ರೆ ಅವರನ್ನು ನಿಯೋಗದ ಮೂಲಕ ಭೇಟಿಯಾಗಿ ಪಂಚಾಚಾರ್ಯರ ಯುಗಮಾನೋತ್ಸವವನ್ನು ಬೇರೆ ದಿನ ಆಯ್ಕೆ ಮಾಡುವಂತೆ ಬಿದ್ರಿ ಅವರಿಗೆ ನಿರ್ದೇಶನ ನೀಡಲು ಆಗ್ರಹಿಸಲಾಗುವುದು. ಇದಕ್ಕೂ ಒಪ್ಪದಿದ್ದರೆ ಬೆಂಗಳೂರಿನ ಮಹಾಸಭಾದ ಕಚೇರಿ ಎದುರು ನಾಡಿನ ಮಠಾಧೀಶರು ಮತ್ತು ಸಾವಿರಾರು ಬಸವ ಪರ ಸಂಘಟನೆಗಳಿಂದ ಧರಣಿ ನಡೆಸಿ, ಅಲ್ಲಿಯೇ ಬಸವ ಜಯಂತಿ ಆಚರಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ಪೂಜ್ಯರುಗಳಾದ ಶ್ರೀ ಸಿದ್ದರಾಮ ಶರಣರು ಬೆಲ್ದಾಳ್, ಶ್ರೀ ಗುರುಬಸವ ಪಟ್ಟದ್ದೇವರು, ಡಾ.ಗಂಗಾಂಬಿಕೆ ಅಕ್ಕ, ಶ್ರೀ ಚನ್ನಬಸವಾನಂದ ಸ್ವಾಮೀಜಿ, ಶ್ರೀ ಸಿದ್ದರಾಮೇಶ್ವರ ಸ್ವಾಮೀಜಿ, ಶ್ರೀ ಶಿವಾನಂದ ಸ್ವಾಮೀಜಿ, ಭಾರತೀಯ ಬಸವ ಬಳಗದ ಅಧ್ಯಕ್ಷ ಬಾಬು ವಾಲಿ, ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಬಸವರಾಜ ಧನ್ನೂರ್, ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಬುಳ್ಳಾ, ಪ್ರಮುಖರಾದ ಜಯರಾಜ ಬುಕ್ಕಾ, ಕುಶಾಲ ಪಾಟೀಲ ಗಾದಗಿ, ಶ್ರೀಕಾಂತ ಸ್ವಾಮಿ ಮತ್ತಿತರರಿದ್ದರು.

## ಭಾರಿ ಬಿರುಗಾಳಿ, ಮಳೆ: ಕಾರ್ ಶೋರೂಂ ಶೆಡ್‌ಗೆ ಹಾನಿ, ಲಕ್ಷಾಂತರ ನಷ್ಟ

**ರಾಯಚೂರು, ಏ. 28:** ಜಿಲ್ಲೆಯ ಲಿಂಗಸುಗೂರು ಪಟ್ಟಣದಲ್ಲಿ ನಿನ್ನೆ ಸಂಜೆ ಗುಡುಗು ಸಹಿತ ಭಾರೀ ಮಳೆಯೊಂದಿಗೆ ಬೀಸಿದ ಬಿರುಗಾಳಿಯಿಂದ ಬಸವ ಮೋಟಾರ್ಸ್ ಕಾರ್ ಶೋರೂಂನ ಶೆಡ್ ಕಿತ್ತು ಹೋಗಿ ಭಾರೀ ಅನಾಹುತ ಸಂಭವಿಸಿದೆ. ಈ ಘಟನೆಯಲ್ಲಿ ಕಾರ್ ಶೋರೂಂನ ಶೆಡ್ ಸಂಪೂರ್ಣವಾಗಿ ಹಾರಿಹೋಗಿದ್ದು, ಕಬ್ಬಿಣದ ಕಂಬಗಳು ಮತ್ತು ಶೆಡ್‌ನ ಭಾಗಗಳು ಕಾರುಗಳ ಮೇಲೆ ಬಿದ್ದು ಹಾನಿಯಾಗಿದೆ.

ಶೋರೂಂನಲ್ಲಿದ್ದ ಕಾರುಗಳಿಗೆ ಮಾತ್ರವೇ ಅಲ್ಲ, ಶೆಡ್‌ನೊಳಗೆ ಇದ್ದ ಮಿಷನ್‌ಗಳಿಗೂ ಗಂಭೀರ ಹಾನಿಯಾಗಿದೆ. ಈ ಘಟನೆಯಿಂದ ಲಕ್ಷಾಂತರ ರೂಪಾಯಿ ಮೌಲ್ಯದ ಆಸ್ತಿಪಾಸ್ತಿ ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ. ಘಟನೆಯು ಲಿಂಗಸುಗೂರು ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಬಿರುಗಾಳಿಯ ತೀವ್ರತೆಗೆ ಶೋರೂಂನ ಚಾವಣಿ ತಡೆದುಕೊಳ್ಳಲಾಗದೇ ಕುಸಿದು ಬಿದ್ದಿದೆ .ಪ್ರಕೃತಿಯ ಈ ಆಕಸ್ಮಿಕ ರೌದ್ರಾವತಾರದಿಂದ ಉಂಟಾದ ನಷ್ಟದ ಬಗ್ಗೆ ವಿವರವಾದ ತನಿಖೆ ನಡೆಯುತ್ತಿದ್ದು, ಲಿಂಗಸುಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆಯನ್ನು ಈ ನಡೆದಿದೆ.

# ಸಿಎಂ, ಮಹದೇವಪ್ಪ ಪುತ್ರರು ಕಾಶ್ಮೀರಕ್ಕೆ ಹೋಗಿದ್ರೆ ಗುಂಡು ಹೊಡೀತಿದ್ರು, ಜಮೀರ್ ಪುತ್ರ ಮಾತ್ರ ವಾಪಸ್ ಬರ್ತಿದ್ದ: ಯತ್ನಾಳ್



**ಬೀದರ, ಏ. 28:** ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಧರ್ಮ ಕೇಳಿ ಗುಂಡಿನ ದಾಳಿ ನಡೆಸಿದ ಪಾಕ್ ಪ್ರಚೋದಿತ ಉಗ್ರರು, ಕೇವಲ ಹಿಂದೂಗಳನ್ನೇ ಗುರಿಯಾಗಿಸಿ ಕೊಂದಿದ್ದಾರೆ. ಕರ್ನಾಟಕದ ಮೂವರೂ ಸೇರಿದಮತೆ 26 ಜನ ಬಲಿಯಾಗಿದ್ದಾರೆ. ಅಂದರೆ ಸಿಎಂ, ಸಚಿವರಾದ ಮಹಾದೇವಪ್ಪ, ಜಮೀರ ಪುತ್ರರೂ ಕಾಶ್ಮೀರಕ್ಕೆ ಹೋಗಿದ್ದರೆ ಗುಂಡುಹೊಡೀತಿದ್ರು. ವಾಪಸು ಬರುವುದು ಜಮೀರ ಪುತ್ರ ಮಾತ್ರ. ನಾನು ಈ ಕೇಡು ಬಯಸುವದಿಲ್ಲ.

ಆದರೆ ಅಲ್ಲಿನ ಪರಿಸ್ಥಿತಿ ಹಾಗೂ ಉಗ್ರರ ಮನಸ್ಥಿತಿ ಹಾಗಿದೆ. ಸಿದ್ದರಾಮಯ್ಯ ಯುದ್ಧ ಬೇಡವೆಂದು ಹೇಳಿರುವುದಕ್ಕೆ ಈ ಮಾತು ಹೇಳುತ್ತಿದ್ದೇನೆ. ಆದ್ದರಿಂದ ಪರಿಸ್ಥಿತಿ ಅಥ್ ಮಡಿಕೊಂಡು ಮಾತನಡಬೇಕು. ಕೇವಲ ತುಷ್ಟೀಕರಣವೊಂದೇ ರಾಜಕಾರಣವಲ್ಲ. ದೇಶದ ಬಗ್ಗೆಯೂ ವಿಚಾರ ಮಾಡಬೇಕು ಎಂಬುದು ತಮ್ಮ ಮಾತಿನ ತಾತ್ಪರ್ಯ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ತಿಳಿಸಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಶ್ಮೀರದಲ್ಲಿ ಯಾವ ಧರ್ಮದವರು ಎಂದು ಕೇಳಿ ಗುಂಡು ಹಾರಿಸಿದ್ದಾರೆ. ಅಲ್ಲದೇ ಅವರು ಸುಂತಿ ಮಾಡಿಕೊಂಡಿರುವದನ್ನು ಖಚಿತಪಡಿಸಿಕೊಳ್ಳಲು ಅವರುಗಳ ಪ್ಯಾಂಟ್ ಬಿಚ್ಚಿ ನೋಡಿದ್ದಾರೆ. ತನಿಖಾಧಿಕಾರಿಗಳು 26 ಶವಗಳಲ್ಲಿ 20 ಶವಗಳ ಪ್ಯಾಂಟ್ ಬಿಚ್ಚಿರುವುದು ಕಂಡು ಬಂದಿದೆ ಎಂದು ಖಚಿತಪಡಿಸಿದ್ದಾರೆ. ಆದರೂ ಈ ಮರಿ ಖರ್ಗೆ ಮತ್ತು ಇತರ ಕಾಂಗ್ರೆಸ್ ಮುಖಂಡರು ಧರ್ಮ ಕೇಳಿ ಗುಂಡು ಹಾರಿಸಿಲ್ಲ ಎಂದು ಪ್ರತಿಪಾದಿಸುತ್ತಿದ್ದಾರೆ. ಇವರಿಗೇನಾದರೂ ಮಾನ ಮರ್ಯಾದೆ ಇದೆಯೇ? ದೇಶಭಕ್ತಿ ಎಂಬುದನ್ನು ಪಾಕಿಸ್ತಾನದವರಿಗೆ ಮಾರಿಕೊಂಡಿದ್ದಾರೆ.

ಹಾಗಾಗಿ ಇದೀಗ ಎಲ್ಲ ಹಿಂದೂಗಳು ಒಂದಾಗುವ ಸಮಯ ಬಂದಿದೆ. ಕಾಶ್ಮೀರಕ್ಕೆ ಸಿಎಂ ಸಿದ್ದರಾಮಯ್ಯ ಪುತ್ರ, ಸಚಿವರಾದ ಮಹದೇವಪ್ಪ ಪುತ್ರ, ಜಮೀರ್ ಪುತ್ರ ಮತ್ತು ಮರಿ ಖರ್ಗೆ ಹೋಗಿದ್ದರೆ ಜಮೀರ್ ಪುತ್ರ ಮಾತ್ರ ವಾಪಸ್ ಬರ್ತಿದ್ದ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ನೀವೆಷ್ಟೇ ತುಷ್ಟೀಕರಣ ಮಾಡಿದರೂ ನಿಮ್ಮನ್ನು ಜೀವಂತವಾಗಿ ಬಿಡುತ್ತಿರಲಿಲ್ಲ. ಇದು ಶತಸಿದ್ಧ ಎಂಬುದನ್ನು ಅರ್ಥ ಮಾಡಿಕೊಂಡು ರಾಜಕಾರಣ ಮಾಡಿ. ದೇಶದ ಇಂಥ ಸ್ಥಿತಿಯಲ್ಲೂ ತುಷ್ಟೀಕರಣದ ಮಾತನಾಡುತ್ತಿರುವುದು ದುರಂತ. ನಿಮ್ಮ ಅಕ್ಕ–ಪಕ್ಕದಲ್ಲೇ ದೇಶದ್ರೋಹಿಗಳಿದ್ದಾರೆ ಎಂದು ಎಚ್ಚರಿಕೆ ನೀಡಿದರು.

ಯಾಕಂದ್ರೆ ಸಿದ್ದರಾಮಯ್ಯ ಮಹಾದೇವಪ್ಪ ಮಕ್ಕಳು ಹಿಂದೂಗಳು. ಸಿಎಂ ಸಿದ್ದರಾಮಯ್ಯಗೆ ಮಾನ ಮರ್ಯಾದೆ ಇಲ್ಲ. ಪಾಕಿಸ್ತಾನ ಏಜೆಂಟರಂತೆ ವರ್ತಿಸುತ್ತಾರೆ. ಯುದ್ಧ ಬೇಕಾಗಿಲ್ಲ ಎಂದು ಹೇಳೋಕೆ ಸಿದ್ದರಾಮಯ್ಯ ಯಾರು? ಸಿದ್ದರಾಮಯ್ಯನ ಕರ್ನಾಟಕದ ರಾಜ್ಯದ ಮುಖ್ಯಮಂತ್ರಿಯೋ? ಪಾಕಿಸ್ತಾನದ ಒಂದು ರಾಜ್ಯದ ಮುಖ್ಯಮಂತ್ರಿಯೋ? ಎಂದು ವಾಗ್ದಾಳಿ ನಡೆಸಿದರು. ದೇಶದಲ್ಲಿ ಎಲ್ಲಿಯವರೆಗೆ ಹಿಂದೂಗಳು ಒಗ್ಗಟ್ಟು ಆಗುವುದಿಲ್ಲವೋ ಇಂತಹ ನಾಯಕರನ್ನು ಸೋಲಿಸುವವರೆಗೆ ಹೀಗೇ ಮಾತನಾಡುತ್ತಾರೆ. ಕಾಂಗ್ರೆಸ್ನವರು ಮೊದಲು ಮಸೀದಿಗೆ ಹೋಗುತ್ತಿದ್ದರು. ಕಾಂಗ್ರೆಸ್ನವರು ಇತ್ತೀಚಿಗೆ ದೇವಸ್ಥಾನಕ್ಕೆ ಹೋಗುತ್ತಿದ್ದಾರೆ. ನಾವು ನಮ್ಮ ದೇಶದ ಪರವಾಗಿ ಮಾತನಾಡಬೇಕು. ಪಾಕಿಸ್ತಾನದ ಏಜೆಂಟರಂತೆ ಮಾತನಾಡಿದರೆ ಬೇರೆ ಅರ್ಥ ಬರುತ್ತದೆ. ಮೋದಿಗೆ ಮುಸ್ಲಿಂ ದೇಶಗಳಿಂದ ಬೆಂಬಲ ಸಿಗುತ್ತಿದೆ. ನಕಲಿ ಮುಸ್ಲಿಮರಿಂದಲ್ಲ ಎಂದು ಹೇಳಿದರು.

**ತನಿಖೆಯಾಗಲಿ..**

ಕಲಬುರಗಿಯಲ್ಲಿ ಭಜರಂಗದಳದವರು ರಸ್ತೆಯ ಮೇಲೆ ಪಾಕಿಸ್ತಾನ ಧ್ವಜಗಳನ್ನು ಅಂಟಿಸಿದ್ದರು. ಈ ಧ್ವಜಗಳನ್ನು ಮುಸ್ಲಿಮ್ ಹೆಣ್ಣು ಮಕ್ಕಳು ತೆಗೆದಿದ್ದಾರೆ. ಅವರಿಗೂ ಪಾಕಿಸ್ತಾನ ಧ್ವಜಕ್ಕೂ ಏನು ಸಂಬಂಧ? ಈ ಕುರಿತು ತನಿಖೆಯಾಗಲಿ. ಪೊಲೀಸರು ಈ ಮಹಿಳೆಯರನ್ನು ತನಿಖೆಗೆ ಒಳಪಡಿಸುವುದನ್ನು ಬಿಟ್ಟು ಧ್ವಜ ಅಂಟಿಸಿರುವ ಭಜರಂಗದಳದವರನ್ನು ಬಂದಿಸುವ ಮೂಲಕ ಕಾಂಗ್ರೆಸ್ ಚೇಲಾಗಳಂತೆ ವರ್ತಿಸಿದ್ದಾರೆ. ನೀವು ಕಾಂಗ್ರೆಸ್ ನೌಕರರಲ್ಲ. ಜನರ ನೌಕರರು. ನಿಮಗೆ ಬರುವ ಸಂಬಳ ಸಾರ್ವಜನಿಕರ ತೆರಿಗೆ ಹಣದಿಂದ. ಆದ್ದರಿಂದ ಸಾರ್ವಜನಿಕ ಹಿತಾಸಕ್ತಿಯನ್ನು ಮತ್ತು ದೇಶದ ಸ್ವಾತಂತ್ರ್ಯವನ್ನು ಗಮನದಲ್ಲಿಟ್ಟುಕೊಂಡು ಕೆಲಸ ಮಾಡಬೇಕು ಎಂದು ಬಸವನಗೌಡ ಪಾಟೀಲ್ ಯತ್ನಾಳ್ ಪೊಲೀಸರಿಗೆ ಕಿವಿಮಾತು ಹೇಳಿದರು.




ಬೆಳಗಾವಿಯಲ್ಲಿ ಸೋಮವಾರ ನಡೆದ 'ಸಂವಿಧಾನ ಉಳಿಸಿ, ರಾಷ್ಟ್ರ ಉಳಿಸಿ ರ್‍ಯಾಲಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್ ಪಾಲ್ಗೊಂಡಿದ್ದರು.

# ಕಲಬುರಗಿಯಲ್ಲೂ ಇದ್ದಾರೆ ಪಾಕ್ ಪ್ರಜೆಗಳು ಕಳೆದ 20 ವರ್ಷಗಳಿಂದ 9 ಮಂದಿ ವಾಸ; ಪೊಲೀಸ್ ಆಯುಕ್ತ ಡಾ.ಶರಣಪ್ಪ



**ಕಲಬುರಗಿ, ಏ. 28:** ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಏ.22ರಂದು ನಡೆದ ಉಗ್ರರ ದಾಳಿ ಪ್ರಕರಣಕ್ಕೆ ಸಂಬಂಧಿಸಿ ದೇಶದ ಎಲ್ಲಾ ರಾಜ್ಯಗಳಲ್ಲಿನ ಪಾಕ್ ಪ್ರಜೆಗಳನ್ನು ಹೊರಹಾಕುವಂತೆ ಕೇಂದ್ರ ಸರ್ಕಾರ ಈಗಾಗಲೇ ನಿರ್ದೇಶನ ನೀಡಿದೆ. ಕೇಂದ್ರ ಸರ್ಕಾರದ ನಿರ್ದೇಶನ ನಿಮಿತ್ಯ ಜಿಲ್ಲೆಯಲ್ಲಿನ ಪಾಕಿಸ್ತನ ಪ್ರಜೆಗಳ ಸಂಖ್ಯೆ ಮಾಹಿತಿಯನ್ನು ಕಲೆಹಾಕಿದ್ದು, ಅವುಗಳ ವಿವರಗಳನ್ನು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಅವರು ಸುದ್ದಿಗೋಷ್ಠಿಯಲ್ಲಿಂದು ವಿವರಿಸಿದರು. ಪೊಲೀಸ್ ಆಯುಕ್ತರ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದಲ್ಲಿ 9 ಜನ ಪಾಕಿಸ್ತಾನ ಪ್ರಜೆಗಳು ಅಧಿಕೃತವಾಗಿ ವಾಸವಾಗಿದ್ದಾರೆ. ಅವರೆಲ್ಲರನ್ನೂ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ವಾಪಸ್ ತೆರಳಲು ಸೂಚನೆ ನೀಡಲಾಗಿದೆ. ಅನಧಿಕೃತವಾಗಿ ಎಷ್ಟು ಜನರು ಇದ್ದಾರೆಂಬ ನಿಖರ ಮಾಹಿತಿ ಇಲ್ಲ. ಸರ್ಕರದ ಸೂಚನೆಯ ಮೇರೆಗೆ ಅದನ್ನೂ ಸಂಗ್ರಹಿಸುವುದಾಗಿ ತಿಳಿಸಿದರು. ನಗರದಲ್ಲಿ ಒಟ್ಟು 9 ಜನ ಪಾಕಿಸ್ತಾನ ಪ್ರಜೆಗಳು ವಾಸವಾಗಿದ್ದು, ಆ ಪೈಕಿ ಇಬ್ಬರು ಲಾಂಗ್ ಟರ್ಮ್ ವೀಸಾ ಹೊಂದಿದ್ದಾರೆ. 7 ಜನ ವಿಸಿಟರ್ಸ್ ವೀಸಾ ಹೊಂದಿದ್ದು, ಇವರೆಲ್ಲರೂ ಕಳೆದ 20 ವರ್ಷಗಳಿಂದ ಕಲಬುರಗಿ ನಗರದಲ್ಲಿ ವಾಸವಾಗಿದ್ದಾರೆ.

ಮಾರ್ಗಸೂಚಿ ಪ್ರಕಾರ ಅವರಿಗೆ ಪಾಕಿಸ್ತಾನಕ್ಕೆ ಹಿಂತಿರುಗಲು ಸೂಚಿಸಲಾಗಿದೆ ಎಂದು ಕಮೀಷನರ್ ಡಾ.ಶರಣಪ್ಪ ತಿಳಿಸಿದರು. ಏಳು ಜನ ವಿಸಿಟರ್ಸ್ ವೀಸಾ ಹೊಂದಿದವರಲ್ಲಿ ಓರ್ವ ಮಹಿಳೆ ಅನುಮತಿ ಪಡೆದು ಅಮೆರಿಕಾ ಪ್ರವಾಸಕ್ಕೆ ತೆರಳಿದ್ದು, ಇನ್ನುಳಿದ 6 ಜನರಿಗೂ ನಾವು ಈಗಾಗಲೇ ಮಾಹಿತಿ ನೀಡಿದ್ದು, ಅವರಲ್ಲಿ ಮೂವರು ಮಹಿಳೆಯರು ಹಾಗೂ ಮೂವರು ಪುರುಷರು ಇದ್ದಾರೆ ಎಂದು ಮಾಹಿತಿ ನೀಡಿದರು.

ಬಂಗ್ಲಾದೇಶಿಯರು ಕಲಬುರಗಿಯಲ್ಲಿದ್ದಾರೆಯೇ? ಗುಜರಾತ್‌ನಲ್ಲಿ ಅಕ್ರಮ ಬಂಗ್ಲಾ ವಲಸಿಗರನ್ನು ಹೊರಹಾಕುತ್ತಿದ್ದಾರೆ. ಕಲಬುರಗಿಯಲ್ಲಿ ಅಂಥ ಕ್ರಮವೇನಾದರೂ ಕೈಕೊಳ್ಳಲಗುತ್ತಿದೆಯೇ? ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಬಂಗ್ಲಾ ದೇಶಿಯರೂ ಇದ್ದಾರೆ, ಆದರೆ ನಿಖರ ಮಾಹಿತಿ ಸದ್ಯ ಲಭ್ಯವಿಲ್ಲ. ವಿಸಾ ಪಡೆದವರು ಪಡೆಯದೇ ಬಂದವರೂ ಇರಬಹುದು. ಸರ್ಕಾರ ಈ ಬಗ್ಗೆ ಸೂಚಿಸಿದರೆ, ಅದರ ಮಾಹಿತಿಗಳನ್ನು ಕಲೆಹಾಕಿ ಸರ್ಕರದ ಸೂಚನೆಯಂತೆ ಕ್ರಮ ಜರುಗಿಸಲಾಗುವುದು ಎಂದೂ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಡಿಸಿಪಿ ಕನಿಕಾ ಸಿಕ್ರಿವಾಲ್ ಸೇರಿದಂತೆ ಇತರೆ ಹಿರಿಯ ಅಧಿಕಾರಿಗಳು ಇದ್ದರು.

# ಕಾಂಗ್ರೆಸ್ ಹಿಂದೂಗಳ ಪಕ್ಷವೇ ಅಲ್ಲ, ಅದು ಹುಟ್ಟಿದ್ದು ಮುಸ್ಲಿಮರಿಗಾಗಿ: ಶಾಸಕ ಬಸನಗೌಡ ಪಾಟೀಲ

**ಹುಬ್ಬಳ್ಳಿ, ಏ. 28:** ಕಾಂಗ್ರೆಸ್ ಹಿಂದೂಗಳ ಪಕ್ಷವೇ ಅಲ್ಲ. ಅದು ಹುಟ್ಟಿದ್ದು ಮುಸ್ಲಿಮರಿಗಾಗಿ. ಎಲ್ಲಿಯವರಗೆ ದೇಶದಲ್ಲಿ ಮುಸ್ಲಿಮರು ಇರುತ್ತಾರೋ ಅಲ್ಲಿವರೆಗೆ ಅವರು ಕಲ್ಲು ಹೊಡೆಯುವವರು. ಸಿಎಂ ಸಿದ್ದರಾಮಯ್ಯ ಪಾಕಿಸ್ತಾನ ಏಜೆಂಟ್ ಇದ್ದಂತೆ. ಅವರು ಬೇಕಾದರೆ ಪಾಕಿಸ್ತಾನಕ್ಕೆ ಹೋಗಿ ಪ್ರಧಾನಿಯಾಗಲಿ. ಯಾರು ಬೇಡ ಅಂತಾರೇ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂತೋಷ ಲಾಡ್ ಮೋದಿ ಮುಂದೆ ಬಚ್ಚಾ. ಅವರ ಬಗ್ಗೆ ಹೀಯಾಳಿಸಿ ಮಾತನಾಡಿದರೆ ಸೋನಿಯಾ, ರಾಹುಲ್ ಗಾಂಧಿ ಖುಷಿಯಾಗುತ್ತಾರೆ. ತನ್ನ ಮಂತ್ರಿ ಸ್ಥಾನ ಉಳಿಯುತ್ತದೆ ಎಂದು ಆ ರೀತಿ ಮಾತನಾಡುತ್ತಿದ್ದಾರೆ. ಪ್ರಧಾನಿ ಮೋದಿ ಬಗ್ಗೆ ಮಾತನಾಡಲು ಕಾಂಗ್ರೆಸ್‌ಗೆ ನೈತಿಕತೆ ಇಲ್ಲ ಎಂದು ಕುಟುಕಿದರು.ಅಂಬೇಡ್ಕರ್ ಹೇಳಿದ್ದು ನೋಡಿದರೆ ಒಬ್ಬ ದಲಿತ ಕೂಡ ಕಾಂಗ್ರೆಸ್‌ಗೆ ಮತ ಹಾಕಬಾರದು ಎಂದರು.ರೈಲ್ವೇ ಪರೀಕ್ಷೆಯಲ್ಲಿ ಮಂಗಳಸೂತ್ರ, ಕುಂಕುಮ, ಜನಿವಾರ ನಿಷೇಧ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಯಾರೇ ಈ ರೀತಿ ಮಾಡಿದರು ಕೂಡ ಅದು ತಪ್ಪೆ. ಮಂಗಳಸೂತ್ರ, ಕುಂಕುಮಕ್ಕೆ ಕೈ ಹಾಕಿದವರನ್ನು ವಜಾ ಮಾಡಬೇಕು ಎಂದು ಆಗ್ರಹಿಸಿದರು.ಶಾಸಕರ ವಜಾ ರದ್ದುಗೊಳಿಸಲು ಬಿಜೆಪಿ ರಾಜ್ಯಪಾಲರಿಗೆ ಮನವಿ ವಿಚಾರವಾಗಿ, ಶಾಸಕರು ಸಭಾಧ್ಯಕ್ಷರ ಅಂಕಣಕ್ಕೆ ಹೋಗಿ ದಾಂಧಲೇ ಮಾಡು ಅಂತ ಹೇಳಿದವರೇ ವಿಜಯೇಂದ್ರ. ಬಿಜೆಪಿಯ ರಾಜ್ಯಾಧ್ಯಕ್ಷನಾಗಿ ಈ ರೀತಿ ಸೂಚನೆ ನೀಡಿದ್ದೇ



ಆತ. ಅಪ್ರಭುದ್ದ ವ್ಯಕ್ತಿಯನ್ನು ಅಧ್ಯಕ್ಷ ಮಾಡಿದ್ದು ತಪ್ಪು. ವಿಧಾನಸಭೆ ಅಧ್ಯಕ್ಷರ ಕುರ್ಚಿ ಬಳಿ ಹೋಗಿ ಯಾರು ಹೋರಾಟ ಮಾಡಿದರು ತಪ್ಪೇ. ಸದನದ ಬಾವಿಯಲ್ಲಿ ಮಾತ್ರ ಶಾಸಕರು ಹೋರಾಟ ನಡೆಸಬೇಕು ಎಂದು ಸಭಾಧ್ಯಕ್ಷರ ಕ್ರಮ ಸಮರ್ಥಿಸಿಕೊಂಡರು.ಪಾಕಿಸ್ತಾನವು ಅಣುಬಾಂಬ್ ದಾಳಿ ಮಾಡುವುದಾಗಿ ಹೇಳಿಕೆ ಕುರಿತು, ನಮ್ಮಲ್ಲಿರುವ ಅಣು ಬಾಂಬ್‌ಗಳು ಪಟಾಕಿ ಹಚ್ಚಲು ಅಲ್ಲ. ಪಾಕಿಸ್ತಾನ ಮೇಲೆ ನಮ್ಮಲ್ಲಿರುವ ನಾಲ್ಕು ಒಗೆದರೆ ಸಾಕು ಅವರು ಸರ್ವನಾಶ ಆಗುತ್ತಾರೆ. ಭಾರತದ ಶಕ್ತಿಯನ್ನು ಯಾರು ಹಗುರವಾಗಿ ಪರಿಗಣಿಸಬಾರದು. ನೆಹರು ಇದ್ದ ಕಾಲದ ಭಾರತ ಈಗಿಲ್ಲ. ವಿಶ್ವದಲ್ಲೇ ಬಲಿಷ್ಠವಾಗಿದೆ ಎಂದರು.ಈ ಬಾರಿ ಪಾಕಿಸ್ತಾನ ಅಂತ್ಯವಾಗಬೇಕು. ಭಾರತದಲ್ಲಿ ಬೆನ್ನಿಗೆ ಚೂರಿ ಹಾಕುವವರು ಹೆಚ್ಚಾಗಿದ್ದಾರೆ. ಹೀಗಾಗಿ ದೇಶವು ಒಳಗಿನಿಂದ ಮತ್ತು ಹೊರಗಿನಿಂದ ವೈರಿಗಳನ್ನು ಎದುರಿಸಬೇಕಿದೆ. ಯುದ್ಧವಾದರೆ ಅವರ ಅಸಲಿತನ ಹೊರಗೆ ಬರುತ್ತದೆ. ಪಾಕಿಸ್ತಾನ ಜೊತೆ ಬಾಂಗ್ಲಾದೇಶ ಸಹ ನಾಶವಾಗಬೇಕು. ಅವೆರಡು ಭಾರತದೊಳಗೆ ಸೇರಬೇಕು ಎಂದರು.ವಿಜಯಪುರದಲ್ಲಿ ತಮ್ಮ ವಿರುದ್ಧ ಪ್ರತಿ ಘಟನೆ ವಿಚಾರವಾಗಿ, ಕರ್ನಾಟಕದಲ್ಲಿ ನಾನು ಹಿಂದೂ ಪರ ಮಾತನಾಡಿದ್ದು ಅವರಿಗೆ ನೋವಾಗಿದೆ. ನನ್ನನ್ನು ಏನು ಒದ್ದು ಒಳಗೆ ಹಾಕುತ್ತಾರೆ. ಈಗಾಗಲೇ ಹುಬ್ಬಳ್ಳಿಯಲ್ಲಿ ಮಾತನಾಡಿದ ಪ್ರಕರಣಕ್ಕೆ ಸಂಬಂಧಿಸಿ ಹೈಕೋರ್ಟ್ ತಡೆ ನೀಡಿದೆ ಎಂದರು.

## ಶಾಸಕ ವಿಜಯಾನಂದ ಕಾಶಪ್ಪನವರ್ ಕಿಡಿ

**ಬಾಗಲಕೋಟೆ:** ಶಾಸಕ ವಿಜಯಾನಂದ ಕಾಶಪ್ಪನವರ್ ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ವಾಗ್ದಾಳಿ ನಡೆಸಿದ್ದು, ಯತ್ನಾಳ ವಿವಾದಾತ್ಮಕ ಹೇಳಿಕೆ ನೀಡುವುದು ಸರಿಯಲ್ಲ. ಯತ್ನಾಳ್ ಒಬ್ಬ ಹುಚ್ಚು ನಾಯಿ, ಆತನಿಗೆ ದಯೆಯೂ ಇಲ್ಲ ಧರ್ಮವು ಇಲ್ಲ ಎಂದು ಆಕ್ರೋಶ ಹೊರಹಾಕಿದ್ದಾರೆ.ಶಾಸಕ ಯತ್ನಾಳ್ ವಿವಾದಾತ್ಮಕ ಹೇಳಿಕೆ ನೀಡುವುದು ಸರಿಯಲ್ಲ.ದಯವೇ ಧರ್ಮದ ಮೂಲವಯ್ಯ ಎಂದು ಬಸವಣ್ಣನವರ ವಚನ ಹೇಳಿ ಯತ್ನಾಳ್ ವಿರುದ್ಧ ಶಾಸಕ ವಿಜಯಾನಂದ ಕಾಶಪ್ಪನವರ ಆಕ್ರೋಶ ಹೊರ ಹಾಕಿದರು. ಯತ್ನಾಳ್ ಒಬ್ಬ ನರಪಿಳ್ಳೆ, ಯತ್ನಾಳ್ ಗೆ ದಯೆಯೂ ಇಲ್ಲ ಧರ್ಮವೂ ಇಲ್ಲ ಯತ್ನಾಳ್ ಒಬ್ಬ ಹುಚ್ಚು ನಾಯಿ ಗೊಡ್ಡು ಎಮ್ಮೆ ಎಂದು ಶಾಸಕ ವಿಜಯಾನಂದ ಕಾಶಪ್ಪನವರ ಕಿಡಿಕಾರಿದರು.

# ಸಿಇಟಿ ಜನಿವಾರಕ್ಕೆ ಕತ್ತರಿ ಪ್ರಕರಣ ಸಚಿವರ ಸಲಹೆಯ ಸರಾಸರಿ ಅಂಕಕ್ಕೆ ಒಪ್ಪಿದ ಸುಚಿವ್ರತ್

**ಬೀದರ್, ಏ. 28:** ಜನಿವಾರ ಹಾಕಿಕೊಂಡ ಕಾರಣಕ್ಕೆ ಕೆ–ಸಿಇಟಿ (ಗಣಿತ) ಪರೀಕ್ಷೆಯಿಂದ ವಂಚಿತರಾಗಿದ್ದ ಬೀದರ್ ನಗರದ ವಿದ್ಯಾರ್ಥಿ ಸಚಿವ್ರತ ಕುಲಕರ್ಣಿ ಸರ್ಕಾರದ ಪ್ರಸ್ತಾಪಕ್ಕೆ ಒಪ್ಪಿಗೆ ನೀಡಿದ್ದು, ಇದರೊಂದಿಗೆ ಸಮಸ್ಯೆ ಇತ್ಯರ್ಥವಾದಂತಾಗಿದೆ ಸಿಇಟಿ ಮರುಪರೀಕ್ಷೆ ಬರೆಯುವುದು ಅಥವಾ ಭೌತಶಾಸ್ತ್ರ, ರಸಾಯನಶಾಸ್ತ್ರ ವಿಷಯದ ಸರಾಸರಿ ಅಂಕಗಳ ಆಧಾರವಾಗಿ ಪರಿಗಣಿಸಿ ಗಣಿತಕ್ಕೆ ಅಂಕ ನೀಡುವ ಎರಡು ಪ್ರಸ್ತಾವಗಳನ್ನು ರಾಜ್ಯ ಸರ್ಕಾರ ವಿದ್ಯಾರ್ಥಿಯ ಮುಂದಿಟ್ಟಿತ್ತು.

ಪರೀಕ್ಷೆ ಬರೆದ ಎರಡು ವಿಷಯಗಳ ಸರಾಸರಿ ಅಂಕ ನೀಡುವ ಪ್ರಸ್ತಾವಕ್ಕೆ ಒಪ್ಪಿದ್ದು, ಈ ಕುರಿತು ಉನ್ನತ ಶಿಕ್ಷಣ ಸಚಿವರಿಗೆ ಪತ್ರ ಬರೆದಿದ್ದಾರೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವೃತ್ತಪರ ಕೋರ್ಸಗಳಿಗಾಗಿ ಕಳೆದ ಏ.17 ರಂದು ನಡೆಸಿದ ಸಿಇಟಿ ಪರೀಕ್ಷೆ ವೇಳೆ ನಗರದ ಸಾಯಿ ಸ್ಫೂರ್ತಿ ಕಾಲೇಜು ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಗೆ ಪ್ರವೇಶಕ್ಕೆ ಜನಿವಾರ ತೆಗೆಯಲು ಸಿಬ್ಬಂದಿ ಸೂಚಿಸಿದ್ದರು. ಇದಕ್ಕೆ ಸುಚಿವ್ರತ್ ಒಪ್ಪದ ಕಾರಣ ಪರೀಕ್ಷೆಗೆ ನಿರಾಕರಿಸಿದ್ದರು. ಈ ಘಟನೆ ಸಂಬಂಧ ಪರೀಕ್ಷಾ ಕೇಂದ್ರದ ಇಬ್ಬರು ಸಿಬ್ಬಂದಿಗಳನ್ನು ಅಮಾನತ್ತು ಮಾಡಲಾಗಿತ್ತು

# ಬಳ್ಳಾರಿಯ ಎಪಿಎಂಸಿ ಮಾರುಕಟ್ಟೆಯಲ್ಲಿ ಸರ್ವರ್ ಸಮಸ್ಯೆ

**ಬಳ್ಳಾರಿ ಏ 28.** ಹಿಂಗಾರು ಹಂಗಾಮಿನಲ್ಲಿ ಬೆಳೆದಿರುವ ಜೋಳವನ್ನು ಬೆಂಬಲ ಬೆಲೆಯಲ್ಲಿ ಮಾರಾಟ ಮಾಡಲು ನೋಂದಣಿ ಮಾಡಿಸಲು ನಗರದ ಎಪಿಎಂಸಿ ಮಾರುಕಟ್ಟೆಗೆ ರೈತರು ಸಾಲು ಕಟ್ಟಿದ್ದಾರೆ. ಆದರೆ ಸರ್ವರ್ ಪ್ರಾಬ್ಲಂನಿಂದ ನೊಂದಣಿ ಆಗಲಿಲ್ಲ. ಅದಕ್ಕೆ ಸಿಟ್ಟಿಗೆಸದಸ ರೈತರು ಬಿಸಿಲಿನ ತಾಪಕ್ಕೆ ಸಾಲಿನಲ್ಲಿ ನಿಲ್ಲಲಾರದೇ ಅವರ ಚಪ್ಪಲಿಗಳನ್ನು ಸಾಲಿಗೆ ಬಿಟ್ಟು ನೆರಳಿಗೆ ಮಲಿಗಿದ್ದಾರೆ.



ಬೆಳಿಗಿನಿಂದ ಮಧ್ಯಾಹ್ನ 2 ವರೆಗೂ ಸರ್ವರ್ ಇಲ್ಲ ಎಂದು ನೋಂದಣಿಯೇ ಮಾಡಿಲ್ಲ. ಇದರಿಂದ ಹಳ್ಳಿಯಿಂದ ಬಂದ ರೈತರು ಊಟ ಇಲ್ಲದೇ, ನೊಂದಣೆ ಇಲ್ಲದೇ ಆಕ್ರೋಶವನ್ನು ವ್ಯಕ್ತ ಪಡಿಸಿದ್ದಾರೆ. ಸರ್ವರ್ ಸಮಸ್ಯೆ ಬಗ್ಗೆ ಸಂಬಂಧಿಸಿದ ಸಿಬ್ಬಂದಿ, ಅಧಿಕಾರಿಗಳನ್ನು ಕೇಳಿದರೆ ನಾವೇನು ಮಾಡೋಣ ಎನ್ನುತ್ತಾರೆ.

ಒಂದಡೆ ಕಷ್ಟಪಟ್ಟು ಬೆಳೆದ ಬೆಳೆ ಮಾರಾಟಕ್ಕೂ ಈ ಸರ್ಕಾರಗಳು ಸರಿಯಾದ ವ್ಯವಸ್ಥೆ ಮಾಡದೆ ರೈತರನ್ನು ಸಂಕಷ್ಟಕ್ಕೆ ದೂಡುತ್ತಿದೆ ಎಂದು ಸರಕಾರದ ವಿರುದ್ಧ ಸಿಡಿದೆದ್ದಿದ್ದಾರೆ. ಎಪಿಎಂಸಿಯ ಜೋಳ ಖರೀದಿ ಕೇಂದ್ರದಲ್ಲಿ ರೈತರ ಗೋಳು ಕೇಳೋರು ಯಾರು ಇಲ್ಲಾ. ಇಲ್ಲಿಯವರೆಗೆ ಸರ್ವರ್ ಇಲ್ಲಾ ಎಂದು ಅಧಿಕಾರಿಗಳು ರೈತರಿಗೆ ಹೇಳಿ ಕೈ ತೊಳೆದುಕೊಳ್ಳುತ್ತಿದ್ದಾರೆ.

ಜನ ಪ್ರತಿನಿದಿಗಳು ಒಮ್ಮೆ ಈ ರೈತರ ಗೋಳನ್ನು ಕೇಳಲಾದರೂ ಬನ್ನಿ ಹಳ್ಳಿಗಳಿಂದ ಬಂದ ರೈತರಿಗೆ ಊಟ ಇಲ್ಲದೆ ಪರದಾಟ ಮಾಡುವ ಪರಸ್ಥಿತಿ ಬಂದಿದೆ ಎಂದು ಗೋಳಾಡುತಿದ್ದಾರೆ.

# ಬಳ್ಳಾರಿ ಜಿಲ್ಲಾ ಕೇಂದ್ರದಲ್ಲಿ ಭಗವಾನ್ ಬುದ್ಧ ಜಯಂತಿ ಅರ್ಥಪೂರ್ಣ ಆಚರಣೆ: ಸಹಾಯಕ ಆಯುಕ್ತ ಪ್ರಮೋದ್

**ಬಳ್ಳಾರಿ,ಏ.28.** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಮೇ 12 ರಂದು ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ಹೇಳಿದರು.ಸೋಮವಾರ, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಗವಾನ್ ಬುದ್ಧ ಜಯಂತಿ ಆಚರಣೆ ಕುರಿತು ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಭಗವಾನ್ ಬುದ್ಧನ ಜಯಂತಿ ಕಾರ್ಯಕ್ರಮವನ್ನು ಆಚರಿಸಲು ರಾಜ್ಯ ಸರ್ಕಾರದ ನಿರ್ದೇಶನವಿದ್ದು, ಜಿಲ್ಲಾ ಕೇಂದ್ರದಲ್ಲಿ ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಬೇಕಾದ ಎಲ್ಲಾ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಮೇ 12 ರಂದು ಸಂಜೆ 06.30 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮ ಆಚರಿಸಲು ನಿರ್ಧರಿಸಲಾಗಿದ್ದು, ಜಯಂತಿ ಕಾರ್ಯಕ್ರಮ ನಡೆಯುವ ಸ್ಥಳದ ಸ್ವಚ್ಛತೆ, ಆಸನಗಳ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ



ಹಾಗೂ ಇತರೆ ವ್ಯವಸ್ಥೆ ಮಾಡಬೇಕು ಎಂದು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಂದು ಸಂಜೆ 04.30 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಿಂದ ಜಯಂತಿ ಅಂಗವಾಗಿ ಭವ್ಯ ಮೆರವಣಿಗೆ ನಡೆಯಲಿದೆ. ಮೆರವಣಿಗೆಯು ಮುನಿಸಿಪಲ್ ಕಾಲೇಜು ಮೈದಾನ–ಗಡಿಗಿ ಚೆನ್ನಪ್ಪ ವೃತ್ತ–ಬೆಂಗಳೂರು ರಸ್ತೆ–ಬ್ರೂಸ್‌ಪೇಟೆ ಪೊಲೀಸ್ ಠಾಣೆ ಮುಂಭಾಗ–ಜೈನ್ ಮಾರ್ಕೆಟ್ ರಸ್ತೆ–ಹೆಚ್. ಆರ್.ಗವಿಯಪ್ಪ ವೃತ್ತ–ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆ ಕಾರ್ಯಕ್ರಮದವರೆಗೆ ನಡೆಯಲಿದೆ. ಜಯಂತಿ ಆಚರಣೆ ಸಂದರ್ಭದಲ್ಲಿ ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು. ಬುದ್ಧ ಗಾಯನ ಕಾರ್ಯಕ್ರಮ ಏರ್ಪಡಿಸಲಾಗುವುದು. ಮಹಾನ್ ವ್ಯಕ್ತಿಗಳ ವಿಚಾರಧಾರೆಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದ್ದು, ಈ ನಿಟ್ಟಿನಲ್ಲಿ ನುರಿತ ಉಪನ್ಯಾಸಕರಿಂದ ವಿಶೇಷ ಉಪನ್ಯಾಸ ಆಯೋಜಿಸಲಾಗುವುದು ಎಂದರು. ಜಯಂತಿ ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾತಂಡಗಳನ್ನು ನಿಯೋಜಿಸಲಾಗುವುದು. ಜಯಂತಿ ಕಾರ್ಯಕ್ರಮಗಳಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಬೇಕು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ಬುದ್ಧ ವಿಹಾರ ಧ್ಯಾನ ಕೇಂದ್ರ ಆರಂಭಿಸಬೇಕು ಎಂದು ಸಭೆಯಲ್ಲಿ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪ್ರಸ್ತಾಪಿಸಿದರು. ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಮತ್ತೀತರರು ಉಪಸ್ಥಿತರಿದ್ದರು.

# ಕಂಪ್ಲಿ ತಾಲೂಕಿನಲ್ಲಿ ಅಪಾರ ಪ್ರಮಾಣದ ಭತ್ತದ ಬೆಳೆ ನಾಶ ಜೆಡಿಎಸ್ ಬಳ್ಳಾರಿ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಪರಿಶೀಲನೆ

**ಬಳ್ಳಾರಿ ಏ 28;** ಕಂಪ್ಲಿ ತಾಲ್ಲೂಕಿನಲ್ಲಿ ಸುರಿದ ಅನೇಕಲ್ಲು ಮಳೆಯಿಂದ ಭತ್ತದ ಬೆಳೆ ಹಾನಿಗೀಡಾಗಿದೆ. ಶನಿವಾರ ಸುರಿದ ಮಳೆಯಿಂದ ಹೊಸ ದರೋಜಿ ಸೋಮಲಾಪುರ ಸೇರಿದಂತೆ ಹಲವು ಗ್ರಾಮಗಳ ಜಮೀನುಗಳಲ್ಲಿ ಬೆಳೆದ ಅಪಾರ ಪ್ರಮಾಣದ ಭತ್ತದ ಬೆಳೆ ನೆಲಕ್ಕುರುಳಿ ಹಾನಿ ಸಂಭವಿಸಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಹಳ್ಳಿ ತಾಯಣ್ಣ ತಿಳಿಸಿದ್ದಾರೆ. ಬೆಳೆದ ಬೆಳೆಯಿಂದಾಗಿ ಆಕಾಲಿಕ ಮಳೆಯಿಂದ



ರೈತರ ಆತಂಕಕ್ಕೆ ಕಾರಣವಾಗಿದೆ. ತಾಲ್ಲೂಕಿನ ಕಂದಾಯ ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳು ಕೂಡಲೇ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿದ್ದಾರೆ ಅಕಾಲಿಕ ಮಳೆಯಿಂದ ಸಂಭವಿಸಿದ ಬೆಳೆ ಹಾನಿ ಸಮೀಕ್ಷೆ ನಡೆಸಬೇಕು.

ಸರ್ಕಾರಕ್ಕೆ ವರದಿ ಸಲ್ಲಿಸಿ ರೈತರಿಗೆ ಪರಿಹಾರ ಮಂಜೂರು ಮಾಡಿಸಬೇಕು ಎಂದರು ಜೆಡಿಎಸ್ ರಾಜ್ಯ ಉಪಾಧ್ಯಕ್ಷರಾದ ರಾಜುನಾಯ್ಕ ಮಾತನಾಡಿ ಜಗತ್ತಿನಲ್ಲೂ ಎಲ್ಲರಿಗೂ ಬೆಲೆ ಇದೆ ಆದರೆ ರೈತರಿಗೆ ಮಾತ್ರ ರಕ್ಷಣೆ ಇಲ್ಲ ಅವರ ಬೆಳೆದ ಬೆಳೆಗೆ ಬೆಲೆ ಇಲ್ಲ ರೈತರ ಜೀವನ ಯಾರು ಕೇಳಬೇಕು ಎಂದು ಬೇಸರ ವ್ಯಕ್ತ ಪಡಿಸಿದರು. ಈ ಸಂದರ್ಭದಲ್ಲಿ , ಹೊನ್ನೂರ (ವಂಡ್ರಿ ) ಸೇರಿದಂತೆ ಗ್ರಾಮದ ರೈತರು ಉಪಸ್ಥಿತರಿದ್ದರು.

# ನಾಡೋಜ ಬೆಳಗಲ್ಲು ವೀರಣ್ಣ ಹೆಸರಿನಲ್ಲಿ ಪ್ರಶಸ್ತಿ ಆರಂಭಿಸಿ: ರಾಜ್ಯ ಸರಕಾರಕ್ಕೆ ಸಾಹಿತಿ ಡಾ.ವಸುಂಧರಾ ಭೂಪತಿ ಒತ್ತಾಯ




**ಬಳ್ಳಾರಿ, ಏ.28:** ತೊಗಲು ಗೊಂಬೆ ಕ್ಷೇತ್ರಕ್ಕೆ ಅನನ್ಯ ಕೊಡುಗೆ ನೀಡಿರುವ ನಾಡೋಜ ಬೆಳಗಲ್ಲು ವೀರಣ್ಣ ಅವರ ಹೆಸರಿನಲ್ಲಿ ಕರ್ನಾಟಕ ಸರಕಾರ ಪ್ರಶಸ್ತಿ ಆರಂಭಿಸಬೇಕು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷೆ, ಸಾಹಿತಿ ಡಾ. ವಸುಂಧರಾ ಭೂಪತಿ ಅವರು ಒತ್ತಾಯಿಸಿದರು. ನಗರದ ಶ್ರೀ ರಾಮಾಂಜನೇಯ ತೊಗಲುಗೊಂಬೆ ಮೇಳ ಟ್ರಸ್ಟ್ ಭಾನುವಾರ ಸಂಜೆ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಿದ್ದ ನಾಡೋಜ ಬೆಳಗಲ್ಲು ವೀರಣ್ಣ ರಾಷ್ಟ್ರೀಯ ಸ್ಮಾರಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಅಳಿವಿನಂಚಿನಲ್ಲಿರುವ ತೊಗಲು ಗೊಂಬೆಯಾಟಕ್ಕೆ ಆಧುನಿಕ ಸ್ಪರ್ಶ ನೀಡಿ ದೇಶ ವಿದೇಶಗಳಲ್ಲಿ ತಮ್ಮಮೇಳದ ಮೂಲಕ ಪ್ರದರ್ಶಿಸಿದ ನಾಡೋಜ ಬೆಳಗಲ್ಲು ವೀರಣ್ಣ ಅವರ ಜೀವನ, ಜಾನಪದ ಮತ್ತು ರಂಗಭೂಮಿಗೆ ನೀಡಿರುವ ಕೊಡುಗೆಯನ್ನು ಪಠ್ಯದಲ್ಲಿ ಅಳವಡಿಸಿ ವಿದ್ಯಾರ್ಥಿಗಳಿಗೆ ತಿಳಿಸಬೇಕು ಎಂದರು. ಐದು ದಶಕಗಳಕಾಲ ವಾಸವಿದ್ದ ನಿವಾಸದ ಸಮೀಪದ ರೇಡಿಯೋ ಪಾರ್ಕ್ ರಸ್ತೆಗೆ ನಾಡೋಜ ಬೆಳಗಲ್ಲು ವೀರಣ್ಣ ಹೆಸರಿಡಬೇಕು ಎಂದು ಮಹಾನಗರ ಪಾಲಿಕೆಗೆ ಮನವಿ ಮಾಡಿದರು. ನಾಡೋಜ ಬೆಳಗಲ್ಲು ವೀರಣ್ಣ ಮತ್ತು ಸಂಡೂರಿನ ನಾಡೋಜ ಡಾ. ವಿ.ಟಿ. ಕಾಳೆ ಅಖಂಡ ಬಳ್ಳಾರಿ ಜಿಲ್ಲೆಯ ಕಲಾ ಕ್ಷೇತ್ರದ ದಿಗ್ಗಜರು ಎಂದು ಶ್ಲಾಘಿಸಿದ ಡಾ. ವಸುಂಧರ ಅವರು ಇಬ್ಬರೂ ಬಸವ ಪ್ರಜ್ಞೆ, ಅಂಬೇಡ್ಕರ್ ಸಮಾನತೆಯನ್ನು ಅಳವಡಿಸಿಕೊಂಡು ತಮ್ಮ ಕ್ಷೇತ್ರಗಳನ್ನು ಶ್ರೀಮಂತ ಗೊಳಿಸಿದವರು ಎಂದು ಕೊಂಡಾಡಿದರು.

ಬಸವ ಜಯಂತಿ ಸಂದರ್ಭದಲ್ಲಿ ನಾಡೋಜ ಬೆಳಗಲ್ಲು ವೀರಣ್ಣ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ ಹೆಸರಾಂತ ಚಿತ್ರ ಕಲಾವಿದ ಡಾ. ವಿ.ಟಿ. ಕಾಳೆ ಅವರಿಗೆ ಲಭಿಸುತ್ತಿರುವುದು ಜಿಲ್ಲೆಯ ಸಾಂಸ್ಕೃತಿಕ ಲೋಕಕ್ಕೆ ಹರತಷ, ಹೆಮ್ಮೆ ತಂದಿದೆ ಎಂದರು.

ಸೌಜನ್ಯ ವಿನಯ ಪ್ರತಿಭೆಯ ಸಂಗಮವಾದ ಬೆಳಗಲ್ಲು ವೀರಣ್ಣ ಅವರು ಬಳ್ಳಾರಿಯ ಡಾ. ರಾಜಕುಮಾರ್ ಎಂದು ಹೇಳಿದರು. ಕಲಬುರಗಿ ರಂಗಾಯಣದ ನಿರ್ದೇಶಕಿ ಡಾ.ಸುಜಾತ ಜಂಗಮಶೆಟ್ಟಿ ಅವರು ಮಾತನಾಡಿ ಅಖಂಡ ಬಳ್ಳಾರಿ ಜಿಲ್ಲೆ ರಂಗಭೂಮಿಯ ತವರೂರು. ಇಲ್ಲಿ ಕಾಣುವಷ್ಟು ನಾಟಕ ಪ್ರದರ್ಶನ, ರಂಗ ಕಲಾವಿದರು ಬೇರೆಲ್ಲೂ ಕಾಣಸಿಗುವುದಿಲ್ಲ ಎಂದು ಹರ್ಷಿಸಿದರು. ನಾಡೋಜ ಬೆಳಗಲ್ಲು ವೀರಣ್ಣ ಅವರು ಬದುಕಿದ್ದರೆ 2030ಕ್ಕೆ ಶತಾಯುಷಿಗಳಾಗುತ್ತಿದ್ದರು.

ಈ ಹಿನ್ನಲೆಯಲ್ಲಿ ರಾಜ್ಯ ಸರಕಾರ ವೀರಣ್ಣ ಅವರ ಶತಮಾನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು ಎಂದು ಸಲಹೆ ನೀಡಿದರು. ನಾಡಿನ ವಿಶ್ವ ವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿಗಳು ಬೆಳಗಲ್ಲು ವೀರಣ್ಣ ಅವರ ಕುರಿತು ಮಹಾ ಪ್ರಬಂಧ (ಪಿ.ಎಚ್‌ಡಿಗಾಗಿ)ಗಳನ್ನು ರಚಿಸಬೇಕು ಎಂದರು. ರಂಗ ಕರ್ಮಿ, ಚಿತ್ರನಟ ಮೈಸೂರು ರಮಾನಂದ ಅವರು ಮಾತನಾಡಿ, ರಂಗಭೂಮಿ ಮತ್ತು ಜಾನಪದ ಕ್ಷೇತ್ರಕ್ಕೆ ಸಲ್ಲಿಸಿರುವ ಗಣನೀಯ ಸೇವೆಯನ್ನು ಪರಿಗಣಿಸಿ ಕೇಂದ್ರ ಸರಕಾರ ಮರಣೋತ್ತರವಾಗಿ ಬೆಳಗಲ್ಲು ವೀರಣ್ಣ ಅವರಿಗೆ ಪದ್ಮಶ್ರೀ ಪ್ರಶಸ್ತಿ ನೀಡಬೇಕು ಎಂದು ಒತ್ತಾಯಿಸಿದರು. ವೀರಣ್ಣ ಅವರೊಂದಿಗಿನ ದಶಕಗಳ ಒಡನಾಟ ಸ್ಮರಿಸಿ ಭಾವುಕರಾದರು. ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಡಾ.ವಿ.ಟಿ. ಕಾಳೆ ಅವರು ಅಪ್ರತಿಮ ರಂಗ,ಜಾನಪದ ಕಲಾವಿದರಾಗಿದ್ದ ನಾಡೋಜ ಬೆಳಗಲ್ಲು ವೀರಣ್ಣ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ ಸ್ವೀಕರಿಸುತ್ತಿರುವುದಕ್ಕೆ ಅತ್ಯಂತ ಸಂತೋಷವಾಗಿದೆ ಎಂದು ತಿಳಿಸಿದರು. ತೊಗಲುಗೊಂಬೆ ಚಿತ್ರಗಳನ್ನು ಹೇಗೆ ರಚಿಸಬೇಕು ಎಂದು ಕಲಿಸಿದ್ದು ವೀರಣ್ಣ ಅವರು. ಸಾಮ್ಯ, ಸರಳ ಸಜ್ಜನಿಕೆಯ ವೀರಣ್ಣ ಬೌತಿಕವಾಗಿಯಷ್ಟೇ ನಮ್ಮನ್ನು ಅಗಲಿದ್ದಾರೆ.

ಅವರ ಕಲಾ ಚೇತನ ಎಂದೆಂದೂ ಅಮರ ಎಂದು ಗುಣಗಾನ ಮಾಡಿದರು. ಕಮ್ಮರಚೇಡು ಸಂಸ್ಥಾನ ಮಠದ ಶ್ರೀ ಕಲ್ಯಾಣ ಸ್ವಾಮಿಗಳು ಆಶೀರ್ವಚನ ನೀಡಿದರು. ಹಿರಿಯ ರಂಗ ಕಲಾವಿದ ಗಾದಿಗನೂರು ಹಾಲಪ್ಪ ಮಾತನಾಡಿದರು. ಹಿರಿಯ ಸಾಹಿತಿ ಟಿ.ಕೆ ಗಂಗಾಧರ ಪತ್ತಾರ್ ಮತ್ತು ರಂಗ ಕಲಾವಿದ ಎಎಂಪಿ ವೀರೇಶ ಸ್ವಾಮಿ ಅವರು ವೀರಣ್ಣ ಅವರ ವ್ಯಕ್ತಿತ್ವ ಪರಿಚಯಿಸುವ ಕವಿತೆಗಳನ್ನು ವಾಚಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಡಾ. ವೆಂಕಟಯ್ಯ ಅಪ್ಪಗೆರೆ, ಉದ್ಯಮಿ ಎಂ. ಜಿ. ಗೌಡ, ರಂಗತೋರಣದ ಪ್ರಭುದೇವ ಕಪ್ಪ ಗಲ್ಲು, ರಂಗ ಸಂಘಟಕ ಮೈಸೂರಿನ ಬಿ.ಎಂ. ರಾಮಚಂದ್ರ, ಕಸಾಪ ಜಿಲ್ಲಾಧ್ಯಕ್ಷ ನಿಷ್ಠಿ ರುದ್ರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿವೃತ್ತ ಉಪನಿರ್ದೇಶಕ ಟಿ. ಕೊಟ್ರಪ್ಪ, ಬಳ್ಳಾರಿ ಕಲಾವಿದರ ಸಂಘದ ಅಧ್ಯಕ್ಷ ಯಲ್ಲನಗೌಡ ಶಂಕರಬಂಡೆ, ಕರ್ನಾಟಕ ಜಾನಪದ ಪರಿಷತ್ತು ಜಿಲ್ಲಾಧ್ಯಕ್ಷ ಸಿ. ಮಂಜುನಾಥ್, ರಂಗ ಕಲಾವಿದ ಪುರುಷೋತ್ತಮ ಹಂದ್ಯಾಳ್ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ವೀರಣ್ಣ ಅವರ ಧ್ವನಿ ಯಲ್ಲಿರುವ ಬಾಪೂಜಿ ತೊಗಲುಗೊಂಬೆಯಾಟ ಪ್ರದರ್ಶನ ನೆರೆದಿದ್ದ ಸಭಿಕರ ಮೆಚ್ಚುಗೆ ಪಡೆಯಿತು.

ಟ್ರಸ್ಟ್‌ನ ಗಗನ್‌ಕುಮಾರ್ ಸ್ವಾಗತಿಸಿದರು. ಮೇಳದ ಟ್ರಸ್ಟಿ ಬೆಳಗಲ್ಲು ಹನುಮಂತು ಪ್ರಾಸ್ತಾವಿಕವಾಗಿ ಮಾತನಾಡಿದರು. ಅಧ್ಯಾಪಕಿವೀಣಾ ನಿರೂಪಿಸಿದರು.

ರಂಗ ಕಲಾವಿದ ಡಾ. ಗಂಗಾಧರ ದುರ್ಗಂ, ಲಕ್ಷ್ಮಿ ಬೆಳಗಲ್ಲು, ರೇಖಾ ಬೆಳಗಲ್ಲು ನಿರ್ವಹಿಸಿದರು.

**ಮೆರವಣಿಗೆ:** ಮೋತಿ ವೃತ್ತದಲ್ಲಿರುವ ಶ್ರೀ ಬಸವೇಶ್ವರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿ, ಬೆಳಗಲ್ಲು ವೀರಣ್ಣ ಅವರ ಭಾವಚಿತ್ರ ಮತ್ತು ಕಲಾ ಧೀಮಂತ ಅಭಿನಂದನಾ ಗ್ರಂಥವನ್ನು ಪಲ್ಲಕ್ಕಿಯಲ್ಲಿ ಹೊತ್ತು ಜಾನಪದ ತಂಡಗಳ ಪ್ರದರ್ಶನ ದೊಂದಿಗೆ ಸಾಗಿದ ಮೆರವಣಿಗೆ ಗಮನ ಸೆಳೆಯಿತು.

# ಗಂಭೀರ ಸಮಸ್ಯೆಗಳ ಪತ್ತೆಗೆ ಆರೋಗ್ಯ ಕೇಂದ್ರಗಳಲ್ಲಿ ಇಸಿಜಿ ಯಂತ್ರಗಳ ಅಳವಡಿಕೆ: – ಡಿಎಚ್‌ಓ ಡಾ.ಯಲ್ಲಾ ರಮೇಶಬಾಬು

**ಬಳ್ಳಾರಿ,ಏ.28.** ವ್ಯಕ್ತಿಗೆ ಆಕಸ್ಮಿಕವಾಗಿ ಒದಗುವ ಆರೋಗ್ಯದ ಸಮಸ್ಯೆಗಳನ್ನು ಗುರ್ತಿಸಲು ಇಸಿಜಿ ಮಷಿನ್ ಅತ್ಯಂತ ಮಹತ್ವದ್ದಾಗಿದ್ದು, ಅದರಲ್ಲೂ ಮುಖ್ಯವಾಗಿ ಹೃದಯದ ಮೌಲ್ಯಮಾಪನ ಮಾಡುವ ಮೂಲಕ ಅತ್ಯಂತ ಸರಳವಾಗಿ ಮತ್ತು ವೇಗವಾಗಿ ಪರೀಕ್ಷಿಸಿ ಹೃದಯದ ಸಮಸ್ಯೆ ಹಾಗೂ ಆರೋಗ್ಯವನ್ನು ಮೇಲ್ವಿಚಾರಣೆ ಮಾಡುವ ಇಸಿಜಿ ಯಂತ್ರಗಳ ಗ್ರಾಮೀಣ ಜನತೆಯು ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.



ಸೋಮವಾರ ಕಂಪ್ಲಿ ತಾಲೂಕಿನ ಎಮ್ಮಿಗನೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇಸಿಜಿ ಮೂಲಕ ವ್ಯಕ್ತಿಯ ಆರೋಗ್ಯ ಪರೀಕ್ಷಾ ಕಾರ್ಯ ಪರಿಶೀಲಿಸಿ ಅವರು ಮಾತನಾಡಿದರು. ಜಿಲ್ಲೆಯಾದ್ಯಂತ 2 ತಾಲ್ಲೂಕು ಆಸ್ಪತ್ರೆ, 6 ಸಮುದಾಯ ಆರೋಗ್ಯ ಕೇಂದ್ರ, 29 ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು 09 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಇಸಿಜಿ ಮೆಷಿನ್ ಲಭ್ಯವಿದ್ದು, ಇಲ್ಲಿ ತಜ್ಞರು ಹಾಗೂ ತರಬೇತಿ ಪಡೆದ ವೈದ್ಯರು ಪರೀಕ್ಷೆ ಮಾಡಲು ಅವಕಾಶ ಮಾಡಲಾಗಿದೆ ಎಂದರು. ಯಾವ ಲಕ್ಷಣಗಳಿಗೆ ಇಸಿಜಿ ಮಾಡಿಸಬೇಕು?"–ಎದೆ ನೋವು, ತಲೆತಿರುಗುವಿಕೆ, ತಲೆತಿರುಗುವಿಕೆ ಅಥವಾ ಗೊಂದಲ, ಹೃದಯ ಬಡಿತ ಏರಿಳಿತ, ತ್ವರಿತ ನಾಡಿಮಿಡಿತ, ಉಸಿರಾಟದ ತೊಂದರೆ, ದೌರ್ಬಲ್ಯ, ಆಯಾಸ, ಅಥವಾ ವ್ಯಾಯಾಮ ಮಾಡುವ ಸಾಮರ್ಥ್ಯ ಕಡಿಮೆಯಾಗುವುದು. ಇಸಿಜಿಯಿಂದ ಸ್ಥಳದಲ್ಲಿಯೇ ಗುರ್ತಿಸಬಹುದಾದ ಸಮಸ್ಯೆಗಳು:*–ಹೃದಯದಲ್ಲಿ ನಿರ್ಬಂಧಿಸಲಾದ ಅಥವಾ ಕಿರಿದಾದ ಅಪಧಮನಿಗಳು (ಕರೋನರಿ ಅಪಧಮನಿ ಕಾಯಿಲೆ) ಎದೆ ನೋವು ಅಥವಾ ಹೃದಯಾಘಾತಕ್ಕೆ ಕಾರಣವಾಗಿದ್ದರೆ. ಈ ಹಿಂದೆ ಹೃದಯಾಘಾತವಾಗಿದ್ದರೆ, ಪೇಸ್‌ಮೇಕರ್‌ನಂತಹ ನಿರ್ದಿಷ್ಟ ಹೃದಯ ಕಾಯಿಲೆ ಚಿಕಿತ್ಸೆಯ ಕಾರ್ಯನಿರ್ವಹಣೆ, ಅನಿಯಮಿತ ಹೃದಯ ಬಡಿತಗಳು (ಆರ್ಹೆತ್ಮಿಯಾ) ಟೆಲಿ ಐಸಿಯು ಹಬ್ ಮೂಲಕ ಜಿಲ್ಲೆಯಲ್ಲಿ ಅನೂಕೂಲ:–ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ತಪಾಸಣೆ ಮಾಡಿದಾಗ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ತಕ್ಷಣ ತಾಲೂಕು ಮಟ್ಟದ ಅಸ್ಪತ್ರೆಗೆ ದಾಖಲಿಸಿ, ಅಲ್ಲಿಯ ತಜ್ಞರು ಜಿಲ್ಲಾ ಆಸ್ಪತ್ರೆಯಲ್ಲಿ ಅಳವಡಿಸಿರುವ ಟೆಲಿ ಐಸಿಯು ಹಬ್‌ನ ತಜ್ಞವೈದ್ಯರಿಗೆ ನೇರವಾಗಿ ರೋಗಿಯನ್ನು ವಿಡಿಯೋ ಮುಲಕ ಸಂಪರ್ಕಿಸಿ ಚಿಕಿತ್ಸೆ ಒದಗಿಸಲು ಅಥವಾ ತುರ್ತು ಅಗತ್ಯವೆನಿಸಿದರೆ ಜಿಲ್ಲಾ ಆಸ್ಪತ್ರೆ ಅಥವಾ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಕೇಂದ್ರ ಕ್ಕೆ ದಾಖಲಿಸಲು ಸಹಕಾರಿಯಾಗಿ ವ್ಯಕ್ತಿಯ ಜೀವ ಉಳಿಸಲು ಸಹಾಯಕವಾಗಿದೆ. ಈ ಹಿನ್ನಲೆಯಲ್ಲಿ ಸಾರ್ವಜನಿಕರು ಜಿಲ್ಲೆಯ ಎಲ್ಲ ಆಸ್ಪತ್ರೆಗಳಲ್ಲಿ ಲಭ್ಯವಿರುವ ಇಸಿಜಿ ಮೆಷಿನ್‌ಗಳ ಸದುಪಯೋಗ ಪಡೆಯಲು ವಿನಂತಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್, ಅಡಳಿತ ವೈದ್ಯಾಧಿಕಾರಿ ಡಾ.ಫಾರೂಖ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಅರೋಗ್ಯ ನಿರೀಕ್ಷಣಾಧಿಕಾರಿ ಬಸವನಗೌಡ, ಕೃಷ್ಣಮೂರ್ತಿ, ಸಿಬ್ಬಂದಿಯವರಾದ ಪೂಜಾ, ಉಮಾಮಹೇಶ್ವರಿ, ಕನಕಪ್ಪ, ಅಶ್ವಿನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಂತ್ರಾಲಯದ ರಾಯರ ಮಠದಲ್ಲಿ ಹೈ ಅಲರ್ಟ್ ಬಾಂಬ್ ಸ್ಕ್ವಾಡ್, ಶ್ವಾನದಳದ ತಪಾಸಣೆ.!

**ಮಂತ್ರಾಲಯ, ಏ. 28:** ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ಗುಂಡಿಟ್ಟು 26 ಪ್ರವಾಸಿಗರು ಹತ್ಯೆ ಮಾಡಿರುವ ಬೆನ್ನಲ್ಲೇ ದೇಶಾದ್ಯಂತ ಪ್ರಮುಖ ಸ್ಥಳಗಳಲ್ಲಿ, ಜನನಿಬಿಡ ಯಾತ್ರಾ–ಪುಣ್ಯ ಕ್ಷೇತ್ರ ಪ್ರದೇಶಗಳಲ್ಲಿ, ಪ್ರವಾಸಿ ತಾಣಗಳಲ್ಲಿ ಹೈ ಅಲರ್ಟ್ ಘೋಷಿಸಲಾಗಿದ್ದು, ಕಟ್ಟೆಚ್ಚರ ವಹಿಸಲಾಗಿದೆ. ಅದೇ ರೀತಿ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠದ ಆವರಣದಲ್ಲಿಯೂ ಕಟ್ಟೆಚ್ಚರ ವಹಿಸಲಾಗಿದ್ದು, ಮುಂಜಾಗೃತಾ ಕ್ರಮವಾಗಿ ಬಾಂಬ್ ಸ್ಕ್ವಾಡ್, ಶ್ವಾನದಳ, ಪೊಲೀಸರು ಇಂದು ದಿನವಿಡೀ ಪರಿಶೀಲನೆ ನಡೆಸಿದರು. ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಿರುವ ಮಂತ್ರಾಲಯ ಮಠಕ್ಕೆ ಪ್ರತಿದಿನ ಲಕ್ಷಾಂತರ ಭಕ್ತರು ಆಗಮಿಸುತ್ತಿರುತ್ತಾರೆ. ಈ ಹಿನ್ನೆಲೆಯಲ್ಲಿ ಪೊಲೀಸರು ಅಲರ್ಟ್ ಆಗಿದ್ದು, ಮುನ್ನೆಚ್ಚರಿಕೆ ವಹಿಸಲಾಗಿದೆ. ಮಂತ್ರಾಲಯ ಮಠವೂ ಸೇರಿದಂತೆ ಇಡೀ ಊರಿನ ವಾಣಿಜ್ಯ ಸಂಕೀರ್ಣಗಳಲ್ಲಿ, ಹೊಟೇಲ್ ಮತ್ತು ಲಾಡ್ಜ್‌ಗಳಲ್ಲಿ ತೀವ್ರ ತಪಾಸಣೆ ನಡೆಸಲಾಗುತ್ತಿದೆ. ಮಠದ ಪ್ರಾಂಗಣ, ಭೋಜನ ಶಾಲೆ,




ತುಂಗಭದ್ರಾ ನದಿ ತೀರ, ಬಸ್ ನಿಲ್ದಾಣ, ವ್ಯಾಪಾರಿ ಮಳಿಗೆಗಳು, ವಸತಿಗೃಹ, ಮಂತ್ರಾಲಯಕ್ಕೆ ಬರುವ ಬಸ್, ರೈಲ್ವೆ ನಿಲ್ದಾಣ, ವಾಹನಗಳು, ಭಕ್ತರ ಬ್ಯಾಗ್‌ಗಳನ್ನು ಕೂಡ ತಪಾಸಣೆ ನಡೆಸಲಾಯಿತು. ಮಂತ್ರಾಲಯ ಮಠದಲ್ಲಿ ಭದ್ರತೆ ಬಿಗಿಗೊಳಿಸಲು ಮಠದ ಆಡಳಿತ ಮಂಡಳಿಗೂ ಸೂಚಿಸಲಾಗಿದೆ.

ಮಂತ್ರಾಲಯಂ ಹಾಗೂ ಮಾಧವರಂ ಠಾಣೆ ಪೊಲೀಸರು ಕಟ್ಟೆಚ್ಚರ ವಹಿಸಿದ್ದಾರೆ. ಪೆಹಲ್ಗಾಮ್ ದಾಳಿಯ ನಂತರ ಮಂತ್ರಾಲಯ ಶ್ರೀಗಳು ಸುದ್ದಿಗೋಷ್ಠಿಯಲ್ಲಿ ಘಟನೆಯನ್ನು ಖಂಡಿಸಿದ್ದರು ಮತ್ತು ಇದು ಮಾನವೀಯತೆಯ ವಿರುದ್ಧವಾದ ಅಮಾನವೀಯ ಘಟನೆ. ವಿಶೇಷವಾಗಿ ಹಿಂದೂಗಳನ್ನೇ ಟಾರ್ಗೆಟ್ ಮಾಡಿಕದ್ದು ಅತ್ಯಂತ ಅಪಾಯಕಾರಿ ಬೆಳವಣಿಗೆಯಾಗಿದೆ. ಇಂದು ಪೆಹಲ್ಗಾಮ್‌ನಲ್ಲಿ ನಡೆದಿರಬಹುದು. ನಾಳೆ ನಮ್ಮಲ್ಲೂ ಆಗಬಹುದು. ಆದ್ದರಿಂದ ಸಮಸ್ತ ಹಿಮದೂ ಸಮಾಜದವರು ಎಚ್ಚರ ವಹಿಸಬೇಕು ಎಂದು ಕರೆ ನೀಡಿದ್ದರು.

# ಜಮ್ಮು ಕಾಶ್ಮೀರ: 10 ಶಂಕಿತ ಉಗ್ರರ ಮನೆ ಧ್ವಂಸ



**ಶ್ರೀನಗರ, ಏ.28:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಜಮ್ಮು ಕಾಶ್ಮೀರದ ಅಧಿಕಾರಿಗಳು ಕನಿಷ್ಠ 10 ಶಂಕಿತ ಉಗ್ರರ ಮನೆಗಳನ್ನು ನೆಲಸಮ ಮಾಡಿದ್ದಾರೆ ಎಂದು ಅಧಿಕಾರಿಗಳ ಹೇಳಿಕೆಯನ್ನು ಉಲ್ಲೇಖಿಸಿ ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ. ಇದಲ್ಲದೆ, ಕೇಂದ್ರಾಡಳಿತ ಪ್ರದೇಶದಾದ್ಯಂತ 2,000 ಕ್ಕೂ ಹೆಚ್ಚು ಜನರನ್ನು ಪೊಲೀಸರು ಬಂಧಿಸಿದ್ದಾರೆ.

ಅಧಿಕಾರಿಗಳು ಅನಂತನಾಗ್‌ನ ಆದಿಲ್ ಥೋಕರ್ ಮತ್ತು ಟ್ರಾಲ್‌ನ ಆಸಿಫ್ ಶೇಖ್ ಅವರ ಮನೆಗಳನ್ನು ನೆಲಸಮಗೊಳಿಸಿದ್ದರು. ಇಬ್ಬರೂ ಲಷ್ಕರ್-ಎ-ತೋಯಿಬಾ ಉಗ್ರಗಾಮಿ ಗುಂಪಿನ ಶಂಕಿತ ಸದಸ್ಯರು ಎಂದು ಹೇಳಲಾಗಿದೆ. ಮನೆಗಳನ್ನು ಗುರಿಯಾಗಿಸಿಕೊಂಡ ಇತರ ಶಂಕಿತ ಉಗ್ರರನ್ನು ಲಷ್ಕರ್-ಎ-ತೋಯಿಬಾ ಸದಸ್ಯರಾದ ಜಾಕಿರ್ ಅಹ್ಮದ್ ಗನೈ, ಅಮೀರ್ ಅಹ್ಮದ್ ದಾರ್, ಶಾಹಿದ್ ಅಹ್ಮದ್ ಕುಟ್ಟೆ, ಅಹ್ಸಾನ್ ಉಲ್ ಹಕ್ ಅಮೀರ್ ಹಾಗೂ ಜೈಶ್-ಎ-ಮೊಹಮ್ಮದ್‌ನ ಅಮೀರ್ ನಜೀರ್ ವಾನಿ, ಜಮೀಲ್ ಅಹ್ಮದ್ ಶೇರ್ ಗೋಜ್ರಿ ಮತ್ತು ದಿ ರೆಸಿಸ್ಟೆನ್ಸ್ ಫ್ರಂಟ್‌ನ ಅದ್ನಾನ್ ಸಫಿ ದಾರ್ ಮತ್ತು ಫಾರೂಕ್ ಅಹ್ಮದ್ ತೆಡ್ವಾ ಎಂದು ಗುರುತಿಸಲಾಗಿದೆ.

ಧ್ವಂಸಗಳ ಬಗ್ಗೆ ಸೇನೆ ಅಥವಾ ಪೊಲೀಸರು ಯಾವುದೇ ಹೇಳಿಕೆಗಳನ್ನು ನೀಡಿಲ್ಲ. ಆದಾಗ್ಯೂ, ಶಂಕಿತ ಉಗ್ರರು ಲಷ್ಕರ್-ಎ-ತೋಯಿಬಾ ಮತ್ತು ಇನ್ನೊಂದು ಉಗ್ರಗಾಮಿ ಗುಂಪು ಹಿಜ್ಬುಲ್ ಮುಜಾಹಿದ್ದೀನ್‌ಗೆ ಸೇರಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ. ಏಪ್ರಿಲ್ 22 ರಂದು ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವನ್ನಪ್ಪಿ 17 ಜನರು ಗಾಯಗೊಂಡ ಎರಡು ದಿನಗಳ ನಂತರ ಧ್ವಂಸ ಕಾರ್ಯಾಚರಣೆ ಪ್ರಾರಂಭವಾಯಿತು. ಅನಂತ್‌ನಾಗ್ ಜಿಲ್ಲೆಯ ಬೈಸರನ್ ಪ್ರದೇಶದಲ್ಲಿ ಈ ದಾಳಿ ನಡೆದಿತ್ತು. ಹತ್ಯೆಗೀಡಾದವರು ಹೆಚ್ಚಿನವರು ರಾಜ್ಯದ ಹೊರಗಿನವರಾಗಿದ್ದಾರೆ. ಮೃತಪಟ್ಟವರಲ್ಲಿ ಮೂವರು ಹೊರತುಪಡಿಸಿ ಉಳಿದವರೆಲ್ಲರೂ ಹಿಂದೂಗಳು.2019 ರಲ್ಲಿ ಕೇಂದ್ರ ಸರ್ಕಾರ ಜಮ್ಮು ಕಾಶ್ಮೀರದ ವಿಶೇಷ ಸ್ಥಾನಮಾನವನ್ನು ರದ್ದುಗೊಳಿಸಿದ ನಂತರ ಕಾಶ್ಮೀರದಲ್ಲಿ ನಾಗರಿಕರನ್ನು ಗುರಿಯಾಗಿಸಿಕೊಂಡು ನಡೆದ ಮೊದಲ ಪ್ರಮುಖ ಭಯೋತ್ಪಾದಕ ದಾಳಿ ಇದಾಗಿದೆ. ದಾಳಿಯ ನಂತರ, ಭದ್ರತಾ ಪಡೆಗಳು ಪಹಲ್ಗಾಮ್ ಸುತ್ತಮುತ್ತ ಶೋಧ ಕಾರ್ಯಾಚರಣೆ ನಡೆಸುತ್ತಿವೆ ಮತ್ತು ಪೊಲೀಸರು ಕೇಂದ್ರಾಡಳಿತ ಪ್ರದೇಶದಾದ್ಯಂತ ಶಂಕಿತ ಉಗ್ರಗಾಮಿ ಬೆಂಬಲಿಗರ ಮೇಲೆ ತಮ್ಮ ದಮನ ಕಾರ್ಯಾಚರಣೆಯನ್ನು ತೀವ್ರಗೊಳಿಸಿದ್ದಾರೆ. ಶ್ರೀನಗರ ಜಿಲ್ಲೆಯಲ್ಲಿ, ಭಯೋತ್ಪಾದಕ ವ್ಯವಸ್ಥೆಯನ್ನು ಕೆಡವಲು ಮಹಿಳೆ ಸೇರಿದಂತೆ ಸುಮಾರು 63 ಉಗ್ರಗಾಮಿ ಬೆಂಬಲಿಗರ ಮನೆಗಳ ಮೇಲೆ ಪೊಲೀಸರು ದಾಳಿ ನಡೆಸಿದ್ದಾರೆ ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

ಪಿತೂರಿ ಅಥವಾ ಭಯೋತ್ಪಾದಕ ಚಟುವಟಿಕೆಯನ್ನು ಪತ್ತೆಹಚ್ಚಲು ಮತ್ತು ತಡೆಯಲು, ಪುರಾವೆಗಳನ್ನು ಸಂಗ್ರಹಿಸಲು ಮತ್ತು ಗುಪ್ತಚರ ಸಂಗ್ರಹಣೆಯನ್ನು ಸಂಗ್ರಹಿಸಲು ಶಸ್ತ್ರಾಸ್ತ್ರಗಳು, ದಾಖಲೆಗಳು ಮತ್ತು ಎಲೆಕ್ಟ್ರಾನಿಕ್ ಸಾಧನಗಳನ್ನು ವಶಪಡಿಸಿಕೊಳ್ಳಲು ಈ ಶೋಧಗಳನ್ನು ನಡೆಸಲಾಯಿತು ಎಂದು ಅಧಿಕಾರಿ ಹೇಳಿದ್ದಾರೆ. ಅನಂತ್ನಾಗ್ ಜಿಲ್ಲೆಯಲ್ಲಿ, 175 ಶಂಕಿತ ಉಗ್ರಗಾಮಿಗಳು ಮತ್ತು ಅವರ ಬೆಂಬಲಿಗರನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದ್ದಾರೆ

# ಆಫ್ರಿಕಾದಲ್ಲಿ ವಲಸೆ ಕಾರ್ಮಿಕರ ಅಪಹರಣ



**ನವದೆಹಲಿ, ಏ.28:** ಜಾರ್ಖಂಡ್‌ನ ಐವರು ವಲಸೆ ಕಾರ್ಮಿಕರನ್ನು ಪಶ್ಚಿಮ ಆಫ್ರಿಕಾದ ನೈಜರ್‌ನಲ್ಲಿ ಅಪಹರಿಸಲಾಗಿದೆ ಎಂದು ವರದಿಯಾಗಿದೆ. ಅವರು ಜನವರಿ 2024ರಲ್ಲಿ ಕಲ್ಪತರು ಪವರ್ ಟ್ರಾನ್ಸ್‌ಮಿಷನ್ ಕಂಪನಿಯಲ್ಲಿ ಕೆಲಸ ಮಾಡಲು ನೈಜರ್‌ಗೆ ವಲಸೆ ಹೋಗಿದ್ದರು. ಅಂದಿನಿಂದ ಮನೆಗೆ ಹಿಂತಿರುಗಿಲ್ಲ ಎನ್ನಲಾಗಿದೆ.

ಕಳೆದ ಶುಕ್ರವಾರ ಮಧ್ಯಾಹ್ನ ಕಾರ್ಮಿಕರ ಅಪಹರಣ ನಡೆದಿದೆ ಎಂದು ವರದಿಯಾಗಿದೆ. ಜಾರ್ಖಂಡ್‌ನ ಗಿರಿಡಿಹ್ ಜಿಲ್ಲೆಯ ಬಾಗೋದರ್ ಪೊಲೀಸ್ ಠಾಣೆ ವ್ಯಾಪ್ತಿಯ ದೊಂಡ್ಲೋ ಪಂಚಾಯತ್ನ ಸಂಜಯ್ ಮಹತೋ, ಫಲ್ಗಿತ್ ಮಹತೋ, ರಾಜು ಮಹತೋ, ಚಂದ್ರಿಕಾ ಮಹತೋ ಮತ್ತು ಮುಂಡ್ರೋ ಪಂಚಾಯತ್ನ ಉತ್ತಮ್ ಮಹತೋ ಅಪಹರಣಕ್ಕೊಳಗಾದವರಲ್ಲಿ ಸೇರಿದ್ದಾರೆ. ಇದಕ್ಕೂ ಮೊದಲು ಈ ಕೆಲಸ ಮಾಡುತ್ತಿದ್ದ ಇತರ ವಲಸೆ ಕಾರ್ಮಿಕರ ಪ್ರಕಾರ, ಸ್ಥಳೀಯರ ಗುಂಪೊಂದು ಕೆಲಸ ಸ್ಥಳದ ಮೇಲೆ ದಾಳಿ ನಡೆಸಿ, ಸರ್ಕಾರದಿಂದ ನಿಯೋಜಿಸಲ್ಪಟ್ಟ ಹನ್ನೆರಡು ಭದ್ರತಾ ಸಿಬ್ಬಂದಿಯನ್ನು ಕೊಂದು, ಬಂದೂಕು ತೋರಿಸಿ ಒಬ್ಬ ಸ್ಥಳೀಯ ಸೇರಿದಂತೆ ಆರು ಜನರನ್ನು ಕರೆದೊಯ್ದಿದ್ದ ಎಂದು ವರದಿಯಾಗಿದೆ.

ನನ್ನ ಪತಿ ಸಂಜಯ್ ಮಹ್ತೋ ಕೆಲಸಕ್ಕೆಂದು ನೈಜರ್‌ಗೆ ಹೋಗಿದ್ದರು. ಶುಕ್ರವಾರ ಬೆಳಗ್ಗೆ 10 ಗಂಟೆಗೆ ನನಗೆ ಅವರಿಂದ ಕೊನೆಯ ಬಾರಿಗೆ ಕರೆ ಬಂದಿತ್ತು, ನಂತರ ಅವರ ಫೋನ್ ಸ್ವಿಚ್ ಆಫ್ ಆಗಿದೆ. ಅವರನ್ನು ಅಪಹರಿಸಲಾಗಿದೆ ಎಂದು ಅವರೊಂದಿಗೆ ಕೆಲಸ ಮಾಡುತ್ತಿರುವ ಇತರರು ನಮಗೆ ತಿಳಿಸಿದ್ದಾರೆ. ಎಂದು ಸಂಜಯ್ ಮಹ್ತೋ ಅವರ ಪತ್ನಿ ಹೇಳಿದ್ದಾರೆ.ನನ್ನ ಪತಿ ಸುರಕ್ಷಿತವಾಗಿ ಮನೆಗೆ ಮರಳಲು ವ್ಯವಸ್ಥೆ ಮಾಡುವಂತೆ ನಾನು ಸರ್ಕಾರಕ್ಕೆ ಮನವಿ ಮಾಡುತ್ತೇನೆ ಎಂದಿದ್ದಾರೆ.

ಫಲ್ಗಿತ್ ಕುಮಾರ್ ಮಹ್ತೊ ಅವರು 2024ರ ಜನವರಿಯಲ್ಲಿ ನೈಜೀರಿಯಾಕ್ಕೆ ಹೋಗಿದ್ದರು. ಏ.25ರಂದು ಬೈಕ್‌ನಲ್ಲಿ ಬಂದ ಕೆಲವರು ಅವರನ್ನು ಕರೆದುಕೊಂಡು ಹೋಗಿದ್ದಾರೆ. ಅಂದಿನಿಂದ ಅವರ ಮೊಬೈಲ್ ಸ್ವಿಚ್ ಆಫ್ ಆಗಿದೆ ಎಂದು ಸಹೋದರ ದಾಮೋದರ್ ಮಹ್ತೊ ಹೇಳಿದ್ದಾರೆ. ಅವರನ್ನು ಪತ್ತೆಹಚ್ಚಲು ಮತ್ತು ಅವರು ಭಾರತಕ್ಕೆ ಸುರಕ್ಷಿತವಾಗಿ ಮರಳಲು ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡುತ್ತೇವೆ ಎಂದು ಹೇಳಿದ್ದಾರೆ. ವಲಸೆ ಕಾರ್ಮಿಕರ ಪರವಾಗಿ ಕೆಲಸ ಮಾಡುತ್ತಿರುವ ಸ್ಥಳೀಯ ಸಾಮಾಜಿಕ ಕಾರ್ಯಕರ್ತ ಸಿಕಂದರ್ ಅಲಿ, ಅಪಹರಣಕ್ಕೊಳಗಾದವರು ಕಲ್ಪತರು ಪವರ್ ಟ್ರಾನ್ಸ್‌ಮಿಷನ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು ಎಂದು ಮಾಹಿತಿ ನೀಡಿದ್ದಾರೆ.

ಈ ವಿಷಯದಲ್ಲಿ ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಿ ತಕ್ಷಣ ಕಾರ್ಮಿಕರನ್ನು ಬಿಡುಗಡೆ ಮಾಡಿಸಬೇಕೆಂದು ಅವರು ಒತ್ತಾಯಿಸಿದ್ದಾರೆ. ನಾವು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯುತ್ತಿದ್ದೇವೆ, ಈ ವಿಷಯದಲ್ಲಿ ಸಕಾಲಿಕ ಕ್ರಮ ತೆಗೆದುಕೊಂಡು ಸಂಕಷ್ಟದಲ್ಲಿರುವ ಕಾರ್ಮಿಕರನ್ನು ಆದಷ್ಟು ಬೇಗ ಬಿಡುಗಡೆ ಮಾಡುವಂತೆ ವಿನಂತಿಸುತ್ತಿದ್ದೇವೆ, ಎಂದು ಸಿಕಂದರ್ ಅಲಿ ಹೇಳಿದ್ದಾರೆ. ಈ ವಿಷಯ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರ ಗಮನಕ್ಕೆ ಬಂದಿದ್ದು, ಅವರು ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರ ಸಹಾಯವನ್ನು ಕೋರಿದ್ದಾರೆ.

ಕೇಂದ್ರ ವಿದೇಶಾಂಗ ಸಚಿವರೇ ನೈಜರ್‌ನಲ್ಲಿ ಅಪಹರಿಸಲ್ಪಟ್ಟಿರುವ ಜಾರ್ಖಂಡ್ನ ನಮ್ಮ ವಲಸೆ ಸಹೋದರರಿಗೆ ದಯವಿಟ್ಟು ಸಹಾಯ ಮಾಡುವಂತೆ ವಿನಂತಿಸುತ್ತೇನೆ ಎಂದು ಸಿಎಂ ಹೇಮಂತ್ ಸೊರೇನ್ ಸಾಮಾಜಿಕ ಮಾಧ್ಯಮದಲ್ಲಿ ಬರೆದುಕೊಂಡಿದ್ದಾರೆ.

# ಗಾಯಕಿ ನೇಹಾ ಸಿಂಗ್ ವಿರುದ್ಧ ದೇಶದ್ರೋಹ ಪ್ರಕರಣ

**ನವದೆಹಲಿ,ಏ.28:** ಪಹಲ್ಗಾಮ್ ದುರಂತದ ನಂತರ ನಿರ್ದಿಷ್ಟ ಧಾರ್ಮಿಕ ಸಮುದಾಯವನ್ನು ಗುರಿಯಾಗಿಸಿಕೊಂಡು ಸಾಮಾಜಿಕ ಮಾಧ್ಯಮದಲ್ಲಿ ಪ್ರಚೋದನಕಾರಿ ಹೇಳಿಕೆ ಹಾಕಿರುವುದರಿಂದ ದೇಶದ ಏಕತೆಗೆ ಹಾನಿಯಾಗಬಹುದು ಎಂಬ ದೂರಿನ ಮೇರೆಗೆ ಜಾನಪದ ಗಾಯಕಿ ನೇಹಾ ಸಿಂಗ್ ರಾಥೋಡ್ ವಿರುದ್ಧ ಪೊಲೀಸರು ದೇಶದ್ರೋಹದ ಪ್ರಕರಣ ದಾಖಲಿಸಿದ್ದಾರೆ.

ಏ.22ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ವೇಳೆ ಬಹುತೇಕ ಪ್ರವಾಸಿಗರೇ ಆಗಿದ್ದ ಸಂತ್ರಸ್ತರ ಧರ್ಮವನ್ನು ಕೇಳಿ, ಅವರ ಮೇಲೆ ಗುಂಡು ಹಾರಿಸಿದ ಭಯೋತ್ಪಾದಕರ ಕೃತ್ಯದಿಂದ ಇಡೀ ದೇಶ ಶೋಕತಪ್ತವಾಗಿದ್ದು, ಈ ದುಷ್ಕರ್ಮಿಗಳ ರಕ್ತಕ್ಕಾಗಿ ಕಾತರಿಸುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಗಾಯಕಿ ಹಾಗೂ ಕವಿಯತ್ರಿ ನೇಹಾ ಸಿಂಗ್ ರಾಥೋಡ್ ಅವರು ತಮ್ಮ ಎಕ್ಸ್ ಖಾತೆಯಲ್ಲಿ ರಾಷ್ಟ್ರೀಯ ಸಮಗ್ರತೆಯ ಮೇಲೆ ಪ್ರತಿಕೂಲ ಪರಿಣಾಮ ಬೀರುವಂತಹ ಕೆಲವು ಆಕ್ಷೇಪಾರ್ಹ ಪೋಸ್ಟ್‌ಗಳನ್ನು ಮಾಡಿದ್ದಾರೆ. ಅಲ್ಲದೆ, ಧರ್ಮವನ್ನಾಧರಿಸಿ, ಒಂದು ಸಮುದಾಯದ ವಿರುದ್ಧ ಮತ್ತೊಂದು ಸಮುದಾಯವನ್ನು ಪ್ರಚೋದಿಸುವ ಪ್ರಯತ್ನವನ್ನು ಪದೇ ಪದೇ ಮಾಡಿದ್ದಾರೆ ಎಂದು ದೂರುದಾರ ಅಭಯ್ ಪ್ರತಾಪ್ ಸಿಂಗ್ ತಮ್ಮ ದೂರಿನಲ್ಲಿ ಉಲ್ಲೇಖಿಸಿದ್ದಾರೆ ಎಂದು ವರದಿಯಾಗಿದೆ.

ಉತ್ತರ ಪ್ರದೇಶದ ಲಖನೌದ ಹಜರತ್‌ಗಂಜ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ದೂರಿನ ಆಧಾರದ ಮೇಲೆ, ಪೊಲೀಸರು ಜಾನಪದ ಗಾಯಕಿ ನೇಹಾ ಸಿಂಗ್ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಹಲವು ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಿದ್ದಾರೆ.ಇದರಲ್ಲಿ ಧರ್ಮಗಳ ನಡುವೆ ದ್ವೇಷವನ್ನು ಉತ್ತೇಜಿಸಲು ಪ್ರಯತ್ನಿಸುವುದು, ಸಾರ್ವಜನಿಕ ಶಾಂತಿಯನ್ನು ಕದಡುವುದು ಮತ್ತು ಭಾರತದ ಸಾರ್ವಭೌಮತ್ವ, ಏಕತೆ ಮತ್ತು ಸಮಗ್ರತೆಗೆ ಅಪಾಯವನ್ನುಂಟುಮಾಡುವುದು ಸೇರಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಮಾಹಿತಿ ತಂತ್ರಜ್ಞಾನ ಕಾಯ್ದೆಯಡಿಯೂ ನೇಹಾ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ.

# ತಮಿಳುನಾಡು ಸರ್ಕಾರದ ಇಬ್ಬರು ಸಚಿವರ ರಾಜೀನಾಮೆ

**ಚೆನ್ನೈ, ಏ.28:** ತಮಿಳುನಾಡು ಸರ್ಕಾರದ ಅರಣ್ಯ ಸಚಿವ ಕೆ. ಪೊನ್ಮುಡಿ ಮತ್ತು ವಿದ್ಯುತ್ ಹಾಗೂ ಅಬಕಾರಿ ಇಲಾಖೆ ಸಚಿವ ವಿ.ಸೆಂಥಿಲ್ ಬಾಲಾಜಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ರಾಜಭವನದ ಪ್ರಕಟಣೆಯ ಪ್ರಕಾರ, ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರು ರಾಜ್ಯಪಾಲ ಆರ್.ಎನ್. ರವಿ ಅವರಿಗೆ ಇಬ್ಬರು ಸಚಿವರ ರಾಜೀನಾಮೆಯನ್ನು ಅಂಗೀಕರಿಸಲು ಮತ್ತು ಮಾಜಿ ಸಚಿವ ಮನೋ ತಂಗರಾಜ್ ಅವರನ್ನು ಸಂಪುಟಕ್ಕೆ ಸೇರಿಸಿಕೊಳ್ಳುವಂತೆ ಶಿಫಾರಸು ಮಾಡಿದ್ದಾರೆ. ರಾಜೀನಾಮೆ ಬಳಿಕ ಪೊನ್ಮುಡಿ ಅವರ ಖಾತೆಯನ್ನು ಹೈನುಗಾರಿಕೆ ಅಭಿವೃದ್ಧಿ ಸಚಿವ ಆರ್.ಎಸ್. ರಾಜಕಣ್ಣಪ್ಪನ್ ಅವರಿಗೆ ನೀಡಲಾಗಿದೆ. ಸಾರಿಗೆ ಸಚಿವ ಎಸ್.ಎಸ್. ಶಿವಶಂಕರ್ ವಿದ್ಯುತ್ ಖಾತೆಯನ್ನು ವಹಿಸಿಕೊಂಡಿದ್ದಾರೆ. ವಸತಿ ಮತ್ತು ನಗರಾಭಿವೃದ್ಧಿ ಸಚಿವ ಎಸ್. ಮುತ್ತುಸಾಮಿ ಅವರು ಸೆಂಥಿಲ್ಬಾಲಾಜಿ ಅವರು ಹೊಂದಿದ್ದ ಅಬಕಾರಿ ಖಾತೆಯ ಜವಾಬ್ದಾರಿ ವಹಿಸಿಕೊಂಡಿದ್ದಾರೆ.



ಪ್ರತ್ಯೇಕ ಪ್ರಕರಣಗಳಿಗೆ ಸಂಬಂಧಿಸಿದಂತೆ ಇಬ್ಬರು ಸಚಿವರನ್ನು ನ್ಯಾಯಾಲಯ ತರಾಟೆಗೆ ತೆಗೆದುಕೊಂಡ ನಂತರ ಅವರು ತಮ್ಮ ಹುದ್ದೆಗಳಲ್ಲಿ ಮುಂದುವರಿಯುವುದು ಸರಿಯಲ್ಲ ಎಂಬ ತೀರ್ಮಾನಕ್ಕೆ ಬಂಧಿದ್ದಾರೆ ಎನ್ನಲಾಗಿದೆ. ಉದ್ಯೋಗಕ್ಕಾಗಿ ಹಣ ಪಡೆದ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ಜಾಮೀನು ಮಂಜೂರು ಮಾಡಿದ ಬೆನ್ನಲ್ಲೇ ಸಂಪುಟಕ್ಕೆ ಮರು ಸೇರ್ಪಡೆಗೊಂಡ ಸೆಂಥಿಲ್ ಬಾಲಾಜಿ ಅವರಿಗೆ ಸುಪ್ರೀಂಕೋರ್ಟ್ ಎರಡು ಆಯ್ಕೆಗಳನ್ನು ನೀಡಿತ್ತು.ಒಂದಾ ತಕ್ಷಣ ಸಚಿವ ಸ್ಥಾನ ತೊರೆದು ಸ್ವಾತಂತ್ರ್ಯ ಅನುಭವಿಸಿ, ಇಲ್ಲ ಮತ್ತೆ ಸಚಿವರಾಗಿ ಜೈಲು ಸೇರಿ ಎಂದು ಖಾರವಾಗಿ ಹೇಳಿತ್ತು. ಸೆಂಥಿಲ್ ಬಾಲಾಜಿ ಸಚಿವ ಸ್ಥಾನದಿಂದ ಕೆಳಗಿಳಿಯುತ್ತಿರುವುದು ಇದು ಎರಡನೇ ಬಾರಿಯಾಗಿದೆ.

ಜೂನ್ 2023ರಲ್ಲಿ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯದಿಂದ ಬಂಧಿಸಲ್ಪಟ್ಟ ನಂತರ ಅವರು ಖಾತೆ ಇಲ್ಲದ ಸಚಿವರಾಗಿ ಮುಂದುವರಿದಿದ್ದರು. ನಂತರ ಫೆಬ್ರವರಿ 12, 2024ರಂದು ಅವರು ಸಂಪುಟಕ್ಕೆ ರಾಜೀನಾಮೆ ನೀಡಿದ್ದರು. ಸೆ.26, 2024 ರಂದು ಸುಪ್ರೀಂ ಕೋರ್ಟ್ ಅವರಿಗೆ ಈ ಪ್ರಕರಣದಲ್ಲಿ ಜಾಮೀನು ನೀಡಿದ ನಂತರ ಮತ್ತೆ ಸಂಪುಟ ಸೇರಿದ್ದರು. ಆದರೆ, ಸುಪ್ರೀಂ ಕೋರ್ಟ್ ಸೆಂಥಿಲ್ ಬಾಲಾಜಿ ಅವರ ಸಂಪುಟ ಸೇರ್ಪಡೆಗೆ ಆಕ್ಷೇಪ ವ್ಯಕ್ತಪಡಿಸಿತ್ತು. ನ್ಯಾಯಮೂರ್ತಿಗಳಾದ ಎ.ಎಸ್. ಓಕಾ ಮತ್ತು ಉಜ್ಜಲ್ ಭುಯಾನ್ ಅವರ ಪೀಠವು ಸೆಂಥಿಲ್‌ಬಾಲಾಜಿ ಸಚಿವರಾಗಿ ಮುಂದುವರಿಯುವುದರಿಂದ ಸಾಕ್ಷಿಗಳ ಮೇಲೆ ಪ್ರಭಾವ ಬೀರಬಹುದು ಮತ್ತು ಅವರು ವಿಚಾರಣೆಯ ಹಳಿ ತಪ್ಪಿಸಬಹುದು ಎಂದು ಏಪ್ರಿಲ್ 23 ರಂದು ಹೇಳಿತ್ತು. ಸೆಂಥಿಲ್ ಬಾಲಾಜಿ ಸಚಿವರಾಗಿ ಮುಂದುವರಿದಲ್ಲಿ ಜಾಮೀನು ಆದೇಶವನ್ನು ಹಿಂಪಡೆಯುತ್ತೇವೆ. ಅವರಿಗೆ ಜಾಮೀನು ನೀಡಿದ ಕ್ರಮ ನಮ್ಮ ಪ್ರಮಾದ ಎಂದು ಒಪ್ಪಿಕೊಳ್ಳಬೇಕಾಗುತ್ತದೆ. ಅವರಿಗೆ ಅರ್ಹತೆಯ ಮೇಲೆ ಜಾಮೀನು ನೀಡಿಲ್ಲ. ಸಂವಿಧಾನದ 21ನೇ ವಿಧಿಯ ವೈಯಕ್ತಿಕ ಸ್ವಾತಂತ್ರ್ಯದ ಮೂಲಭೂತ ಹಕ್ಕಿನ ಪರವಾಗಿ ನ್ಯಾಯಾಲಯ ನಿಂತಿದ್ದರಿಂದ ಜಾಮೀನು ನೀಡಲಾಗಿದೆ ಎಂದು ನ್ಯಾಯಮೂರ್ತಿ ಎ ಎಸ್. ಓಕಾ ಹೇಳಿದ್ದರು.

ಶೈವರು, ವೈಷ್ಣವರು ಮತ್ತು ಮಹಿಳೆಯರ ವಿರುದ್ಧ ನೀಡಿದ ಆಕ್ಷೇಪಾರ್ಹ ಹೇಳಿಕೆಗೆ ಸಂಬಂಧಿಸಿದಂತೆ ಸ್ವಯಂಪ್ರೇರಿತ ರಿಟ್ ಅರ್ಜಿಯನ್ನು ಕೈಗೆತ್ತಿಕೊಳ್ಳುವಂತೆ ಮದ್ರಾಸ್ ಹೈಕೋರ್ಟ್ ತನ್ನ ರಿಜಿಸ್ಟ್ರಿಗೆ ಸೂಚಿಸಿದ ನಂತರ ಪೊನ್ಮುಡಿ ಅವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಭ್ರಷ್ಟಾಚಾರ ಪ್ರಕರಣದಲ್ಲಿ ಪೊನ್ಮುಡಿ ಅವರ ಅಪರಾಧ ಮತ್ತು ಶಿಕ್ಷೆಗೆ ಸುಪ್ರೀಂ ಕೋರ್ಟ್ ತಡೆ ನೀಡಿದ್ದ ಸ್ವಾತಂತ್ರ್ಯವನ್ನು ಅವರು ಪ್ರಾಥಮಿಕವಾಗಿ ದುರುಪಯೋಗಪಡಿಸಿಕೊಂಡಿದ್ದಾರೆ ಎಂದಿದ್ದ ಮದ್ರಾಸ್ ಹೈಕೋರ್ಟ್ ನ್ಯಾಯಮೂರ್ತಿ ಎನ್. ಆನಂದ್ ವೆಂಕಟೇಶ್ ಅವರು, ಪೊನ್ಮುಡಿ ವಿರುದ್ಧ ಸ್ವಯಂಪ್ರೇರಿತ ರಿಟ್ ಅರ್ಜಿಯನ್ನು ಕೈಗೆತ್ತಿಕೊಳ್ಳುವಂತೆ ನಿರ್ದೇಶನ ನೀಡಿದ್ದರು.

ಆಕ್ಷೇಪಾರ್ಹ ಹೇಳಿಕೆ ನೀಡಿದ ಪೊನ್ಮುಡಿ ಅವರನ್ನು ಎಲ್ಲಾ ಸಾಂವಿಧಾನಿಕ ಹುದ್ದೆಗಳಿಂದ ಅನರ್ಹಗೊಳಿಸುವಂತೆ ಕೋರಿ ವಕೀಲರು ಸಲ್ಲಿಸಿದ್ದ ಪಿಐಎಲ್ ಸಂಬಂಧ ಪ್ರತಿಕ್ರಿಯಿಸಲು ತಮಿಳುನಾಡು ಸರ್ಕಾರ ಮತ್ತು ಪೊನ್ಮುಡಿ ಅವರಿಗೆ ಜೂನ್ 5ರವರೆಗೆ ನ್ಯಾಯಾಲಯ ಸಮಯ ನೀಡಿತ್ತು. ಮುಖ್ಯ ನ್ಯಾಯಮೂರ್ತಿ ಕೆ.ಆರ್. ಶ್ರೀರಾಮ್ ಮತ್ತು ನ್ಯಾಯಮೂರ್ತಿ ಮೊಹಮ್ಮದ್ ಶಫೀಕ್ ಅವರು ರಾಜ್ಯ ಸರ್ಕಾರಿ ವಕೀಲರಿಗೆ ಗೃಹ ಕಾರ್ಯದರ್ಶಿ ಪರವಾಗಿ ನೋಟಿಸ್ ನೀಡುವಂತೆ ನಿರ್ದೇಶಿಸಿದ್ದರು. ಜೂನ್ 5ರೊಳಗೆ ನೋಟಿಸ್‌ಗೆ ಪ್ರತಿಕ್ರಿಯೆ ನೀಡುವಂತೆ ಪೊನ್ಮುಡಿ ಅವರಿಗೂ ಆದೇಶಿಸಿದ್ದರು.

ಹೆಚ್ಚಿನ ವಿಚಾರಣೆಗಾಗಿ ಜೂನ್ 19 ರಂದು ಮತ್ತೆ ಪ್ರಕರಣವನ್ನು ಪಟ್ಟಿ ಮಾಡುವಂತೆ ನ್ಯಾಯಾಧೀಶರು ಹೈಕೋರ್ಟ್ ರಿಜಿಸ್ಟ್ರಿಗೆ ಸೂಚಿಸಿದ್ದರು. ಈ ನಡುವೆ ಪೊನ್ಮುಡಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

# ಮಂಗಳೂರು: ರಾಣಿಪುರಾಂತ್ ಸಂಗೀತ್ ಕಾರ್ಯೆಕ್ರಮ್ ಶತಕ್ ಮ್ಯೂಸಿಕಲ್ ಧಮಾಕಾ ಬಾಬ್ ಎರಿಕ್ ಒಝೇರಿಯೊಕ್ ಕೊಂಕಣ್ ಸಂಗೀತ್ ಸಾಗೊರ್ ಬಿರುದು ಪ್ರದಾನ



**ಮುಂಬಯಿ, ಏ.27:** ಲಿಯೊ ಚಾರಿಟೇಬಲ್ ಟ್ರಸ್ಟ್ (ರಿ), ಮಂಗ್ಳುರ್, ರಾಣಿಪುರ ಹಾಚೊ ಗುರ್ಕಾರ್ (ಟ್ರಸ್ಟಿ) ಲಿಯೊ ರಾಣಿಪುರ ಹಾಚೆ ಥಾವ್ನ್ ‘ಸಂಗೀತ್ ಶತಕ್’ ಮ್ಯೂಸಿಕಲ್ ಧಮಾಕಾ-100, ಸಂಗೀತ್ ಸಾಂಜ್ ವ್ಹಡಾ ದಬಾಜೆನ್ ರಾಣಿಪುರ ಇಸ್ಕೊಲಾಚಾ ಮಯ್ದಾನಾರ್ 20-04-2025 ವೆರ್ ಪಾಸ್ಕಾಂಚಾ ಆಯ್ತಾರಾ ಸಾಂಜೆರ್ 6 ವರಾರ್ ಸಾಧರ್ ಜಾಲಿ. ಅಸ್ವಸ್ಥ್ ತಶೆಂ ಅಶಕ್ತ್ ಆನಿ ಕೊಂಕ್ಣಿ ಸಂಗೀತ್ ಕ್ಷೇತ್ರಾಂತ್ ಆಪ್ಲಿ ದೇಣ್ಗಿ ದಿಲ್ಲ್ಯಾ ಸುಮಾರ್ 12 ಕೊಂಕ್ಣಿ ಕಲಾಕಾರಾಂಕ್ ಹ್ಯಾ ವೆಳಿಂ ಸನ್ಮಾನ್ ಕೆಲೊ.

ಕಾರ್ಯಾಚೆಂ ಅಧ್ಯಕ್ಷ್‌ಪಣ್ ಘೆತ್ಲೆಲ್ಯಾ ಮಾ। ಬಾ ಜಯಪ್ರಕಾಶ್ ಡಿ’ಸೋಜ ಹಾಣಿ ಲೊಕಾಕ್ ಉದ್ದೇಶಿಸುನ್ ಅಭಿನಂದನಾಚಿಂ ಆನಿ ಹುರುಪಾಯೆಚಿಂ ಉತ್ರಾಂ ಉಲಯ್ಲೆ. ಮಾತ್ರ್ ನ್ಹಯ್ ಲಿಯೊಚ್ಯಾ ಸಾಧನಾಕ್ ಶಾಭಾಸ್ಕಿ ಉಸಾರ್ಲಿ ಆನಿ ಮುಖ್ಲ್ಯಾ ಸಂಗೀತ್ ಪಯ್ಣಾಕ್ ಸರ್ವ್ ಬರೆಂ ಮಾಗ್ಣೆಂ.

ಬಾಬ್ ಎರಿಕ್ ಒಝೇರಿಯೊ ಹಾಂಕಾಂ ‘ಕೊಂಕಣ್ ಸಂಗೀತ್ ಸಾಗೊರ್’ ಬಾಬ್ ಮೆಲ್ವಿನ್ ಪೆರಿಸ್ ಹಾಂಕಾಂ ‘ಕೊಂಕಣ್ ಮೆಲೊಡಿ ಕಿಂಗ್’ ಆನಿ ಬಾಬ್ ಮ್ಯೆಕ್



ಸೈಮನ್ ಹಾಂಕಾಂ ‘ಕೊಂಕಣ್ ಸಂಗೀತ್ ಶಿಖರ್’ ಬಿರುದ್ ದೀವ್ನ್ ಮಾನ್ ಸನ್ಮಾನ್ ಕೆಲೊ. ತಶೆಂಚ್ ಸಮಾಜ್ ಸೆವೆಂತ್ ಭೋವ್ ಉತ್ತೀಮ್ ಸೆವಾ ದಿಲ್ಲ್ಯಾ ಬಾಬ್ ಸಂತೋಷ್ ಸಿಕ್ವೇರಾ ಹಾಂಕಾ ‘ಸೇವಾ ವೀರ್’ ಬಿರುದ್ ದೀವ್ನ್ ಮಾನ್ ಕೆಲೊ. ಹ್ಯಾ ಶಿವಾಯ್ ಬಾಬ್ ಲೊರೆನ್ಸ್ ಸಲ್ಡಾನಾ, ಮುಂಬಯಿ, ಬಾಬ್ ಕೆನ್ನಿ ಝುಜಾರ್ತೆ ಮುಂಬಯಿ, ಬಾಬ್ ಜೆರೊಮ್ ಮೊರಾಸ್, ಬಾಬ್ ಡೊಲ್ಲಾ ಮಂಗ್ಳುರ್, ಬಾಬ್ ಜೋಸೆಫ್ ಪಿಂಟೊ ಆಂಜೆಲೊರ್, ಬಾಬ್ ಜೆರಿ ಬೊಂದೆಲ್, ಬಾಬ್ ಲ್ಯಾನ್ಸಿ ಹೆನ್ರಿ ಮೊರಾಸ್, ಬಾಯ್ ಐರಿನ್ ಡಿ’ಸೋಜ ಹಾಂಕಾಂ ಹ್ಯಾ ವೆದಿರ್ ಯಾದಿಸ್ತಿಕಾ ಆನಿ ನಗದ್ ದೀವ್ನ್ ಸನ್ಮಾನ್ ಕೆಲೊ.

ತಶೆಂಚ್ ಹ್ಯಾ ಸಂದರ್ಭಿಂ ಬಾಯ್ ಐಶಲ್ ಮೊಂತೇರೊ, ಬಾಯ್ ರೀಶಲ್ ಮೆಲ್ಬಾ ಕ್ರಾಸ್ತಾ, ಬಾಯ್ ಆ್ಯಶಲ್ ಕೇಝಿಯಾ ಡಿ’ಸೋಜ ಹಾಣಿ ಕೊಂಕ್ಣಿ ಸಮಾಜೆಚ್ಯಾ ವಿವಿಧ್ ಕ್ಷೇತ್ರಾನಿ ಕೆಲ್ಲ್ಯಾ ವಿಶೇಷ್ ಸಾಧನಾ ಖಾತಿರ್ ಮಾನ್ ಕೆಲೊ. ತಾಂಚೆ ಸಾಂಗಾತಾ ರವಿರಾಜ್ ಡಿ’ಸೋಜ ಪೆರ್ಮನ್ನೂರು ಹಾಂಕಾಂ ಲಿಯೊ ಟ್ರಸ್ಟಾ ದ್ವಾರಿಂ ಸನ್ಮಾನ್ ಫಾವೊ ಜಾಲೊ.

ಹ್ಯಾ ಸಂಗೀತ್ ಸಾಂಜೆಂತ್ ವಿವಿಧ್ ಪದಾಂ ಘಡ್ನಾರಾಂಚಿಂ 14 ಪದಾಂ ಲೊಕಾ ಮೊಗಾಳ್ ಗಾವ್ಪ್ಯಾಂನಿ ಗಾವ್ನ್ ಲೊಕಾಕ್ ಸಂತೊಸಾಯ್ಲೆಂ. ತಶೆಂಚ್ 13 ಬಾಳ್ ಕಲಾಕಾರಾಂನಿ (ಭುರ್ಗ್ಯಾಂನಿ) ಜಮೊ ಗಾಯಾನ್ ಕೆಲೆಂ. ಲಿಯೊ ರಾಣಿಪುರ, ಮೆಲ್ವಿನ್ ಪೆರಿಸ್, ವಿನ್ಸೆಂಟ್ ಫೆರ್ನಾಂಡಿಸ್ ಕಾಸ್ಸಿಯಾ, ಝೀನಾ ಪಿರೇರ, ಜೋಶಲ್ ಡಿ’ಸೋಜ, ರೋನಿ ಕ್ರಾಸ್ತಾ, ಸಂದೇಶ್ ಬಾಬಣ್ಣ, ಜೇಸನ್ ಲೋಬೋ ಬೊಂದೆಲ್, ವಿಲಿಯಂ ರೆಬೆಲ್ಲೊ ಹಾಣಿಂ ಭೋವ್ ಸುಮಧುರ್ ತಾಳ್ಯಾಂನಿ ಗಾಯ್ಲೆಲಿಂ ಉಡ್ತಿಂ ಪದಾಂ ಲೊಕಾಚಿಂ ಕಾಳ್ಜಾಂ-ಮೊನಾಂ ಜಿಕುಂಕ್ ಸಕ್ಲಿಂ. ಡೊಲ್ಲಾ ಮಂಗ್ಳುರ್ ಆನಿ ಜೆರೊಮ್ ಮೊರಾಸ್ ಹಾಣಿ ಫೊಕಾಣಾಂ ದ್ವಾರಿಂ ಲೊಕಾಕ್ ಹಾಸಯ್ಲೆಂ.

ರಾಜೇಶ್-ರಾಜೇಂದ್ರ ಹಾಂಚೆ ಸುಮಧುರ್ ಸಂಗೀತ್ ಲೊಕಾಕ್ ಭೋವ್ ಖುಶಾಲ್ ಕರುಂಕ್ ಸಕ್ಲೆಂ. ಹ್ಯಾ ಪಂಗ್ಡಾನ್ ರಾಜೇಶ್ ಮೊಯ್ಲಿ (ಕೀ ಬೋರ್ಡ್), ರಾಜೇಂದ್ರ ಮ್ಯೊಲಿ (ಡ್ರಮ್ಮರ್), ರೋಶನ್ ಡಿ’ಸೋಜ, ಬೆಳಾ (ಲೀಡ್ ಗಿಟಾರ್), ವಿಜಯ್ ನೊರೊನ್ಹಾ (ಬಾಸ್ ಗಿಟಾರ್), ಪ್ರಜ್ವಲ್ ಫ್ರೊಂಟೇರಿಯೊ (ಟ್ರಪೆಟ್) ಸಂಗೀತ್ ಸಾಧನಾಂ ದ್ವಾರಿಂ ಸಾಂಗಾತ್ ದಿಲೊ.

ಬಾಯ್ ರೆಮೊನಾ ಇವೆಟ್ ಪಿಬ್ಯಾ ಹೊರ್ಯೆಝುನ್ ಡ್ಯಾನ್ಸ್ ಕ್ರ್ಯೂ ಪಂಗ್ಡಾನ್ ಹರ್ಯೆಕಾ ಪೊದಾಂಕ್ ಭೋವ್ ಉತ್ತೀಮ್ ನಾಚ್ ಪ್ರದರ್ಶನ್ ಕೆಲೊ. ರೋಶನ್ ಕ್ರಾಸ್ತಾ ಕುಲ್ಯೇಕರ್, ಫ್ಲೋಯ್ಡ್ ಡಿ’ಮೆಲ್ಲೊ ಕಾಸ್ಸಿಯಾ, ಪ್ರೀತಮ್ ನೊರೊನ್ಹಾ, ಫಜೀರ್, ರವಿರಾಜ್ ಡಿ’ಸೋಜ ಪೆರ್ಮನ್ನೂರು ಹ್ಯಾ ಚವ್ಗ್ ಕಾರ್ಯನಿರ್ವಾಹಾಕಾ ನಿಂ ಭೋವ್ ಸುಸೂತ್ರ್ ರಿತಿನ್ ಕಾರ್ಯಾಚಿ ಮಾಂಡಾವಳ್ ಕೆಲ್ಲಿ.

ಹ್ಯಾ ಸಂಗೀತ್ ಕಾರ್ಯಾಕ್ ಕುಮೊಕ್ ದಿಲ್ಲ್ಯಾ ದಾನಿಂಕ್ ಯಾದಿಸ್ತಿಕಾ ದೀವ್ನ್ ವೇದಿರ್ ಆಸ್ಲೆಲ್ಯಾ ಮಾನಾಚಾ ಸಯ್ರ್ಯಾನಿಂ ದಾನಿಂಕ್ ಮಾನ್ ಕೆಲೊ. ತ್ಯಾ ಶಿವಾಯ್ ಹ್ಯಾ ಕಾರ್ಯಾಕ್ ಆಧಾರುನ್ ಸುಧಾರ್ಸಿಲ್ಲ್ಯಾ ಸರ್ವಾಂಕ್ ತಶೆಂಚ್ ಸರ್ವ್ ಕಲಾಕಾರಾಂಕ್ ಯಾದಿಸ್ತಿಕಾ ದೀವ್ನ್ ಮಾನ್ ಕೆಲೊ.

ಮಾ। ಬಾ ಸಂತೋಷ್ ಡಿ’ಸೋಜ ಶಂಭೂರು ಫಿರ್ಗಜೆಚೆ ವಿಗಾರ್, ಸಿಸ್ಟರ್ ಉಷಾ ರಾಣಿಪುರ ಕೊವೆಂತಾಚಿ ಸುಪೀರಿಯರ್, ಲಿಯೊ ರಾಣಿಪುರ ಕಾರ್ಯಾಚೊ ಗುರ್ಕಾರ್ ಆನಿ ಲಿಯೊ ಚಾರಿಟೇಬಲ್ ಟ್ರಸ್ಟಾಚೊ ಟ್ರಸ್ಟಿ, ವಿಲಿಯಂ ರೆಬೆಲ್ಲೊ ಕುಲ್ಯೇಕರ್ (ಎನ್‌ಆರ್‌ಐ), ಅರುಣ್ ಮೊಂತೇರೊ ಉಪಾಧ್ಯಕ್ಷ್ ರಾಣಿಪುರ ಗೊವ್ಳಿ ಪರಿಶದ್, ವಿಲ್ಮಾ ಡಿ’ಸೋಜ ಕಾರ್ಯದರ್ಶಿ ರಾಣಿಪುರ ಗೊವ್ಳಿ ಪರಿಶದ್, ಸುನಿಲ್ ಗೋಡ್ವಿನ್ ಮೊಂತೇರೊ ಉದ್ಯಮಿ, ಜೊರ್ಜ್ ಡಿ’ಸೋಜ ಮುಂಬಯಿ, ಗ್ರೆಟ್ಟಾ ಡಿ’ಸೋಜ ಲಿಯೊ ಚಾರಿಟೇಬಲ್ ಟ್ರಸ್ಟಾಚಿ ಟ್ರಸ್ಟಿ, ಮೆಕ್ಸಿಮ್ ಡಿ’ಸೋಜ ರಾಣಿಪುರ ಸೌದಿ ಫ್ರೆಂಡ್ಸ್ ತರ್ಫೆನ್, ಅವಿನಾಶ್ ಫೆರ್ನಾಂಡಿಸ್ ದಿವ್ಯವಾಣಿ ಟೀವಿ ಚಾನಲ್ ಮ್ಹಾಲಕ್ ಹ್ಯಾ ಕಾರ್ಯಾ ವೆಳಿಂ ವೆದಿರ್ ಹಾಜರ್ ಆಸ್‌ಲ್ಲೆ. ರವಿರಾಜ್ ಡಿ’ಸೋಜ ಪೆರ್ಮನ್ನೂರು ಹಾಣಿಂ ಕಾರ್ಯಾಕ್ ಸ್ಪೊನ್ಸರ್ ದಿಲ್ಲ್ಯಾ ತಶೆಂಚ್ ಸರ್ವ್ ರಿತಿನ್ ಪಾಟಿಂಬೊ ಆನಿ ಸಹಕಾರ್ ದಿಲ್ಲ್ಯಾ ಸರ್ವಾಂಚೊ ಉಪ್ಕಾರ್ ಬಾವುಡ್ಲೊ.ಹ್ಯಾ ಸಗ್ಳ್ಯಾ ಕಾರ್ಯಾಚಿ ಫೊಟೊಗ್ರಾಫಿ ಕೆಲ್ಲ್ಯಾ ಹೆರಾಲ್ಡ್ ಅಲ್ಬುಕರ್ಕ್ ಆನಿ ಪಂಗಡ್, ಕಾರ್ಯಾಚೆಂ ಲೈವ್ ಪ್ರಸಾರಣ್ ಪಿಕ್ಸೆಲ್ ವಿಡಿಯೋಗ್ರಾಫಿ ಪಂಗಡ್, ಸೌಂಡ್ಸ್ ಆನಿ ಲೈಟ್ಸ್ ಒದಗಿಲ್ಲ್ಯಾ ಲೋಬೊ ಪ್ರೋ ಸೌಂಡ್ಸ್ ಕಲ್ಲಾಪು. ಕಾರ್ಯಾಚಿ ವೆದಿ ಧರ್ಮಾರ್ಥ್ ಜಾವ್ನ್ ಸಜಯಿಲ್ಲ್ಯಾ ರೋಸ್ ಎರೆಂಜರ್ಸ್ ವಾಮಂಜೂರ್, ಕಾರ್ಯಾಚ್ಯಾ ಅಖೇರಿಕ್ ಕಲಾಕಾರಾಂಕ್ ಆನಿ ವಾಂವ್ಟ್ ಕಾಡ್ಲೆಲ್ಯಾ ಸರ್ವಾಂಕ್ ನ್ಯೂ ಪಿ.ಎಲ್ ಕೇಟರರ್ಸ್ ಹಾಂಕಾ ಣಿ ಅಭಾರ್ ಮಾನ್ಲೊ.




ರಾಷ್ಟ್ರಪತಿ ಭವನದಲ್ಲಿ ನಡೆದ ನಾಗರಿಕ ಹೂಡಿಕೆ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕ್ರಿಕೆಟಿಗ ರವಿಚಂದ್ರನ್ ಅಶ್ವಿನ್ ಅವರಿಗೆ ಕ್ರೀಡಾ ಕ್ಷೇತ್ರದಲ್ಲಿ ಪದ್ಮಶ್ರೀ ಪ್ರಶಸ್ತಿಯನ್ನು ಪ್ರದಾನ ಮಾಡಿದರು.

# ಜೆಎನ್‌ಯೂ: ಎಡರಂಗದ ಮೈತ್ರಿಗೆ ಜಯ

**ನವದೆಹಲಿ,ಏ.28:** ಜವಾಹರಲಾಲ್ ನೆಹರು ವಿಶ್ವವಿದ್ಯಾಲಯ ವಿದ್ಯಾರ್ಥಿ ಒಕ್ಕೂಟದ (ಜೆಎನ್ಯುಎಸ್ಯು) 2024-25ರ ಚುನಾವಣೆಯಲ್ಲಿ ಎಡ ವಿದ್ಯಾರ್ಥಿಗಳ ಸಂಘಟನೆಗಳ ಮೈತ್ರಿಕೂಟ ನಾಲ್ಕು ಉನ್ನತ ಹುದ್ದೆಗಳಲ್ಲಿ ಮೂರನ್ನು ಗೆಲ್ಲುವ ಮೂಲಕ ತನ್ನ ಭದ್ರಕೋಟೆಯನ್ನು ಮತ್ತಷ್ಟು ಬಲಪಡಿಸಿಕೊಂಡಿದೆ. ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ)ಕೂಡ ಪ್ರಮುಖ ಸ್ಥಾನ ಗೆದ್ದಿದೆ. ನಿತೀಶ್ ಕುಮಾರ್ (AISA)ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದು, ಮನೀಷಾ (DSF) ಉಪಾಧ್ಯಕ್ಷ ಸ್ಥಾನವನ್ನು ಗೆದ್ದಿದ್ದಾರೆ ಮತ್ತು ಮಂತೆಹಾ ಫಾತಿಮಾ (DSF) ಪ್ರಧಾನ ಕಾರ್ಯದರ್ಶಿ ಸ್ಥಾನವನ್ನು ತನ್ನದಾಗಿಸಿಕೊಂಡಿದ್ದಾರೆ. ದಶಕಗಳ ಬಳಿಕ ಎಬಿವಿಪಿ ಜಂಟಿ ಕಾರ್ಯದರ್ಶಿ ಹುದ್ದೆಯನ್ನು ಗೆದ್ದುಕೊಂಡಿದೆ. ವೈಭವ್ ಮೀನಾ ವಿಜಯಶಾಲಿಯಾಗಿ ಹೊರಹೊಮ್ಮಿದ್ದಾರೆ.

ಮತಗಳ ಎಣಿಕೆ ವೇಳೆ ನಾಲ್ಕೂ ಕೇಂದ್ರಿಯ ಸ್ಥಾನಗಳಲ್ಲಿ ಎಬಿವಿಪಿ ಅಭ್ಯರ್ಥಿಗಳು ಮುನ್ನಡೆ ಕಾಯ್ದುಕೊಂಡಿದ್ದರು. ಇದು ಎಡ ವಿದ್ಯಾರ್ಥಿ ಒಕ್ಕೂಟದ ಆತಂಕಕ್ಕೆ ಕಾರಣವಾಗಿತ್ತು. ಕೊನೆಗೆ ಎಬಿವಿಪಿ ಒಂದು ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿದೆ. ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಪ್ರಧಾನ ಕಾರ್ಯದರ್ಶಿ ಹುದ್ದೆಗಳ ಸ್ಪರ್ಧೆಯಲ್ಲಿ ಎಬಿವಿಪಿ ಅಂತಿಮವಾಗಿ ಸೋತರೂ, ಅದರ ಸೋಲಿನ ಅಂತರ ಕಡಿಮೆಯಿದ್ದು, ಇದು ಕ್ಯಾಂಪಸ್‌ನಲ್ಲಿ ಗಮನಾರ್ಹ ಬದಲಾವಣೆಯನ್ನು ಸೂಚಿಸುತ್ತದೆ. ಕ್ಯಾಂಪಸ್ ಹಿಂಸಾಚಾರದಿಂದಾಗಿ ವಿಳಂಬಗೊಂಡಿದ್ದ ಚುನಾವಣೆ, ಏ.25ರಂದು ನಡೆದಿತ್ತು. ಶೇ.70ರಷ್ಟು ವಿದ್ಯಾರ್ಥಿಗಳು ಮತದಾನ ಮಾಡಿದ್ದರು. 5,500 ವಿದ್ಯಾರ್ಥಿಗಳು ತಮ್ಮ ಮತ ಚಲಾಯಿಸಿದ್ದು, ಚತುಷ್ಕೋನ ಸ್ಪರ್ಧೆಯಲ್ಲಿ AISA-DSF, ABVP, ಮತ್ತು NSUI-ಫ್ರಾಟರ್ನಿಟಿ ಮೈತ್ರಿಕೂಟವು ಗೆಲುವಿಗೆ ಪೈಪೋಟಿ ನಡೆಸಿತ್ತು



ಜೈಪುರದಲ್ಲಿ ಸೋಮವಾರ ನಡೆದ ರ್ಯಾಲಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಜಸ್ಥಾನದ ಮಾಜಿ ಸಿಎಂ ಅಶೋಕ್ ಗೆಹ್ಲೋತ್, ರಾಜ್ಯ ಘಟಕದ ಅಧ್ಯಕ್ಷ ಗೋವಿಂದ್ ಸಿಂಗ್ ದೋತಾಸ್ರಾ ಮತ್ತು ಕೆ.ಸಿ.ವೇಣುಗೋಪಾಲ್,ಸುಖಜಿಂದರ್ ಸಿಂಗ್ ರಾಂಧವ, ಸಚಿನ್ ಪೈಲಟ್ ಇತರರು ಪಾಲ್ಗೊಂಡಿದ್ದರು.